₹ 4 ಪುಟ: 4 ಸಂಪುಟ: 4 ಸಂಚಿಕೆ 68 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 Issue: 68 Friday, 28, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

# ಕರ್ನಾಟಕದ ವಿಕಾಸವೆಂದರೆ ದೇಶದ ವಿಕಾಸ

## ರಾಜ್ಯದ ಅಭಿವೃದ್ಧಿಗೆ ಪೂರ್ಣ ಬಹುಮತ ನೀಡಿ: ವರ್ಚುವಲ್ ಸಂವಾದದಲ್ಲಿ ಪ್ರಧಾನಿ ಮೋದಿ

ನವದೆಹಲಿ/ಬೆಂಗಳೂರು: ಕರ್ನಾಟಕ ವಿಧಾನಸಭೆ ಚುನಾವಣೆಗೆ ಇನ್ನು ಕೇವಲ 13 ದಿನ ಬಾಕಿ, ರಾಜ್ಯದ ಮೂರೂ ಪಕ್ಷಗಳಿಂದ ಘಟಾನುಘಟಿ ನಾಯಕರ ಅಬ್ಬರದ ಪ್ರಚಾರ ತೀವ್ರವಾಗಿದೆ. ಶತಾಯಗತಾಯ ಮತ್ತೆ ಸಂಪೂರ್ಣ ಬಹುಮತದೊಂದಿಗೆ ಅಧಿಕಾರದ ಗದ್ದುಗೆ ಏರುವ ಆಸೆ ಬಿಜೆಪಿಗೆ.

ಪ್ರಧಾನಿ ನರೇಂದ್ರ ಮೋದಿಯವರ ಚುನಾವಣಾ ಪ್ರಚಾರಕ್ಕೆ ಕರ್ನಾಟಕಕ್ಕೆ ಎಂಟ್ರಿಯಾಗಬೇಕಿದೆ. ಇದಕ್ಕೂ ಮುನ್ನ ಗುರುವಾರ ದೆಹಲಿಯಿಂದಲೇ ವರ್ಚುವಲ್ ಮೂಲಕ ರಾಜ್ಯದ 50 ಲಕ್ಷ ಕಾರ್ಯಕರ್ತರೊಂದಿಗೆ ಸಂವಾದ ನಡೆಸಿದರು. ಮಾತಿನುದ್ದಕ್ಕೂ ಬಿಜೆಪಿಗೆ ಕರ್ನಾಟಕ ಜನತೆ ಏಕೆ ಮತ ಹಾಕಬೇಕು, ಬಿಜೆಪಿಗೆ ಮತ ಹಾಕುವುದರಿಂದ ಕೇಂದ್ರ ಮತ್ತು ರಾಜ್ಯದಲ್ಲಿ ಡಬಲ್ ಎಂಜಿನ್ ಸರ್ಕಾರದಿಂದ ಏನೇನು ಲಾಭವಿದೆ, ಕಾಂಗ್ರೆಸ್ ಜನತೆಗೆ ಏನು ದ್ರೋಹ ಮಾಡಿದೆ ಎಂಬ ಬಗ್ಗೆ ಪ್ರತಿಪಾದಿಸಿದರು. ಬಿಜೆಪಿ ಕಾರ್ಯಕರ್ತರ ಮೂಲಕ ಕರ್ನಾಟಕ ಜನತೆಗೆ ಸ್ಪಷ್ಟ ಸಂದೇಶ ರವಾನಿಸುವ ಪ್ರಯತ್ನವನ್ನು ಪ್ರಧಾನಿ ಮೋದಿ ಇಂದು ಸಂವಾದದಲ್ಲಿ ಮಾಡಿದರು.

ತಿಯೊಂದು ಬೂತ್ನ ಜನರ ಮನಸ್ಸು ಗೆದ್ದರೆ, ಚುನಾವಣೆಯಲ್ಲಿ ಸುಲಭವಾಗಿ ಗೆಲ್ಲಬಹುದು ಬೂತ್ ಮಟ್ಟದಲ್ಲಿ ಕೆಲಸವಾಗಬೇಕು, ಪ್ರತಿ ಬೂತ್ನ ಜನರ ಮನಸ್ಸು ಗೆದ್ದರೆ ಚುನಾವಣೆಯಲ್ಲಿ ಗೆಲ್ಲುವುದು ಸುಲಭ. ಎರಡು ದಿನಗಳ ಬಳಿಕ ನಾನು ಕೂಡ ಕಾರ್ಯಕರ್ತರ ಜತೆ ಸೇರಿ ಜನರ ಆಶೀರ್ವಾದ ಕೇಳಲು ಬರುತ್ತಿದ್ದೇನೆ ಎಂದರು. ಕರ್ನಾಟಕದಲ್ಲಿ ಎಲ್ಲಿ ಹೋಗಿದ್ದೇನೆ ಅಲ್ಲೆಲ್ಲಾ ನನಗೆ ಪ್ರೀತಿ, ಆಶೀರ್ವಾದ ಸಿಕ್ಕಿದೆ, ನನಗೆ ಯಾವುದೇ ಪದವಿ ಇಲ್ಲದಿದ್ದ ಸಂದರ್ಭದಲ್ಲೂ ಕೂಡ ಜನರು ನನಗೆ ಪ್ರೀತಿ ನೀಡಿದ್ದರು. ಈಗಲೂ ಕೂಡ ಬಿಜೆಪಿಗೆ ಜನರು ಆಶೀರ್ವಾದ ಮಾಡುತ್ತಾರೆ ಎನ್ನುವ



ನಂಬಿಕೆ ಇದೆ ಎಂದರು.

ಡಬಲ್ ಎಂಜಿನ್ ಸರ್ಕಾರ ಏಕೆ ಬೇಕು?: ಕಳೆದ 9 ವರ್ಷಗಳಲ್ಲಿ, ಭಾರತವು ಪ್ರಪಂಚದಾದ್ಯಂತದ ಹೂಡಿಕೆದಾರ–ರಿಗೆ ಪ್ರಮುಖ ಕೇಂದ್ರವಾಗಿದೆ. ಡಬಲ್ ಇಂಜಿನ್ ಸರ್ಕಾರದಿಂದಾಗಿ, ಕರ್ನಾಟಕ ಸರ್ಕಾರವು ಇದರಿಂದ ಹೆಚ್ಚಿನ ಲಾಭವನ್ನು ಪಡೆದುಕೊಂಡಿದೆ ಎಂದರು.

ಡಬಲ್ ಇಂಜಿನ್ ಸರ್ಕಾರ ನೇರವಾಗಿ ವಿಕಾಸದ ಕಡೆಗೆ ಹೆಜ್ಜೆ ಇಡುತ್ತದೆ, ಡಬಲ್ ಇಂಜಿನ್ ಸರ್ಕಾರವಿರುವ ರಾಜ್ಯಗಳಲ್ಲಿ ಅಭಿವೃದ್ಧಿ ಕಾರ್ಯ, ಬಡತನ ನಿರ್ಮೂಲನೆ, ಯೋಜನೆಗಳ ಜಾರಿ, ಪ್ರಗತಿ ವೇಗವಾಗಿ ಆಗುತ್ತಿದೆ.

ಯಾವ ರಾಜ್ಯದಲ್ಲಿ ಬಿಜೆಪಿ ಸರ್ಕಾರವಿಲ್ಲ ಆ ರಾಜ್ಯದಲ್ಲಿ ಕೇಂದ್ರದ ಯಾವ ಯೋಜನೆಯನ್ನೂ ಸಫಲವಾಗಲು ಬಿಡುತ್ತಿಲ್ಲ, ಜನರಿಗೆ ಯೋಜನೆ ತಲುಪದೇ ಇರುವಂತೆ ನೋಡಿಕೊಳ್ಳಲಾಗುತ್ತಿದೆ.

ಡಬಲ್ ಇಂಜಿನ್ ಸರ್ಕಾರದಲ್ಲಿ ಪಿಎಂ ಕಿಸಾನ್ ಸಮ್ಮಾನ್ ನಿಧಿ ಅಡಿಯಲ್ಲಿ ರಾಜ್ಯ ಸರ್ಕಾರವು 4 ಸಾವಿರ ರೂಪಾಯಿಗಳನ್ನು ಕೇಂದ್ರ ಸರ್ಕಾರವು 10 ಸಾವಿರ ರೂಪಾಯಿ ನೀಡುತ್ತಿದೆ, ಜನರಿಗೆ ಒಟ್ಟು 10 ಸಾವಿರ ರೂಪಾಯಿ ತಲುಪುತ್ತಿದೆ, ಇದೇ ಡಬಲ್ ಇಂಜಿನ್ ಸರ್ಕಾರದ ಮಹತ್ವ ಎಂದರು. ಇನ್ನೂ ರಾಜ್ಯದಲ್ಲಿ ಬಿಜೆಪಿ ಇಲ್ಲದಿದ್ದರೆ ರಸ್ತೆ,ಸಾರ್ವಜನಿಕ ಸಾರಿಗೆ ಸೇರಿದಂತೆ ಯಾವುದೇ ಯೋಜನೆ ಹಾಕಿಕೊಂಡರೂ ಅದಕ್ಕೆ ಜಮೀನು ಹೊಂದಿಸುವುದರಿಂದ ಹಿಡಿದು ಸಾಕಷ್ಟು ಕಷ್ಟಪಡಬೇಕು.

2014ಕ್ಕೂ ಮುನ್ನ ಆವಾಜ್ ಯೋಜನೆಯಲ್ಲಿ ಮನೆ ನಿರ್ಮಿಸಲು 300ಕ್ಕೂ ಅಧಿಕ ದಿನ ತೆಗೆದುಕೊಳ್ಳುತ್ತಿತ್ತು ಆದರೆ ಈಗ 100 ದಿನಗಳಲ್ಲಿ ಮನೆ ನಿರ್ಮಾಣವಾಗಲಿದೆ.

ಮೊದಲು 70–80 ಸಾವಿರ ರೂ ನೀಡಲಾಗುತ್ತಿತ್ತು ಆದರೆ ಈಗ 1 ಲಕ್ಷದ 30 ಸಾವಿರ ರೂ. ನೀಡಲಾಗುತ್ತಿದೆ.

ಮೊದಲು ನಾಲ್ಕು ಗೋಡೆ ನಿರ್ಮಿಸಿ ಕೊಟ್ಟುಬಿಡುತ್ತಿದ್ದರು ಆದರೆ ಈಗ ಮನೆ ನಿರ್ಮಿಸಿ, ಅದರ ಜತೆಗೆ ಟಾಯ್ಲೆಟ್, ವಿದ್ಯುತ್ ಸಂಪರ್ಕ ಸೇರಿದಂತೆ ಹಲವು ಸೌಲಭ್ಯಗಳನ್ನು ನೀಡಲಾಗುತ್ತದೆ, ಹಾಗೂ ವ್ಯಕ್ತಿಯ ಆಸೆಯಂತೆಯೇ ಮನೆ ನಿರ್ಮಾಣವಾಗುತ್ತಿದೆ.

ವೈದ್ಯಕೀಯ ಕಾಲೇಜುಗಳ ಸಂಖ್ಯೆಯೂ 9 ವರ್ಷಗಳಲ್ಲಿ ಹೆಚ್ಚಾಗಿದೆ ಎಂದು ಬಿಜೆಪಿ ಸರ್ಕಾರ ಸಾಕಷ್ಟು ಕೆಲಸ ಮಾಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು.

## ಸಂಚಾರ ನಿಯಮ ಉಲ್ಲಂಘನೆ

### ಪ್ರಧಾನಿ ಮೋದಿ ವಿರುದ್ದ ದೂರು



ಬೆಂಗಳೂರು : ಕೇರಳದ ಕೊಚ್ಚಿಯಲ್ಲಿ ರೋಡ್ ಶೋನಲ್ಲಿ ಭಾಗಿಯಾಗಿದ್ದ ವೇಳೆ ತಮ್ಮ ಕಾರಿನ ಬಾಗಿಲು ತೆಗೆದುಕೊಂಡು ಸಾಗಿದ್ದ ಪ್ರಧಾನ ಮಂತ್ರಿ ನರೇಂದ್ರ ಮೋದಿ ವಿರುದ್ಧ ತ್ರಿಶೂರಿನ ನಿವಾಸಿಯೊಬ್ಬರು ದೂರು ನೀಡಿದ್ದಾರೆ.

ಚಲಿಸುತ್ತಿರುವ ಕಾರಿನಲ್ಲಿ ಬಾಗಿಲು ತೆರೆದು ನಿಲ್ಲುವುದು ಅಪಾಯಕಾರಿ ಜೊತೆಗೆ ಪ್ರತಿಯೊಬ್ಬರೂ ಕಾನೂನು ಪಾಲನೆ ಮಾಡುವಂತೆ ಸಮಾಜಕ್ಕೆ ಸ್ಪಷ್ಟ ಸಂದೇಶ ರವಾನೆಯಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಜಯಕೃಷ್ಣನ್ ದೂರಿನಲ್ಲಿ ಆಗ್ರಹಿಸಿದ್ದಾರೆ.

ಸಂಚಾರ ನಿಯಮಗಳ ಉಲ್ಲಂಘನೆ ಆರೋಪದಡಿ ಪ್ರಧಾನಿ ವಿರುದ್ಧ ಕೇರಳ ಡಿಜಿಪಿ ಹಾಗೂ ಕೇರಳ ಮೋಟಾರು ವಾಹನ ಇಲಾಖೆಗೆ ಜಯಕೃಷ್ಣನ್ ದೂರು ಕೊಟ್ಟಿದ್ದಾರೆ.

ಏಪ್ರಿಲ್ 24 ಮತ್ತು 25ರಂದು ಎರಡು ದಿನಗಳ ಕೇರಳ ಪ್ರವಾಸ ಕೈಗೊಂಡಿದ್ದ ಪ್ರಧಾನಿ ಮೋದಿ ರೋಡ್ ಶೋ ನಡೆಸಿದ್ದರು. ಈ ಬಗ್ಗೆ ಏಪ್ರಿಲ್ 26ರಂದು ತ್ರಿಶೂರ್ ಮೂಲದ ಜಯಕೃಷ್ಣನ್ ಎಂಬುವರು ರಾಜ್ಯ ಪೊಲೀಸ್ ಮುಖ್ಯಸ್ಥ ಅನಿಲ್‌ಕಾಂತ್ ಹಾಗೂ ಮೋಟಾರು ವಾಹನ ಇಲಾಖೆಗೆ ದೂರು ಸಲ್ಲಿಸಿದ್ದಾರೆ.

## ಭಕ್ತರ ದರ್ಶನಕ್ಕೆ ತೆರೆದ ಬದರಿನಾಥ ದೇವಾಲಯ



ಬದರಿನಾಥ: ಉತ್ತರಾಖಂಡದ ಬದ–ರಿನಾಥ ದೇವಾಲಯದ ದ್ವಾರಗಳನ್ನು ಗುರುವಾರ ತೆರೆಯಲಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಹೆಸರಿನಲ್ಲಿ ಮೊದಲ ಪೂಜೆ ಮಾಡಲಾಯಿತು ಎಂದು ದೇವಾಲಯದ ಸಮಿತಿ ತಿಳಿಸಿದೆ. ಗುರುವಾರ ಬೆಳಗ್ಗೆ 7:10ಕ್ಕೆ ದೇವಾಲಯದ ಬಾಗಿಲು ತೆರೆಯುವಿಕೆಯನ್ನು ವೀಕ್ಷಿಸಲು ಸಾವಿರಾರು ಯಾತ್ರಾರ್ಥಿಗಳು ಹಿಮಾಲಯದ ದೇಗುಲದಲ್ಲಿ ಲಘು ಹಿಮಪಾತ ಮತ್ತು ಮಳೆಯ ನಡುವೆ ಜಮಾಯಿಸಿದ್ದರು. ದೇವಾಲಯ ದ್ವಾರ ತೆಗೆಯುತ್ತಿದ್ದಂತೆ ಭಗವಾನ್ ವಿಷ್ಣುವಿಗೆ ನಮನ ಸಲ್ಲಿಸಿದರು.

ಈ ವೇಳೆ ದೇವಸ್ಥಾನವನ್ನು 15 ಕ್ವಿಂಟಾಲ್ ಹೂವಿನಿಂದ ಅಲಂಕ–ರಿಸಲಾಗಿತ್ತು ಮತ್ತು ಉದ್ಘಾಟನಾ ಸಮಾರಂಭದ ನಂತರ ಅದರ ಪ್ರಧಾನ ಅರ್ಚಕ ಈಶ್ವರಿ ಪ್ರಸಾದ್ ನಂಬೂದಿರಿ ಅವರು ಗರ್ಭಗುಡಿಯಲ್ಲಿ ವಿಶೇಷ ಪೂಜೆ ಸಲ್ಲಿಸಿ, ಎಲ್ಲರಿಗೂ ಒಳಿತಾಗಲಿ ಎಂದು ಪ್ರಾರ್ಥಿಸಿದರು.

ಪ್ರಧಾನಿ ನರೇಂದ್ರ ಮೋದಿಯವರ ಹೆಸರಿನಲ್ಲಿ ಮೊದಲ ಪೂಜೆಯನ್ನು ಮಾಡಲಾಯಿತು ಎಂದು ಬದರಿನಾಥ್–ಕೇದಾರನಾಥ ದೇವಾಲಯ ಸಮಿತಿ ತಿಳಿಸಿದೆ.

## ಗೃಹ ಸಚಿವ ಅಮಿತ್ ಶಾ ವಿರುದ್ಧ ಕಾಂಗ್ರೆಸ್ ದೂರು



ಬೆಂಗಳೂರು: ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಇತರೆ ಬಿಜೆಪಿ ನಾಯಕರ ವಿರುದ್ಧ ಕಾಂಗ್ರೆಸ್ ಹೈಗ್ರೌಂಡ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದೆ.

ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಸೇರಿದಂತೆ ಹಲವು ಕಾಂಗ್ರೆಸ್ ಮುಖಂಡರು ಅಮಿತ್ ಶಾ ವಿರುದ್ಧ ಕೇಸ್ ದಾಖಲಿಸಿದ್ದಾರೆ. ಬಿಜೆಪಿ ನಾಯಕರ ಪ್ರಚೋದನಾತ್ಮಕ ಹೇಳಿಕೆಗಳ ವಿರುದ್ಧ ಕಾಂಗ್ರೆಸ್ ನಾಯಕರು ದೂರು ದಾಖಲಿಸಿದ್ದಾರೆ.

ದೂರು ನೀಡಿದ ಬಳಿಕ ಮಾತನಾಡಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಕರ್ನಾಟಕ ಶಾಂತಿಯ ತೋಟ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಕೋಮು ಘರ್ಷಣೆಯಾಗುತ್ತೆ ಎಂದು ಹೇಳಿದ್ದಾರೆ. ಕಾಂಗ್ರೆಸ್ಗೆ ಮತ ನೀಡಬೇಡಿ ಎಂದು ಹೆದ–ರಿಸುವ ಕೆಲಸ ಮಾಡುತ್ತಿದ್ದಾರೆ. ಇವರು ಕೇಂದ್ರ ಗೃಹ ಸಚಿವರಾಗಿದ್ದಾರೆ. ಇವರ ವಿರುದ್ಧ ಕೂಡಲೇ ಕಾನೂನು ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಚುನಾವಣಾ ಆಯೋಗವೂ ಈ ಬಗ್ಗೆ ಕ್ರಮಕೈಗೊಳ್ಳಬೇಕು. ನಾವು ಪೇಸಿಎಂ ಪೋಸ್ಟರ್ ಅಂಟಿಸುವಾಗ ನಮ್ಮ ವಿರುದ್ಧ ಕ್ರಮಕೈಗೊಂಡಿದ್ದಾರೆ. ಆದರೆ ಅಮಿತ್ ಶಾ ವಿರುದ್ಧ ಯಾಕೆ ಇನ್ನೂ ಕ್ರಮ ಇಲ್ಲ. ನಮ್ಮ ಪಕ್ಷದ ನಾಯಕರ ಮೇಲೆ ತಕ್ಷಣ ದೂರು ದಾಖಲಿಸುತ್ತಾರೆ ಎಂದು ಕಿಡಿಕಾರಿದರು.

## ಬಿಜೆಪಿ ಶಾಸಕಿಯ ಆಯ್ಕೆ ಅಸಿಂಧುಗೊಳಿಸಿದ ಹೈಕೋರ್ಟ್



ಇಟಾನಗರ: ಚುನಾವಣಾ ಅಫಿಡವಿಟ್‌ನಲ್ಲಿ ತಮ್ಮ ಆಸ್ತಿಯ ಮಾಹಿತಿಯನ್ನು ಮರೆಮಾಚಿದ್ದಕ್ಕಾಗಿ ಅರುಣಾಚಲ ಪ್ರದೇಶದ ಬಿಜೆಪಿ ಶಾಸಕಿ ದಸಾಂಗ್ಲು ಪುಲ್ ಅವರ ಆಯ್ಕೆಯನ್ನು ಗುವಾಹತಿ ಹೈಕೋರ್ಟ್ ಅಸಿಂಧುಗೊಳಿಸಿದೆ.

ಹೈಕೋರ್ಟ್‌ನ ಇಟಾನಗರ ಪೀಠ ಏಪ್ರಿಲ್ 25 ರಂದು ನೀಡಿದ ಆದೇಶದಲ್ಲಿ ಪ್ರಜಾಪ್ರತಿನಿಧಿ ಕಾಯ್ದೆಯಡಿ ಅಂಜಾವ್ ಜಿಲ್ಲೆಯ ಹಯುಲಿಯಾಂಗ್ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕಿಯ ಆಯ್ಕೆಯನ್ನು ಅಸಿಂಧು ಎಂದು ಘೋಷಿಸಿದೆ.

ಮಾಜಿ ಮುಖ್ಯಮಂತ್ರಿ ಕಲಿಖೋ ಪುಲ್ ಅವರ ಮೂರನೇ ಪತ್ನಿ ದಸಾಂಗ್ಲು ಪುಲ್(45) ಅವರು 2019 ರಲ್ಲಿ ಎರಡನೇ ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು.

2019 ರಲ್ಲಿ ಪುಲ್ ವಿರುದ್ಧ ಸೋತ ಕಾಂಗ್ರೆಸ್ ಅಭ್ಯರ್ಥಿ ಲುಪಾಲಂ ಕ್ರಿ ಅವರು ಬಿಜೆಪಿ ಅಭ್ಯರ್ಥಿಯ ಆಯ್ಕೆಯನ್ನು ಪ್ರಶ್ನಿಸಿ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದರು.

ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ನಾನಿ ತಗಿಯಾ ಅವರ ಪೀಠ, ಪ್ರಜಾಪ್ರತಿನಿಧಿ ಕಾಯಿದೆ, 1951 ರ ಸೆಕ್ಷನ್ 33 ರ ಪ್ರಕಾರ ನಾಮಪತ್ರವನ್ನುಕ್ರಮಬದ್ಧವಾಗಿ ಸಲ್ಲಿಸಿಲ್ಲ. ಹೀಗಾಗಿ ಸದರಿ ಅಭ್ಯರ್ಥಿಯ ಆಯ್ಕೆಯನ್ನು ಸೆಕ್ಷನ್ 36 (2) (ಬಿ) ಅಡಿಯಲ್ಲಿ ತಿರಸ್ಕರಿಸಲಾಗಿದೆ ಎಂದು ತೀಪು ನೀಡಿದೆ. ಪುಲ್ ಅವರು ಸಲ್ಲಿಸಿದ ಅಫಿಡವಿಟ್‌ನಲ್ಲಿ ಮುಂಬೈನಲ್ಲಿರುವ ತನ್ನ ಗಂಡನ ನಾಲ್ಕು ಮತ್ತು ಅರುಣಾಚಲ ಪ್ರದೇಶದಲ್ಲಿರುವ ಎರಡು ಆಸ್ತಿಗಳನ್ನು ಘೋಷಿಸಿಲ್ಲ. ಕಾರಣ ಅವರ ಉಮೇದುವಾರಿಕೆ ದೋಷಪೂರಿತವಾಗಿದೆ ಎಂದು ಕಾಂಗ್ರೆಸ್ ಅಭ್ಯರ್ಥಿ ಆರೋಪಿಸಿದ್ದರು.

## ಬಿಬಿಎಂಪಿ ಅಧಿಕಾರಿಗೆ ಲೋಕಾಯುಕ್ತ ಶಾಕ್




ಬೆಂಗಳೂರು : ಕರ್ನಾಟಕ ರಾಜ್ಯದ ರಾಜಧಾನಿಗೆ ಬೆಳ್ಳಂಬೆಳಗ್ಗೆ ಕರ್ನಾಟಕ ಲೋಕಾಯುಕ್ತ ಅಧಿಕಾ–ರಿಗಳು ದಾಳಿ ನಡೆಸಿದ್ದಾರೆ. ಕರ್ನಾಟಕ ಲೋಕಾಯುಕ್ತ ಅಧಿಕಾ–ರಿಗಳು ಅಕ್ರಮ ಹಣ ಗಳಿಕೆ ಆರೋಪದ ಹಿನ್ನೆಲೆಯಲ್ಲಿ ಬಿಬಿಎಂಪಿಯ ನಗರ ಯೋಜನೆ ಸಹಾಯಕ ನಿರ್ದೇಶಕ ಗಂಗಾಧರಯ್ಯ ಮನೆಯ ಮೇಲೆ ದಾಳಿ ಮಾಡಿದ್ದಾರೆ.

ಬಿಬಿಎಂಪಿ ಅಧಿಕಾರಿ ಗಂಗಾಧರಯ್ಯ ಮನೆಯಲ್ಲಿ 80 ಲಕ್ಷ ರೂ. ನಗದು ಹಣ, ಸುಮಾರು 50 ಲಕ್ಷ ರೂ. ಬೆಲೆ ಬಾಳುವ ಚಿನ್ನ, ಬೆಳ್ಳಿ ಪತ್ತೆಯಾಗಿದೆ. ಇನ್ನು ಬಿಬಿಎಂಪಿ ಅಧಿಕಾರಿ ಗಂಗಾಧರಯ್ಯ ಅವರ ಹಿನ್ನಲೆ ಒಂದೊಂದಾಗಿ ಹೊರ ಬೀಳುತ್ತಿದೆ.

ಬಿಬಿಎಂಪಿ ಅಧಿಕಾರಿ ಗಂಗಾಧರಯ್ಯ ಮನೆ ಮಾರುತಿ ನಗರ ಬಳಿಯ ಸತ್ಯನಾರಾಯಣ ಲೇಔಟ್‌ನ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಬೆಳಗ್ಗೆ 5 ಗಂಟೆಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಲು ಹೋದರೂ ಕೂಡ 30 ನಿಮಿಷ ಬಾಗಿಲು ತೆರಯದೇ ಲೋಕಾಯುಕ್ತ ಸಿಬ್ಬಂದಿಯನ್ನು ಕಾಯಿಸಿದ್ದಾರೆ. ನಂತರ ಬಾಗಿಲು ತೆರೆದಿದ್ದು, 15 ಮಂದಿ ಲೋಕಾಯುಕ್ತ ಅಧಿಕಾ–ರಿಗಳ ತಂಡದಿಂದ ಶೋಧನೆ ಮಾಡಿದಾಗ ಬೆಳಗ್ಗೆ 9 ಗಂಟೆ ವೇಳೆಗೆ ಮನೆಯಲ್ಲಿ ಕೋಟ್ಯಂತರ ರೂ. ಹಣ ಸಂಗ್ರಹಣೆ ಮಾಡಿಟ್ಟಿರುವುದು ಪತ್ತೆಯಾಗಿದೆ.

## ಬಿಜೆಪಿ ಅಧಿಕೃತ ಅಭ್ಯರ್ಥಿಡಾ. ರವಿ ಪಾಟೀಲ ಭರ್ಜರಿ ಪ್ರಚಾರ



ಬೆಳಗಾವಿ: ಬಿಜೆಪಿ ಅಧಿಕೃತ ಅಭ್ಯರ್ಥಿಯಾದ ಡಾ. ರವಿ ಪಾಟೀಲ ಅವರು ಬರ್ಜರಿ ಪ್ರಚಾರವನ್ನು ನಡೆಸುತ್ತಿದ್ದಾರೆ. ಅವರ ಜೊತೆಗೆ ರಾಜ್ಯ ನಾಯಕರು ಕೂಡ ಸಾತ್ ನೀಡಿದ್ದಾರೆ.

ಬೆಳಗಾವಿಯ ಧರ್ಮನಾಥ ಭವನದಲ್ಲಿ ಸನ್ಮಾನ್ಯ ಶ್ರೀ ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪನವರು

ಬೆಳಗಾವಿ ಉತ್ತರ ಮತಕ್ಷೇತ್ರದ ಜನತೆಯೊಂದಿಗೆ ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಡಾ.ರವಿ ಪಾಟೀಲ ಅವರು ಹೆಚ್ಚಿನ ಅಂತರದಲ್ಲಿ ಗೆಲ್ಲುತ್ತಾರೆ, ಹಾಗೂ ಈ ನಿಟ್ಟಿನಲ್ಲಿ ಕಾರ್ಯಕರ್ತರು ಶ್ರಮಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತವಾರಿ ಸಚಿವರು ಗೋವಿಂದ ಕಾರಜೋಳ ಅವರು ಕೂಡ ಮಾತಮಾಡಿ ಮೋದಿ ಅವರು ಅವರು ಮಾಡಿದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಮೀಸಲಾತಿ ಕುರಿತು ಆನಂದ ವ್ಯೇಕ್ತ ಪಡಿಸಿದರು.

ಮತ್ತು ಈ ಸಂಸದ ಬಸನಗೌಡ ಪಾಟೀಲ ಯತ್ನಾಳ, ಶಾಸಕರು ಹಾಗೂ ಬೆಳಗಾವಿ ಬಿಜೆಪಿ ಮಹಾನಗರ ಜಿಲ್ಲಾಧ್ಯಕ್ಷರು ಅನಿಲ ಬೆನಕೆ,ಸಂಸದೆ ಮಂಗಳಾ ಅಂಗಡಿ, ರಾಜ್ಯ ವಕ್ತಾರ ಎಂ.ಬಿ.ಜಿರ್ಲಿ, ಬಿಜೆಪಿ ಅಭಿಕೃತ ಅಭ್ಯರ್ಥಿ ನಗರ ಸೇವಕರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ಅಭಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಭೆಯನ್ನು ಯಶಸ್ವಿಗೋಳಿಸಿದರು.

## ತಮ್ಮ ಹೇಳಿಕೆಗೆ ಕ್ಷಮೆಯಾಚಿಸಿದ ಮಲ್ಲಿಕಾರ್ಜುನ ಖರ್ಗೆ



ಬೆಂಗಳೂರು: 'ಮೋದಿ ವಿಷದ ಹಾವು ಇದ್ದಂತೆ' ಎಂಬ ಹೇಳಿಕೆ ನೀಡಿದ್ದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಮ್ಮ ಹೇಳಿಕೆಗೆ ಕ್ಷಮೆಯಾಚಿಸಿದ್ದಾರೆ.

ಪ್ರಧಾನಿ ಮೋದಿ ವಿರುದ್ಧದ ಹೇಳಿಕೆ ತೀವ್ರ ವಿವಾದಕ್ಕೆ ಕಾರಣವಾಗುತ್ತಿದ್ದಂತೆ ವಿಷಾದ ವ್ಯಕ್ತಪಡಿಸಿರುವ ಮಲ್ಲಿಕಾರ್ಜುನ ಖರ್ಗೆ, ನನ್ನ ಹೇಳಿಕೆಯಿಂದ ಯಾರಿಗಾದರೂ ನೋವಾಗಿದ್ದರೆ ಕ್ಷಮೆಯಿರಲಿ. ನನ್ನ ಹೇಳಿಕೆ ತಪ್ಪಾಗಿ ಅಥ–ರ್ೈಸಿಕೊಂಡು ನೋವಾಗಿದ್ರೆ ವಿಷಾದ ಎಂದು ತಿಳಿಸಿದ್ದಾರೆ.

ಬಿಜೆಪಿ–ಕಾಂಗ್ರೆಸ್ ನಡುವೆ ಸೈದ್ಧಾಂತಿ–ಕ ಭಿನ್ನಾಭಿಪ್ರಾಯಗಳಿವೆ. ಆರ್ ಎಸ್ ಎಸ್– ಬಿಜೆಪಿ ಸಿದ್ಧಾಂತ ವಿಷಕಾ–ರಿಯಾಗಿದೆ.

ನನ್ನ ಹೇಳಿಕೆ ತಪ್ಪಾಗಿ ಅರ್ಥೈಸಲಾಗಿದೆ. ಯಾವುದೇ ವ್ಯಕ್ತಿ ಬಗ್ಗೆ ಮಾತನಾಡುವುದಾಗಲಿ ಅಥವಾ ಯಾ–ರಿಗೂ ನೋವುಂಟು ಮಾಡುವುದು ನನ್ನ ಉದ್ದೇಶವಾಗಿರಲಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಗದಗದ ಕಾಂಗ್ರೆಸ್ ಸಮಾವೇಶದಲ್ಲಿ ಮಾತನಾಡಿದ್ದ ಮಲ್ಲಿಕಾರ್ಜುನ ಖರ್ಗೆಯವರು, ಮೋದಿ ವಿಷದ ಹಾವು ಇದ್ದಂತೆ ನೆಕ್ಕಿದ್ರೆ ಸತ್ತು ಹೋಗ್ತಾರೆ ಎಂದು ಹೇಳಿದ್ದರು. ಖರ್ಗೆ ಹೇಳಿಕೆ ಬಿಜೆಪಿ ನಾಯಕರ ಆಕ್ರೋಶಕ್ಕೆ ಕಾರಣವಾಗಿತ್ತು.

## 'ಆಪರೇಷನ್ ಕಾವೇರಿ'

### ▪ ಸುಡಾನ್‌ನಿಂದ ದೆಹಲಿಗೆ ವಿಮಾನದಲ್ಲಿ ಆಗಮಿಸಿದ 360 ಭಾರತೀಯರ ಮೊದಲ ತಂಡ



ನವದೆಹಲಿ: ಸಂಘರ್ಷ ಪೀಡಿತ ಸುಡಾನ್‌ನಿಂದ 360 ಮಂದಿ ಭಾರತೀಯರ ಮೊದಲ ತಂಡ ಬುಧವಾರ ಸಂಜೆ ರಾಜಧಾನಿ ದೆಹಲಿಗೆ ಬಂದಿಳಿದಿದೆ.

"ಆಪರೇಷನ್ ಕಾವೇರಿ" ಕಾರ್ಯಾಚರಣೆಯ ಅಡಿಯಲ್ಲಿ ಸಂಘರ್ಷ ಪೀಡಿತ ಸುಡಾನ್‌ನಿಂದ ಭಾರತೀಯರನ್ನು ಸ್ಥಳಾಂತರಿಸುವ ಕಾರ್ಯ ನಡೆಯುತ್ತಿದ್ದು, ಇದರ ಮೊದಲ ತಂಡ ಇಂದು ದೆಹಲಿಗೆ ಬಂದಿಳಿದಿದೆ. "ಆಪರೇಷನ್ ಕಾವೇರಿ" ಎಂಬುದು ಸುಡಾನ್ ಸೇನೆ ಮತ್ತು ಅರೆಸೈನಿಕ ಗುಂಪುಗಳು ಹೋರಾಡುತ್ತಿರುವ ಸುಡಾನ್‌ನಿಂದ ಸಿಲುಕಿರುವ ಭಾರತೀಯ ನಾಗರಿಕರನ್ನು ಸ್ಥಳಾಂತರಿಸಲು ಸರ್ಕಾರವು ಪ್ರಾರಂಭಿಸಿದ ರಕ್ಷಣಾ ಕಾರ್ಯಾಚರಣೆಯಾಗಿದೆ.

ನಿನ್ನೆಯಷ್ಟೇ ಭಾರತೀಯ ನೌಕಾಪಡೆಯ ಹಡಗು ಸುಡಾನ್ ನಿಂದ 278 ನಾಗರಿಕರನ್ನು ರಕ್ಷಿಸಿ ದೇಶಕ್ಕೆ ಕರೆತಂದಿತ್ತು. ಇದಾದ ಒಂದು ದಿನದ ನಂತರ ಭಾರತೀಯ ನಾಗರಿಕರನ್ನು ಹೊತ್ತ ಮೊದಲ ವಿಮಾನ ದೆಹಲಿಗೆ ಬಂದಿಳಿದಿದೆ. ಆ ಮೂಲಕ ಸುಡಾನ್ ನಿಂದ ಭಾರತಕ್ಕೆ ಸುರಕ್ಷಿತವಾಗಿ ಬಂದಿಳಿದವರ ಸಂಖ್ಯೆ 534ಕ್ಕೆ ಏರಿಕೆಯಾಗಿದೆ.

}2ನೇ ಪುಟಕ್ಕೆ

## ಮೇ 10ರಂದು ಕರ್ನಾಟಕ ಜನ 40 ಪರ್ಸೆಂಟ್ ಕಮಿಷನ್ ಸರ್ಕಾರಕ್ಕೆ ಅಂತ್ಯ ಹಾಡಲಿದ್ದಾರೆ: ಪ್ರಧಾನಿಗೆ ಕಾಂಗ್ರೆಸ್ ತಿರುಗೇಟು

ನವದೆಹಲಿ: ಮೇ 10ರಂದು ಬಿಜೆಪಿಯ 40 ಪರ್ಸೆಂಟ್ ಕಮಿಷನ್ ಸರ್ಕಾರವನ್ನು ಕರ್ನಾಟಕದ ಜನರು ಕೊನೆಗೊಳಿಸಲಿದ್ದಾರೆ ಮತ್ತು ಕಾಂಗ್ರೆಸ್ ತಾನು ನೀಡಿರುವ ಎಲ್ಲಾ ಭರವಸೆಗಳನ್ನು ಈಡೇ–ರಿಸುತ್ತದೆ ಎಂದು 'ಕಾಂಗ್ರೆಸ್ ಪಕ್ಷವು ನಿಜವಾದ ಭರವಸೆಗಳನ್ನು ನೀಡಲು ಸಾಧ್ಯವಿಲ್ಲ' ಎಂಬ ಪ್ರಧಾನಿ ನರೇಂದ್ರ ಮೋದಿಯವರ ಟೀಕೆಗೆ ಗುರುವಾರ ತಿರುಗೇಟು ನೀಡಿದೆ.

ಮೇ 10 ರಂದು ನಡೆಯಲಿರುವ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಕರ್ನಾಟಕದ ಬಿಜೆಪಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಮೋದಿ, ಆ ಪಕ್ಷದ ವಾರಂಟಿ ಅವಧಿ ಮುಗಿದಿರುವಾಗ ಕಾಂಗ್ರೆಸ್ ನೀಡಿರುವ ಭರವಸೆಗಳ ಅಥ–ರ್ವೇನು ಎಂದು ಪ್ರಶ್ನಿಸಿದ್ದರು.

ಈ ಟೀಕೆಗೆ ಪ್ರಧಾನಿ ವಿರುದ್ಧ ವಾಗ್ದಾಳಿ ನಡೆಸಿದ ಕಾಂಗ್ರೆಸ್



ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, 'ಅಮಿತ್ ಶಾ ಮತ್ತು ಯೋಗಿ ನಂತರ, ಹತಾಶೆಯಿಂದ ಅತಿರೇಕದ ಕಾಮೆಂಟ್‌ಗಳನ್ನು ಮಾಡುವ ಸರದಿ ಈಗ ಮೋದಿಯವರದ್ದಾಗಿದೆ. ಮೇ 10ರಂದು ಕರ್ನಾಟಕದ ಜನರು ಬಿಜೆಪಿಯ 40 ಪರ್ಸೆಂಟ್ ಕಮಿಷನ್ ಸರ್ಕಾರವನ್ನು ಕೊನೆಗೊಳಿಸುವುದು ಗ್ಯಾರಂಟಿ' ಎಂದು ಟ್ವೀಟ್ ಮಾಡಿದ್ದಾರೆ.

ಕೆಲವು ದಿನಗಳ ನಂತರ ನಾವು ರಾಜಸ್ಥಾನ, ಛತ್ತೀಸಗಢ ಮತ್ತು ಹಿಮಾಚಲ ಪ್ರದೇಶದಲ್ಲಿ ಮಾಡಿದಂತೆ ಕಾಂಗ್ರೆಸ್ ಗ್ಯಾರಂಟಿಗಳನ್ನು ಜಾರಿಗೊಳಿಸಲಾಗುವುದು ಎಂದ ಅವರು, ಕಾಂಗ್ರೆಸ್ ಆಡಳಿತವಿರುವ ರಾಜ್ಯಗಳಲ್ಲಿ ಚುನಾವಣೆಗೆ ಮುಂಚಿತವಾಗಿ ಪಕ್ಷವು ನೀಡಿದ್ದ ಮತ್ತು ಜಾರಿ ಮಾಡಲಾದ ಭರವಸೆಗಳನ್ನು ಪಟ್ಟಿ ಮಾಡಿದ್ದಾರೆ.

ರಾಜಸ್ಥಾನದಲ್ಲಿ ನೀಡಲಾಗಿದ್ದ ಭರವಸೆಗಳನ್ನು ಸರ್ಕಾರ ಈಡೇರಿಸಿದೆ. ಹಳೆಯ ಪಿಂಚಣಿ ಯೋಜನೆ; ಇಂದಿರಾಗಾಂಧಿ ನಗರ ಉದ್ಯೋಗ–125 ದಿನಗಳ ಕೆಲಸ; ಆರೋಗ್ಯದ ಹಕ್ಕು– ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ತುರ್ತು ಚಿಕಿತ್ಸೆ; ಚಿರಂಜೀವಿ ಯೋಜನೆ: ಖಾಸಗಿ ಆಸ್ಪತ್ರೆಗಳಲ್ಲಿ 25 ಲಕ್ಷ ರೂ. ವಿಮೆ ಮತ್ತು 10 ಲಕ್ಷ ರೂ. ಅಪಘಾತ ವಿಮೆ ಯೋಜನೆಗಳನ್ನು ಜಾ–ರಿಗೊಳಿಸಲಾಗಿದೆ ಎಂದು ರಮೇಶ್ ಸರಣಿ ಟ್ವೀಟ್‌ಗಳಲ್ಲಿ ತಿಳಿಸಿದ್ದಾರೆ. ಛತ್ತೀಸ್‌ಗಢ: ಸಾಲ ಮನ್ನಾ: 17.87 ಲಕ್ಷ ರೈತರ 9,270 ಕೋಟಿ ಸಾಲ ಮನ್ನಾ; ರೈತರಿಗೆ ಭತ್ತ ಕ್ವಿಂಟಾಲ್‌ಗೆ 2500 ರೂ.; ರಾಜೀವ್ ಗಾಂಧಿ ಕಿಸಾನ್ ನ್ಯಾಯ ಯೋಜನೆ: ರೈತರಿಗೆ ಎಕರೆಗೆ 9000 ರೂ. ಇನ್‌ಪುಟ್ ಸಬ್ಸಿಡಿ; ಹಳೆ ಪಿಂಚಣಿ ಯೋಜನೆ ಜಾರಿಗೊಳಿಸಲಾಗಿದೆ. ಅದರಂತೆ ಹಿಮಾಚಲ ಪ್ರದೇಶದಲ್ಲಿಯೂ ಕಾಂಗ್ರೆಸ್ ನೀಡಿದ್ದ ಭರವಸೆಗಳನ್ನು ಈಡೇರಿಸಲಾಗಿದೆ ಎಂದಿದ್ದಾರೆ.

ಬಿಜೆಪಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ್ದ ಪ್ರಧಾನಿ ನರೇಂದ್ರ ಮೋದಿ, ಹಿಮಾಚಲ ಪ್ರದೇಶ ಮತ್ತು ರಾಜಸ್ಥಾನದಲ್ಲಿ ಕಾಂಗ್ರೆಸ್ ನೀಡಿದ್ದ ಚುನಾವಣಾ ಭರವಸೆಗಳು ಇನ್ನು ಖಾತರಿಗಳಾಗಿಯೇ ಉಳಿದಿವೆ ಎಂದು ವಾಗ್ದಾಳಿ ನಡೆಸಿದ್ದರು. ಕಾಂಗ್ರೆಸ್ ಎಂದರೆ ಭ್ರಷ್ಟಾಚಾರದ ಗ್ಯಾರಂಟಿ, ಸ್ವಜನಪಕ್ಷಪಾತದ ಗ್ಯಾರಂಟಿಯಾಗಿದ್ದು, ನಿಜವಾದ ಗ್ಯಾರಂಟಿ ಕೊಡಲಾಗದ ಸ್ಥಿತಿಗೆ ತಲುಪಿದೆ. ಕಾಂಗ್ರೆಸ್‌ನ ವಾರಂಟಿ ಮುಗಿದಿದೆ ಎಂಬುದು ನಿಮಗೆ ತಿಳಿದಿದೆ, ಹಾಗಾದರೆ ಅದರ ಖಾತರಿಗಳ ಅರ್ಥವೇನು ಎಂದು ಅವರು ಹೇಳಿದರು.

## ಮಾವನ ಪರ ಪ್ರಚಾರಕ್ಕೆ ಧುಮುಕಿದ ಸಿದ್ದರಾಮಯ್ಯ ಸೊಸೆ



ಮೈಸೂರು: ಜಿಲ್ಲೆಯ ವರುಣಾ ಕ್ಷೇತ್ರದಲ್ಲಿ ಮೊಟ್ಟ ಮೊದಲ ಬಾರಿಗೆ ಸಿದ್ದರಾಮಯ್ಯ ಕುಟುಂಬದಿಂದ ಮಹಿಳೆಯರು ಪ್ರಚಾರಕ್ಕಿಳಿದಿದ್ದಾರೆ. ವಿಪಕ್ಷ ನಾಯಕ ಸಿದ್ದರಾಮಯ್ಯ ಪರ ತಮ್ಮ ಸೊಸೆ ಭರ್ಜರಿ ಪ್ರಚಾರ ನಡೆಸುತ್ತಿದ್ದಾರೆ. ವರುಣಾ ಕ್ಷೇತ್ರದ ತಾಯೂರು ಗ್ರಾಮ ಪಂಚಾಯ್ತಿಯಲ್ಲಿ ಅಬ್ಬರದ ಪ್ರಚಾರ ನಡೆಸಿರುವ ಸೊಸೆ ಸ್ಮಿತಾ ರಾಕೇಶ್ ಸಿದ್ದರಾಮಯ್ಯ ಅವರು, ಮನೆ ಮನೆಗೆ ತೆರಳಿ ಮತಯಾಚಿಸಿದ್ದಾರೆ. ಇದೇ ವೇಳೆ ಈ ಬಾರಿ ಅತಿಹೆಚ್ಚು ಮತಗಳಿಂದ ಮಾವನವರನ್ನ ಗೆಲ್ಲಿಸಿಕೊಡಿ ಎಂದು ಮನವಿ ಮಾಡಿದ್ದಾರೆ. ಈಗಾಗಲೇ ಮಾಜಿ ಸಿಎಂ ಸಿದ್ದರಾಮಯ್ಯ ಪರ ನಟಿ ರಮ್ಯಾ ಹಾಗೂ ನಟ ದುನಿಯಾ ವಿಜಯ್ ವರುಣಾ ಕ್ಷೇತ್ರದಲ್ಲಿ ಪ್ರಚಾರ ನಡೆಸುವುದಾಗಿ ಶಾಸಕ ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ. ಈ ನಡುವೆ ತಾವೂ ಕ್ಷೇತ್ರದಾದ್ಯಂತ ಪ್ರಚಾರ ಕೈಗೊಂಡಿದ್ದು, ಅತ್ಯಧಿಕ ಮತಗಳಿಂದ ಸಿದ್ದರಾಮಯ್ಯ ಅವರು ಗೆಲ್ಲುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಕಳೆದ ಎರಡು ದಿನಗಳ ಹಿಂದೆಯಷ್ಟೇ ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ್ದ ಶಾಸಕ ಯತೀಂದ್ರ ಸಿದ್ದರಾಮಯ್ಯ, ಬಿಜೆಪಿಯವರಿಗೆ ನನ್ನ ತಂದೆ ಕೊಟ್ಟ ಆಡಳಿತದಲ್ಲಿ ತಪ್ಪು ಹುಡುಕಲಾಗುತ್ತಿಲ್ಲ, ಅವರ ಪ್ರಾಮಾಣಿಕತೆ ಬಗ್ಗೆ ಪ್ರಶ್ನೆ ಮಾಡೋಕೆ ಆಗ್ತಿಲ್ಲ. ಹಾಗಾಗಿ ಜಾತಿ ವಿರೋಧಿ ಹಣೆಪಟ್ಟಿ ಕಟ್ಟುವ ಪ್ರಯತ್ನ ಮಾಡ್ತಿದ್ದಾರೆ. ಸಿದ್ದರಾಮಯ್ಯ ಅವರಿಗೆ ಲಿಂಗಾಯತ ವಿರೋಧಿ ಪಟ್ಟ ಕಟ್ಟುವ ಪ್ರಯತ್ನವನ್ನ ಬಿಜೆಪಿ ಮಾಡ್ತಿದೆ. ಅದು ಯಶಸ್ವಿಯಾಗಲ್ಲ ಎಂದು ಹೇಳಿದ್ದರು.

# ‘ಆಪರೇಷನ್ ಕಾವೇರಿ’

}ಮೊದಲನೇ ಪುಟದಿಂದ

ಈ ಬಗ್ಗೆ ಮಾಹಿತಿ ನೀಡಿರುವ ವಿದೇಶಾಂಗ ಸಚಿವ ಎಸ್ ಜೈ ಶಂಕರ್ ಅವರು, ’ಭಾರತವು ನಿಮ್ಮನ್ನು ಮರಳಿ ಸ್ವಾಗತಿಸುತ್ತಿದ್ದು, #OperationKaveri ಮೊದಲ ವಿಮಾನವು ದೆಹಲಿಯನ್ನು ತಲುಪಿದ್ದು, 360 ಭಾರತೀಯ ಪ್ರಜೆಗಳು ತಾಯ್ನಾಡಿಗೆ ಬಂದಿಳಿದಿದ್ದಾರೆ ಎಂದು ಟ್ವೀಟ್ ಮೂಲಕ ಮಾಹಿತಿ ನೀಡಿದ್ದಾರೆ.

ಜೈಶಂಕರ್ ಅವರು ಸೌದಿ ಅರೇಬಿಯಾ ಸಹವರ್ತಿಯೊಂದಿಗೆ ಮಾತನಾಡಿದ ಕೆಲವು ದಿನಗಳ ನಂತರ ತೆರವು ಕಾರ್ಯಾಚರಣೆ ಆರಂಭವಾಗಿದೆ. ಸುಡಾನ್‌ನಲ್ಲಿ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಲು ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ಉನ್ನತ ಮಟ್ಟದ ಸಭೆ ನಡೆಸಿದ್ದರು.

ದೇಶಗಳು ತಮ್ಮ ನಾಗರಿಕರನ್ನು ದೇಶದಿಂದ ಸ್ಥಳಾಂತರಿಸುವ ಕಾರ್ಯದಲ್ಲಿ ತೊಡಗಿರುವಾಗ ಅಮೆರಿಕ ಮತ್ತು ಸೌದಿ ಅರೇಬಿಯಾ ಮಧ್ಯಸ್ಥಿಕೆ ವಹಿಸಿದ ನಂತರ ಸುಡಾನ್‌ನಲ್ಲಿ ಹೋರಾಡುತ್ತಿರುವ ಬಣಗಳು ಸೋಮವಾರ 72 ಗಂಟೆಗಳ ಕದನ ವಿರಾಮಕ್ಕೆ ಒಪ್ಪಿಕೊಂಡವು.

ಭಾರತವು ಜೆಡ್ಡಾದಲ್ಲಿ ಸಾರಿಗೆ ಸೌಲಭ್ಯವನ್ನು ಸ್ಥಾಪಿಸಿದ್ದು, ಸುಡಾನ್‌ನಿಂದ ಸ್ಥಳಾಂತರಿಸಿದ ನಂತರ ಎಲ್ಲಾ ಭಾರತೀಯರನ್ನು ಸೌದಿ ಅರೇಬಿಯಾದ ಕರಾವಳಿ ನಗರಕ್ಕೆ ಕರೆದೊಯ್ಯಲಾಗಿದೆ. ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ವಿ ಮುರಳೀಧರನ್ ಅವರು ಸ್ಥಳಾಂತರಿಸುವ ಕಾರ್ಯಾಚರಣೆಯ ಮೇಲ್ವಿಚಾರಣೆಗಾಗಿ ಜೆಡ್ಡಾದಲ್ಲಿದ್ದಾರೆ. ಇದಕ್ಕೂ ಮೊದಲು, ಶನಿವಾರ ಸೌದಿ ಅರೇಬಿಯಾವು “ಸಹೋದರ ಮತ್ತು ಸ್ನೇಹಪರ” ಮಿತ್ರ ರಾಷ್ಟ್ರಗಳ 66 ನಾಗರಿಕರನ್ನು ಸ್ಥಳಾಂತರಿಸಿದೆ ಎಂದು ಹೇಳಿದೆ, ಇದರಲ್ಲಿ ಸುಡಾನ್‌ನಲ್ಲಿದ್ದ ಕೆಲವು ಭಾರತೀಯರು ಸೇರಿದ್ದಾರೆ ಎಂದು ತಿಳಿದುಬಂದಿದೆ.

# ಪ್ರಧಾನಿ ಮೋದಿ ವಿರುದ್ಧ ಖರ್ಗೆ ಹೇಳಿಕೆಗೆ ಸಿಎಂ ತಿರುಗೇಟು

ಹಾವೇರಿ: ದ್ರೋಹಿಗಳಿಗೆ ಮೋದಿ ಸಿಂಹ ಸ್ವಪ್ನ ಆಗಿದ್ದಾರೆ. ಹೀಗೆ ಮಾತಾಡಿಯೇ ಕಾಂಗ್ರೆಸ್ ಈ ಮಟ್ಟಕ್ಕೆ ಬಂದಿದೆ. ಪ್ರಧಾನಿ ಬಗ್ಗೆ ಅವರ ಮಾತುಗಳು ಕಾಂಗ್ರೆಸ್ ಅವರ ಸಂಸ್ಕೃತಿಯನ್ನು ತೋರಿಸುತ್ತದೆ ಎಂದು ಸಿಎಂ ಬೊಮ್ಮಾಯಿ ಹೇಳಿದರು.

ಗುರುವಾರ ಅವರು ಶಿಗ್ಗಾವಿಯ ಕೋಣನಕೇರಿ ಗ್ರಾಮದಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಾ ಮಲ್ಲಿಕಾರ್ಜುನ ಖರ್ಗೆ ಅವರ “ಮೋದಿ ಅಂದರೆ ವಿಷ ಸರ್ಪ” ಎಂಬ ಮಾತಿಗೆ ಪ್ರತಿಕ್ರಿಯೆ ನೀಡಿದರು.

ಕ್ಷೇತ್ರದ ಎಲ್ಲಾ ಹಳ್ಳಿಹಳ್ಳಿಗಳಿಗೆ ನಾನು ಭೇಟಿ ಕೊಡುತ್ತಿದ್ದೇನೆ. ನಿರೀಕ್ಷೆ ಮೀರಿ ಅಭೂತಪೂರ್ವ ಬೆಂಬಲ ನನಗೆ ಸಿಗುತ್ತಿದೆ. ಇದು ಮುಖ್ಯಮಂತ್ರಿ ಕ್ಷೇತ್ರವಾಗಿದೆ. ಜತೆಗೆ ನಾನು ಮಾಡಿರುವ ಅಭಿವೃದ್ಧಿ ಕೆಲಸಕ್ಕೆ ಅತಿ ಹೆಚ್ಚಿನ ಮತಗಳಿಂದ ಆಯ್ಕೆ ಮಾಡಬೇಕೆಂದು ಜನ ಭಾವನೆ ಹೊಂದಿದ್ದಾರೆ. ಆದ–್ದರಿಂದ ದಾಖಲೆ ಮತಗಳಿಂದ ಜನ ನನ್ನನ್ನು ಆಯ್ಕೆ ಮಾಡುತ್ತಾರೆ ಅನ್ನೋ ವಿಶ್ವಾಸ ನನ್ನಲ್ಲಿದೆ. ಅವರಿಗೆ ನಾನು ಸದಾ ಚಿರಋಣಿ ಆಗಿದ್ದೀನಿ ಎಂದು ಸಿಎಂ ಬೊಮ್ಮಾಯಿ ಹೇಳಿದರು.

**ಎಲ್ಲರಿಗೂ ನಾವು ಗೌರವವನ್ನು ಕೊಡುತ್ತೀವಿ:**

ದ್ರೋಹಿಗಳಿಗೆ, ಭಯೋತ್ಪಾದಕ–ರಿಗೆ, ರಾಷ್ಟ್ರ ವಿರೋಧಿಗಳಿಗೆ, ಶಾಂತಿ ಕದಡುವವರಿಗೆ ಮೋದಿ ಸಿಂಹ ಸ್ವಪ್ನ ಆಗಿದ್ದಾರೆ. ಖರ್ಗೆ ಅವರಿಗೆ ಯಾಕೆ ಹಾಗೆ ಅನ್ನಿಸಿತೋ ಗೊತ್ತಿಲ್ಲ. ದೇಶದ ಪ್ರಧಾನಿಗಳಿಗೆ ಈ ರೀತಿ ಮಾತನಾಡುವುದು ಎಷ್ಟರ ಮಟ್ಟಿಗೆ ಸರಿ? ಹಿಂದೆ ಹೀಗೆಲ್ಲಾ ಮಾತನಾಡಿಯೇ ಕಾಂಗ್ರೆಸ್ ಈ ಮಟ್ಟಕ್ಕೆ ಬಂದಿದೆ. ಕಾಂಗ್ರೆಸ್‌ನವರಿಗೆ ಅಧಿಕಾರದ ಅಮಲು ಇನ್ನೂ ಇಳಿದಿಲ್ಲ. ಹಿಂದಿನ ಅಮಲಿನಲ್ಲಿಯೇ ಇನ್ನೂ ಮಾತನಾಡುತ್ತಿದ್ದಾರೆ. ಕರ್ನಾಟಕ ಸುಸಂಸ್ಕೃತ ನಾಡು. ಎಲ್ಲರಿಗೂ ನಾವು ಗೌರವವನ್ನು ಕೊಡುತ್ತೀವಿ. ಖರ್ಗೆ ಅವರ ವಿಚಾರಗಳ ಬಗ್ಗೆ ವಿರೋಧ ಇದ್ದರೂ ಅವರ ಹಿರಿತನಕ್ಕೆ ನಾವು ಗೌರವ ಕೊಡುತ್ತೀವಿ. ಹಿರಿಯರಾಗಿ ಅವರು ಈ ರೀತಿ ಮಾತನಾಡಿದ್ದು ಖೇದಕರ ಎಂದು ಸಿಎಂ ಬೊಮ್ಮಾಯಿ ಹೇಳಿದರು.



**ಕಾಂಗ್ರೆಸ್ ಗೆ ಸೋಲಿನ ಭೀತಿ ಎದುರಾಗಿದೆ**

ಅಮಿತ್ ಶಾ ಬ್ಯಾನ್ ಮಾಡಬೇಕು ಎಂದು ಡಿಕೆಶಿ ಚುನಾವಣಾ ಆಯೋಗಕ್ಕೆ ಪಿಟಿಷನ್ ಕೊಟ್ಟಿದ್ದಾರೆ. ಕಾಂಗ್ರೆಸ್ ಅವ–ರಿಗೆ ಸೋಲಿನ ಭೀತಿ ಎದುರಾಗಿದೆ. ತಾವು ಸೋಲುತ್ತೀವಿ ಎಂದು ಗೊತ್ತಾದಾಗ ಹೀಗಾಗಿ ಪಿಟಿಷನ್ ಕೊಡೋದು, ಚುನಾವಣಾ ಆಯೋಗಕ್ಕೆ ಹೋಗೋ ಕೆಲಸ ಮಾಡುತ್ತಿದ್ದಾರೆ. ಅದಕ್ಕೆಲ್ಲಾ ಕಾನೂನು ಪ್ರಕಾರ ಏನು ಆಗಬೇಕೋ ಆಗುತ್ತೆ. ಅದರಲ್ಲಿ ಯಾವುದೇ ಸತ್ಯ ಇಲ್ಲ, ಯಾವುದೇ ಹುರುಳಿಲ್ಲ. ಅದು ತಿರಸ್ಕಾರವಾಗುತ್ತೆ ಎಂದು ಸಿಎಂ ಬೊಮ್ಮಾಯಿ ಹೇಳಿದರು.

**ನಮ್ಮ ಕರ್ತವ್ಯ ಮಾಡುತ್ತೇವೆ:**

ಜಿಲ್ಲಾದ್ಯಕ್ಷರಿಗೆ ಸೂಕ್ಷ್ಮ ಅತಿಸೂಕ್ಷ್ಮ ಮತಗಟ್ಟೆಗಳ ವಿಚಾರವಾಗಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪತ್ರ ಬರೆದ ಸಂಬಂಧ ಮಾತನಾಡಿದ ಸಿಎಂ ಬೊಮ್ಮಾಯಿ ಅವರು, ಕಾಂಗ್ರೆಸ್ ಪಕ್ಷ ತೋಳ್ಬಲ, ಹಣಬಲದಿಂದ ಚುನಾವಣೆ ಮಾಡುತ್ತಿರುವುದು ಸ್ಪಷ್ಟವಾಗಿದೆ.

ಹಿಂದೆ ಹಲವಾರು ಸಂದರ್ಭಗಳಲ್ಲಿ ನಮ್ಮ ಕಾರ್ಯಕರ್ತರಿಗೆ ಪೆಟ್ಟು ನೋವು ಸಹ ಆಗಿದೆ. ಅದು ಆಗಬಾರದು ಎಂದು ನಮ್ಮ ರಕ್ಷಣೆಗೆ, ನಮ್ಮ ಮತದಾರರ ಸುರಕ್ಷತೆಗೆ ನಾವು ನಮ್ಮ ಕರ್ತವ್ಯ ಮಾಡಿದ್ದೇವೆ.

ಕಾಂಗ್ರೆಸ್ ಪುಂಡಾಟಿಕೆ ಮಾಡ್ತಾ ನಮ್ಮ ಜನರಿಗೆ ಹಿಂಸೆ ಆಗಬಾರದು ಎಂದು ನಮ್ಮ ರಕ್ಷಣೆಗೆ ಏನು ಮಾಡಬೇಕೋ ಅದನ್ನು ಮಾಡುತ್ತೀವಿ.

ರಾಜಕೀಯ ಪಕ್ಷವಾಗಿ ನಮ್ಮ ಕರ್ತವ್ಯ ನಾವು ಮಾಡುತ್ತಿದ್ದೀವಿ.

ಇದರಲ್ಲಿ ಏನು ಬಹಳ ದೊಡ್ಡ ಅಪರಾಧ ಆಗಿದೆ ಅಂತ ಸಿದ್ದರಾಮಯ್ಯ ಹೇಳುತ್ತಿದ್ದಾರೋ ಗೊತ್ತಿಲ್ಲ. ಚುನಾವಣಾ ಆಯೋಗ ತನ್ನ ಕೆಲಸ ಮಾಡುತ್ತದೆ ಎಂದು ಸಿಎಂ ಬೊಮ್ಮಾಯಿ ಹೇಳಿದರು.

# ಇದೇನಾ ಸಬ್ ಕಾ ಸಾಥ್ ಸಬ್ ಕಾ ವಿಕಾಸ್? ಸಿಎಂ ಬೊಮ್ಮಾಯಿ ಮಹಾನ್ ಕಳ್ಳ ಎಂದು ಕಿಡಿಕಾರಿದ ಸಿದ್ದರಾಮಯ್ಯ



ರಾಯಚೂರು: ವಿಧಾನಸಭಾ ಚುನಾವಣಾ ಅಖಾಡ ಕ್ಷಣ ಕ್ಷಣ–ಕ್ಕೂ ರಂಗೇರುತ್ತಿದ್ದು, ಆಡಳಿತ –ವಿಪಕ್ಷ ನಾಯಕರ ವಾಕ್ಸಮರ ತಾರಕಕ್ಕೇರಿದೆ. ಸಿಎಂ ಬಸವರಾಜ್ ಬೊಮ್ಮಾಯಿ ರಾಜ್ಯದ ಇತಿಹಾಸದಲ್ಲೇ ಕಂಡರಿಯದ ಅತಿ ಭ್ರಷ್ಟ ಸಿಎಂ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ರಾಯಚೂರಿನ ಮಾನ್ವಿಯಲ್ಲಿ ಕಾಂಗ್ರೆಸ್ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಸಿದ್ದರಾಮಯ್ಯ, ಸಿಎಂ ಬಸವರಾಜ್ ಬೊಮ್ಮಾಯಿ ಅತಿ ಭ್ರಷ್ಟ ಸಿಎಂ, ಲಿಂಗಾಯಿತ ಸಮುದಾಯಕ್ಕೆ ಕಳಂಕ ಎಂದು ನಾನು ಹೇಳಿದ್ದೆ. ಆದರೆ ಬಿಜೆಪಿ ನಾಯಕರು ನನ್ನ ಹೇಳಿಕೆಯನ್ನು ತಿರುಚಿ ಲಿಂಗಾಯಿತ ಸಮುದಾಯದವರು ಭ್ರಷ್ಟರು ಎಂದು ನಾನು ಹೇಳಿದ್ದೇನೆ ಎಂದು ಅಪಪ್ರಚಾರ ಮಾಡಿದರು. ನನ್ನ ಹೇಳಿಕೆ ಟ್ವಿಸ್ಟ್ ಮಾಡಲು ಹೋಗಿ ಠುಸ್ ಆಯ್ತು ಎಂದು ಕಿಡಿಕಾ–ರಿದ್ದಾರೆ.

ಈ ಹಿಂದೆ ಇದ್ದ ಲಿಂಗಾಯಿತ ಮುಖ್ಯಮಂತ್ರಿಗಳು ಬಹಳ ಒಳ್ಳೆಯವ–ರಿದ್ದರು. ಆದರೆ ಸಿಎಂ ಬಸವರಾಜ್ ಬೊಮ್ಮಾಯಿ ಮಾತ್ರ ಮಹಾನ್ ಕಳ್ಳ. ಇವರ ಅವಧಿಯಲ್ಲಿ ನಡೆದಷ್ಟು ಭ್ರಷ್ಟಾಚಾರಗಳು ಕರ್ನಾಟಕದ ಇತಿಹಾಸದಲ್ಲಿಯೇ ನಡೆದಿರಲಿಲ್ಲ. ಇಂತಹ ಭ್ರಷ್ಟ ಸರ್ಕಾರವನ್ನು ತೊಗಲಿಸಬೇಕಿದೆ ಎಂದು ಹೇಳಿದರು.

ಇದೇ ವೇಳೆ ಪ್ರಧಾನಿ ಮೋದಿ ವಿರುದ್ಧವೂ ವಾಗ್ದಾಳಿ ನಡೆಸಿದ ಸಿದ್ದರಾಮಯ್ಯ, ಪ್ರಧಾನಿ ಮೋದಿಯವರು ಸಬ್ ಕಾ ಸಾಥ್, ಸಬ್ ಕಾ ವಿಕಾಸ್ ಎಂದು ಹೇಳುತ್ತಾರೆ. ಬಳ್ಳಾರಿಯಲ್ಲಿ ಲಿಂಗಾಯಿತರಿಗೆ ಬಿಜೆಪಿ ಟಿಕೆಟ್ ಕೊಟ್ರಾ? ರಾಜ್ಯದಲ್ಲಿ ಒಬ್ಬನೇ ಒಬ್ಬ ಮುಸ್ಲಿಂ ಗೆ ಬಿಜೆಪಿ ಟಿಕೆಟ್ ಕೊಟ್ಟಿದ್ದಾರಾ? ಅಂದಮೇಲೆ ಸಬ್ ಕಾ ಸಾಥ್, ಸಬ್ ಕಾ ವಿಕಾಸ್ ಎಲ್ಲಿ ಆಗುತ್ತೆ? ಎಂದು ಪ್ರಶ್ನಿಸಿದರು. ಜ

# ಚಾಯ್ ಪೇ ಚರ್ಚಾ ಮೂಲಕ ಚುನಾವಣಾ ಪ್ರಚಾರ ನಡೆಸಿದ ಬಿಜೆಪಿ ಅಭ್ಯರ್ಥಿ ರವಿ ಪಾಟೀಲ್

ಬೆಳಗಾವಿ: ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರ ಭಾರತೀಯ ಜನತಾ ಪಾರ್ಟಿ ಅಧಿಕೃತ ಅಭ್ಯರ್ಥಿ ಡಾಕ್ಟರ್ ರವಿ ಪಾಟೀಲ್ ಬೆಳಗಾವಿ ನಗರದ ರಾಮದೇವ್ ಗಲ್ಲಿ ಕಾರ್ ಪಾರ್ಕಿಂಗ್ ನಲ್ಲಿ ಚಾಯ್ ಪೆ ಚರ್ಚಾ ಕಾರ್ಯಕ್ರಮದ ಮೂಲಕ ನಗರದ ಮುಖ್ಯ ಮಾರುಕಟ್ಟೆಯ ಪರಿಸರದಲ್ಲಿ ಪ್ರಚಾರ ಕಾರ್ಯ ಕೈಗೊಂಡರು.

ಈ ಸಂದರ್ಭದಲ್ಲಿ ಡಾ ರವಿ ಪಾಟೀಲ್ ನಗರದ ವರ್ತಕರೊಂದಿಗೆ ಸುದೀರ್ಘಕಾಲ ಸಂವಹನ ನಡೆಸಿ ಅವರ ಸಮಸ್ಯೆಗಳನ್ನು ಕುಲಂಕಷವಾಗಿ ಆಲಿಸಿದರು. ಮೂಲಭೂತ ಸೌಕರ್ಯಗಳ ಕೊರತೆಯಿಂದ ತಮಗಾಗಿರುವ ತೊಂದರೆಯನ್ನು ಜನರು ವಿವರಿಸಿದರು.

ನಗರದ ಸರ್ವತೋಮುಖ ಅಭಿವೃದ್ಧಿಗೆ ಹಾಗೂ ಹೆಚ್ಚಿನ ವ್ಯಾಪಾರ ವಹಿವಾಟು ನಡೆಸಲು ಅನುಕೂಲವಾಗುವಂತೆ ನಗರದ ಅಭಿವೃದ್ಧಿಗೆ ಯೋಜನೆಗಳನ್ನು ರೂಪಿಸಬೇಕು ಎಂದು ವರ್ತಕರು ಒತ್ತಾಯಿಸಿದರು. ವಾರ್ಡ್ ನಂಬರ್ ನಾಲ್ಕರ ಕಾರ್ಪೊರೇಟರ್ ಜಯತೀರ್ಥ ಸೌಂದತ್ತಿ, ಶಂಕರ ಪಾಟೀಲ್, ಶೈಲೇಶ್ ಕಾವೇಡಿಯ, ಮಹೇಂದ್ರ ಪೊರ್ವಾಲ್, ಸುಧೀರ್ ಪೊರ್ವಾಲ್, ವಿಜಯ್ ಭದ್ರಾ,



ಬಾಹುಬಲಿ ದೊಡ್ಡಣ್ಣವರ್, ವಿಕ್ರಂ ಪುರೋಹಿತ್, ರಾಹುಲ್ ಫಾರ್ವಲ್, ರವಿ ಚೋಬಾರಿ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಅಭ್ಯರ್ಥಿ ಡಾ. ರವಿ ಪಾಟೀಲ್ ವರ್ತಕರ ಆಶೋತ್ತರಗಳಿಗೆ ಸ್ಪಂದಿಸಲು ತಾವು ಪ್ರತಿ ತಿಂಗಳು ಅವರೊಂದಿಗೆ ಸಂವಾದ ನಡೆಸಿ ಅದರಂತೆ ಕಾರ್ಯಪ್ರವೃತ್ತರಾಗುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುವುದಾಗಿ ಭರವಸೆ ನೀಡಿದರು.

ಬೆಳಗ್ಗೆ ವರ್ತಕ ಸಮುದಾಯವನ್ನು ಭೇಟಿಯಾದ ಬಳಿಕ ನಗರದ ಬಸವ ಕಾಲೋನಿಯ ಮುಖ್ಯ ರಸ್ತೆಯಲ್ಲಿ ಪ್ರಚಾರ ಮಾಡಿದ ರವಿ ಪಾಟೀಲ್, ಮನೆ ಮನೆಗೆ ತೆರಳಿ ಮೇ 10ರ ಚುನಾವಣೆಯಲ್ಲಿ ತಮ್ಮ ಮತ ಚಲಾಯಿಸಬೇಕು ಎಂದು ವಿನಂತಿಸಿದರು. ಬೆಳಗಾವಿ ನಗರದಲ್ಲಿ ಅಭಿವೃದ್ಧಿ ಕಾರ್ಯಗಳು ಮುಂದುವ–ರಿಯ ಬೇಕಾದರೆ ತಮ್ಮನ್ನು ಬಹುಮತದಿಂದ ಆರಿಸಿ ತರಬೇಕೆಂದು ಕೋರಿದರು.

ಧರ್ಮನಾಥ್ ಭವನದಲ್ಲಿ ನಡೆದ ಭಾರತೀಯ ಜನತಾ ಪಕ್ಷದ ಸಮಾವೇಶದಲ್ಲಿ ಪಾಲ್ಗೊಂಡರು. ಈ ಮಧ್ಯೆ ಡಾ. ರವಿ ಪಾಟೀಲ್ ಅವರ ಪತ್ನಿ ಸುನೀತಾ ಪಾಟೀಲ ನಗರದ ವೈಭವ ನಗರದ ವಿವಿಧ ಬಡಾವಣೆಗಳಲ್ಲಿ ಮನೆ ಮನೆಗೆ ತೆರಳಿ ಪ್ರಚಾರ ಕೈಗೊಂಡರು. ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಗೆ ಬಿಜೆಪಿ ಪಕ್ಷದ ಅಭ್ಯರ್ಥಿಯನ್ನು ಆರಿಸಿ ತರುವ ಮಹತ್ವವನ್ನು ಹೇಳಿದರು. ಬಸವ ಕಾಲೋನಿ ವೈಭವ ನಗರ ಹಾಗೂ ಸುತ್ತಮುತ್ತಲಿನ ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇದ್ದು, ವಿಶೇಷವಾಗಿ ಪ್ರಯಾಣಕ್ಕೆ ಬಸ್ ಸೌಕರ್ಯದ ಕೊರತೆಯಿರುವುದು ಗಮನಕ್ಕೆ ಬಂದಿದೆ. ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

# ಪ್ರಧಾನಿ ಮೋದಿ ವ್ಯಂಗ್ಯದ ಮಾತಿಗೆ ಟಾಂಗ್ ನೀಡಿದ ಡಿಕೆ.ಶಿವಕುಮಾರ್

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಹತಾಶರಾಗಿ ಹೇಳಿಕೆ ಕೊಡುತ್ತಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಟಾಂಗ್ ನೀಡಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿ.ಕೆ.ಶಿವಕುಮಾರ್, ಕಾಂಗ್ರೆಸ್



ಗ್ಯಾರಂಟಿ ಯೋಜನೆಗಳ ಬಗ್ಗೆ ವ್ಯಂಗ್ಯವಾಡಿದ್ದ ಪ್ರಧಾನಿ ನರೇಂದ್ರ ಮೋದಿ ಹೇಳಿಕೆಗೆ ಪ್ರತಿಕ್ರಿಯಿಸಿ, ನಮ್ಮ ಗ್ಯಾರಂಟಿ ಯೋಜನೆಗಳ ಬಗ್ಗೆ ಅವರು ಆತಂಕ ಪಡುವುದು ಬೇಡ. ಈ ಬಾರಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತೆ, ಯೋಜನೆ ಜಾರಿಗೆ ತರುತ್ತೇವೆ ಎಂದು ಹೇಳಿದರು.

ಹತಾಶರಾಗಿ ಪ್ರಧಾನಿ ಮೋದಿ, ಅಮಿತ್ ಶಾ ಹೇಳಿಕೆ ಕೊಡುತ್ತಿದ್ದಾರೆ. ಹೇಗಿದ್ದರೂ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರಲ್ಲ ಎಂಬುದು ಅವರಿಗೆ ಗೊತ್ತಾಗಿದೆ. ನಮ್ಮ ಗ್ಯಾರಂಟಿ ಯೋಜನೆ ಬಗ್ಗೆ ಅವರು ಆತಂಕ ಪಡುವುದು ಬೇಡ, ನಮ್ಮ ಸರ್ಕಾರ ಬಂದ ತಕ್ಷಣ ಗ್ಯಾರಂಟಿ ಯೋಜನೆ ಈಡೇರಿಸುತ್ತೇವೆ. ಇಲ್ಲದೇ ಹೋದರೆ ನಾವು ಮುಂದೆ ವೋಟ್ ಕೇಳೋದಿಲ್ಲ ಎಂದು ಹೇಳುವ ಮೂಲಕ ತಿರುಗೇಟು ನೀಡಿದ್ದಾರೆ.

# ಮೀನು ಮುಟ್ಟಿದ್ದೇನೆ ಎಂದು ದೇವಸ್ಥಾನ ಪ್ರವೇಶಿಸಲು ನಿರಾಕರಿಸಿದ ರಾಹುಲ್ ಗಾಂಧಿ





ಉಡುಪಿ: ಕಾಪು ತಾಲ್ಲೂಕಿನ ಉಚ್ಚಿಲದಲ್ಲಿ ಮೀನುಗಾರರ ಸಂವಾದ ಕಾರ್ಯಕ್ರಮದಲ್ಲಿ ಮೀನುಗಾರ ಮಹಿಳೆಯೊಬ್ಬರು ರಾಹುಲ್ ಗಾಂಧಿಗೆ ಅಂಜಲ್ ಮೀನನ್ನು ಉಡುಗೊರೆಯಾಗಿ ನೀಡಿದರು.

ಮೀನು ಸ್ವೀಕರಿಸಿ ಮಹಿಳೆಯ ಜತೆ ಫೋಟೊ ತೆಗೆಸಿಕೊಂಡ ರಾಹುಲ್ ಬಳಿಕ ಪಕ್ಕದಲ್ಲಿಯೇ ಇದ್ದ ಮಹಾಲಕ್ಷ್ಮೀ ದೇವಸ್ಥಾನದ ಒಳಗೆ ಹೋಗಲು ನಿರಾಕರಿಸಿದರು.


ಸ್ಥಳೀಯ ಮುಖಂಡರು ದೇವಸ್ಥಾನದ ಒಳಗೆ ಬರುವಂತೆ ಮನವಿ ಮಾಡಿದಾಗ ಮೀನು ಮುಟ್ಟಿದ್ದೇನೆ ದೇವಸ್ಥಾನದ ಒಳಗೆ ಬರುವುದಿಲ್ಲ ಎಂದು ತಿಳಿಸಿದರು. ಬಳಿಕ ದೇಗುಲದ ಪ್ರಾಂಗಣದಲ್ಲಿಯೇ ಅರ್ಚಕರು ರಾಹುಲ್ ಗಾಂಧಿ ಅವರನ್ನು ಗೌರವಿಸಿದರು.

# ಶಸ್ತ್ರಕ್ರಿಯೆ ಚಿಕಿತ್ಸೆಗೆ ಪರ್ಯಾಯವಾದ ಇಂಟರ್ವೆನ್ಷನಲ್ ರೇಡಿಯಾಲಜಿ ಎಂಬೋಲೈಸೇಶನ್ ಚಿಕಿತ್ಸೆ




**ಅನಂತ ಪಪ್ಪು**



ಇತ್ತೀಚಿನ ಆಧುನಿಕ ಯುಗದಲ್ಲಿ ಹೊಸ ಆವಿಷ್ಕಾರಗಳೊಂದಿಗೆ ಜಗತ್ತು ವೇಗದಲ್ಲಿ ಕ್ರಮಿಸುತ್ತಿದೆ. ಅದರಂತೆ ಭಾರತವು ವಿಜ್ಞಾನ ಮತ್ತು ಸುಧಾರಿತ ತಂತ್ರಜ್ಞಾನ ಕ್ಷೇತ್ರದಲ್ಲಿ ವೇಗವಾಗಿ ಅಭಿವೃದ್ಧಿ ಹೊಂದಿದ ದೇಶವಾಗಿದೆ. ಆಧುನಿಕ ಜನರ ಅಗತ್ಯತೆಗಳನ್ನು ಪೂರೈಸುವಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಂದು ಪ್ರಮುಖ ಪಾತ್ರ ವಹಿಸುತ್ತಿದ್ದು, ವೈದ್ಯಕೀಯ ಕ್ಷೇತ್ರದಲ್ಲು ಸಾಕಷ್ಟು ಬದಲವಣೆಗಳಾಗಿದ್ದು ಆಸ್ಪತ್ರೆಗಳು ಫೈವ್ ಸ್ಟಾರ ಹೊಟೇಲಗಳಂತೆ ಗೋಚರಿಸುತ್ತಿವೆ.

ಈ ಹಿಂದೆ ಅನಾರೋಗ್ಯ, ಶಸ್ತ್ರಚಿಕಿತ್ಸೆ ಆರೈಕೆಗಳಿಗಾಗಿ ತಿಂಗಳುಗಟ್ಟಲೆ ಆಸ್ಪತ್ರೆಯಲ್ಲಿ ಉಳಿಯುವ ದಿನಗಳಿದ್ದವು. ಈಗ ತಾಂತ್ರಿಕತೆ ಬೆಳೆದಂತೆ ಚಿಕಿತ್ಸೆ ಹಾಗೂ ಶಸ್ತ್ರಚಿಕಿತ್ಸೆ ಮತ್ತು ಔಷದೋಪಚಾರಗಳಲ್ಲಿ ವೈದ್ಯಕೀಯ ಕ್ಷೇತ್ರ ಕ್ಷಿಪ್ರಗತಿಯಲ್ಲಿ ಬದಲಾವಣೆ ಕಂಡಿದೆ.

ಈ ಹಿಂದೆ ಸುದೀರ್ಘ ಅವಧಿಯ ಶಸ್ತ್ರಚಿಕಿತ್ಸೆಗಳಲ್ಲಿ ಅಪಾಯದ ಸಂಬವ ಹೆಚ್ಚಿತ್ತು. ಈಗ ತಾಂತ್ರಿಕ ಬದಲಾವಣೆಗಳಿಂದ ಶಸ್ತ್ರಚಿಕಿತ್ಸೆಯ ಕಾಲಾವಧಿಯನ್ನು ಕಡಿಮೆಗೊಳಿಸಿ, ಚಿಕಿತ್ಸೆಯನ್ನು ಹೆಚ್ಚು ನಿಖರ, ದೋಷರಹಿತಗೊಳಿಸಲಾಗಿದೆ. ಇತ್ತೀಚೆಗೆ ನಾನು ಬೆಳಗಾವಿಯ ಇಂಟರ್ವೆನ್ಷನಲ್ ರೇಡಿಯಾಲಜಿಸ್ಟ್, ಎಂಡೋವಾಸ್ಕುಲರ್ ತಜ್ಞವೈದ್ಯ ಡಾ.ಅಭಿನಂದನ ರೂಗೆ ಅವರನ್ನು ಭೆಟ್ಟಿಯಾಗಿದ್ದೆ. ಅವರು ವೆರಿಕೋಸ್ ವೇನ್ಸ ರೋಗ ಪೀಡಿತರಿಗೆ ಆಧುನಿಕವಾಗಿ ಆವಿಷ್ಕಾರಗೊಂಡ ಸುರಕ್ಷಿತವಾದ ಲೇಜರ್ ಮತ್ತು ಎಂಬುಲೈಸೇಶನ್ ಚಿಕಿತ್ಸೆ ಕುರಿತು ಮಾಹಿತಿ ಹಾಗೂ ಸಲಹೆಗಳನ್ನು ನೀಡಿದ್ದಾರೆ. ಅದನ್ನು ಲೇಖನ ರೂಪದಲ್ಲಿ ಜನಸಾಮಾನ್ಯರಲ್ಲಿ ಅರಿವು, ಜಾಗೃತಿ ಮೂಡಿಸುವ ಪ್ರಯತ್ನ ನನ್ನದು.

ಡಾ. ಅಭಿನಂದನ್ ಹೇಳುವಂತೆ ಇತ್ತೀಚಿನ ದಿನಗಳಲ್ಲಿ ವೆರಿಕೋಸ್ ವೇನ್ಸ್, ಮಧುಮೇಹ ರಕ್ತದೊತ್ತಡದಂತೆ ಸಾಮಾನ್ಯವಾದ ಖಾಯಿಲೆಯಾಗಿ ಪರಿಣಮಿಸುತ್ತಿದೆ. ಭಾರತದಲ್ಲಿ ಶೇಕಡಾ 30% ರಿಂದ 40% ರಷ್ಟು ಜನರು ವೆರಿಕೋಸ್ ವೇನ್ಸ್ ರೋಗದಿಂದ ಬಳಲುತ್ತಿದ್ದಾರೆ. ಅಲ್ಲದೆ ಪ್ರತಿ ವರ್ಷ ಶೇಕಡಾ 5% ರಷ್ಟು ಜನರು ಈ ಖಾಯಿಲೆಗೆ ಸೇರ್ಪಡೆಯಾಗುತ್ತಿದ್ದಾರೆ.

ಇದಕ್ಕೆಲ್ಲಾ ಕಾರಣ ಅತಿಯಾಗಿ ನಿಂತಿಕೊಂಡೆ ಅಥವಾ ಕುಳತುಕೊಂಡೆ ಕೆಲಸ ಮಾಡುವದು. ವ್ಯಾಯಾಮ ರಹಿತ ಅಶಿಸ್ತಿನ ಜೀವನ ಶೈಲಿ ಅತಿಯಾದ ತೂಕ, ಅತಿಯಾದ ದೂಮಪಾನ, ಅತಿ ಮಾಂಸ ಸೇವನೆ, ಕಲಬರಿಕೆ ಆಹಾರ, ಮಧ್ಯಪಾನ ಸೇವನೆ ಮುಂತಾದ ಕಾರಣಗಳಿಂದ ವೆ–ರಿಕೋಸ್ ವೇನ್ಸ್ ತೋಂದರೆ ಬರಬಹುದಾಗಿದೆ.

ದೇಹದಲ್ಲಿ ಶುದ್ಧ ರಕ್ತವು ಚಿಡಿಣಜಡಿಥಿ ಮೂಲಕ ಹೃದಯದಿಂದ ದೇಹದ ಇತರ ಭಾಗಕ್ಕೆ ಆಮ್ಲಜನಕ ಹಾಗೂ ಜೀವ ಸತ್ವವನ್ನು ದೇಹದ ಅಂಗಾಂಗ ಹಾಗೂ ಜೀವಕೋಶಗಳಿಗೆ ತಲುಪಿಸಿ ಅಲ್ಲಿರುವ ಕಲ್ಮಶ ಹಾಗೂ ಕಾರ್ಬನ್ ಡೈ ಆಕ್ಸೈಡ್‌ನ್ನು ವೇಯ್ನ್ ನ ಮೂಲಕ ಹೃದಯಕ್ಕೆ ವಾಪಸು ತೆಗೆದುಕೊಂಡು ಹೋಗಿ ಪುನ: ಶುದ್ಧಗೊಂಡು ಚಿಡಿಣಜಡಿಥಿ ಮೂಲಕ ಪುನ: ಅಂಗಾಂಗಕ್ಕೆ ತಲುಪುತ್ತದೆ. ಈ ಕಾರ್ಯವು ನಮ್ಮ ಹೃದಯವು ಎಷ್ಟು ಬಾರಿ ಬಡಿದುಕೊಳ್ಳುತ್ತದೋ ಅಷ್ಟು ಬಾರಿ ಈ ಕಾರ್ಯ ನಿರಂತರವಾಗಿ ನಡೆಯುತ್ತಿರುತ್ತದೆ.

Artery ಯಿಂದ ರಕ್ತವು ಸರಾಗವಾಗಿ ಕೆಳಗೆ ಹ–ರಿದು ಬರುವುದು ಆದರೆ ಅಶುದ್ಧ ರಕ್ತವು ಕಾಲಿನಿಂದ ವೇಯ್ನ್ ನ ಮೂಲಕ ಹೃದಯಕ್ಕೆ ವಾಪಸ್ಸು ಹೋಗಲು ಗುರುತ್ವಾಕರ್ಷಣ ಬಲದಿಂದಾಗಿ ಕಷ್ಟಕರ. ಅದಕ್ಕಾಗಿ ಕಾಲಿನಿಂದ ತೊಡೆ ಸಂದಿನ ವರೆಗೆ ಅಲ್ಲಲ್ಲಿ ಕವಾಟ ರಚನೆ ಇದ್ದು, ಇದು ರಕ್ತವು ರಕ್ತನಾಳದಿಂದ ವಾಪಸ್ಸು ಹ–ರಿಯದಂತೆ ತಡೆದು, ಸಂಪೂರ್ಣ ರಕ್ತವು ಹೃದಯಕ್ಕೆ ವಾಪಸ್ಸು ಹರಿಯಲು ಸಹಾಯ ಮಾಡುವುದು. ಈ ಕವಾಟದ ಅಸಮರ್ಪಕ ಕಾರ್ಯ ವೈಖರಿಯಿಂದಲೇ ವೆರಿಕೋಸ್ ವೇಯ್ನ್ ತೊಂದರೆ ಪ್ರಾರಂಭವಾಗುವುದು. ಹಾಗೂ ಇತರ ಖಾಯಿಲೆಯಿಂದಲೂ ಬರಬಹುದಾಗಿದೆ.



ಡಾ.ಅಭಿನಂದನ ರೂಗೆ

ರಕ್ತವು ರಕ್ತನಾಳಗಳ ಮೂಲಕ ಹರಿದ ನಂತರ ಕವಾಟಗಳು ಸರಿಯಾಗಿ ಮುಚ್ಚುವುದಿಲ್ಲ. ಆದ್ದರಿಂದ ರಕ್ತವು ರಕ್ತನಾಳಗಳಲ್ಲಿ ಮತ್ತೆ ಹಿಂದಕ್ಕೆ ಹರಿಯುವುದನ್ನು ತಡೆಯಲು ಆಗುವುದಿಲ್ಲ. ಇದರಿಂದ ರಕ್ತನಾಳಗಳಲ್ಲಿ ರಕ್ತ ಶೇಖರಣೆಯಾಗುವುದಕ್ಕೆ ದಾರಿಯಾಗುತ್ತದೆ. ಈ ಕಾರಣದಿಂದಾಗಿ ರಕ್ತನಾಳಗಳು ಊದಿಕೊಳ್ಳುತ್ತವೆ. ಮತ್ತು ಡಿಯೋಕ್ಸಿಜೆನೇಟೆಡ್ ರಕ್ತದ ಬಣ್ಣವಾದ ನೀಲಿ–ನೇರಳೆ ಬಣ್ಣಕ್ಕೆ ತಿರುಗುತ್ತದೆ.

ಉಬ್ಬಿರುವ ರಕ್ತನಾಳಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಾ ಹೋದಂತೆ ತೀವ್ರ ಅನಾರೋಗ್ಯ ಸಮಸ್ಯ ಉಂಟಾಗುತ್ತದೆ. ಪ್ರತಿಯೊಬ್ಬ ವ್ಯಕ್ತಿಯಲ್ಲಿ ಕಾಣಿಸುವ ಅನುಭವಿಸುವ ರೋಗಲಕ್ಷಣಗಳು ವಿಭಿನ್ನವಾಗಿರುತ್ತವೆ. ಇವೆಲ್ಲವು ಗಂಭೀವಾಗಿರುವುದಿಲ್ಲ ಆದರೆ ಅದರ ಕಡೆ ಗಮನ ಕೊಡದೆ, ಚಿಕಿತ್ಸೆ ನೀಡದೆ ಹೋದರೆ ಆ ಲಕ್ಷಣಗಳು ಉಲ್ಬಣಗೊಂಡು ಕವಾಟಗಳಿಗೆ ಹಾನಿಯಾಗಿ ಸರಾಗವಾದ ರಕ್ತಪರಿಚಲನೆಗೆ ತಡೆಯಾಗಿ ರಕ್ತನಾಳಗಳಲ್ಲಿ ರಕ್ತ ಸಂಗ್ರಹವಾಗುತ್ತಾ ಹೋಗುತ್ತದೆ. ಮುಂದುವರೆದಂತೆ ರಕ್ತ ಹೆಪ್ಪುಗಟ್ಟಲು ಆರಂಭವಾಗುತ್ತದೆ. ಹೆಪ್ಪುಗಟ್ಟಿದ ರಕ್ತದ ಮುದ್ದೆ ಬೇರೆಯಾಗಿ ರಕ್ತಪ್ರವಾಹವನ್ನು ಪ್ರವೇಶಿಸಿದಾಗ ಡೀಪ್ ವೇಯ್ನ್ ಥ್ರಂಬೋಸಿಸ್ ಎಂಬ ಮಾರಕ ಸ್ಥಿತಿ ಉಂಟಾಗಬಹುದು.

Spider vein ಹಾಗೂ varicose vein ಎಂಬ ಎರಡು ವಿಧಗಳಿವೆ. ವೆರಿಕೋಸ್ ವೇಯ್ನ್‌ನ ರೋಗಿಗಳು ಹೆಚ್ಚಾಗಿ ಪ್ರಾರಂಭದಲ್ಲಿ ಕಾಲಿನಲ್ಲಿ ಸೆಳೆತ, ಮೀನಗಂಡದಲ್ಲಿ ಬಿಗಿತ, ಕಾಲು ಭಾರವಾದಂತೆ ಭಾಸವಾಗುವುದು. ಕಾಲಿನಲ್ಲಿ ಊತ ಬರುವುದು. ಕಾಲಿನಲ್ಲಿ ಚರ್ಮ ಕಪ್ಪಾಗುವುದು, ತುರಿಕೆ, ಕಜ್ಜಿ, ರಕ್ತನಾಳ ಉಬ್ಬುವುದು, ಕೊನೆಯಲ್ಲಿ ಗುಣವಾಗದ ಗಾಯವಾಗುವುದು ಹಾಗೂ ಅಸಾಧ್ಯ ನೋವು ಹಾಗೂ ಉರಿಯಿಂದ ಬಳಲುತ್ತಾರೆ. ವೆರಿಕೋಸ್ ವೇಯ್ನ್ chronic venous insuffency ಒಂದು ಲಕ್ಷಣ ಸಹ ಆಗಿದೆ.

ಇಂದಿನ ದಿನಗಳಲ್ಲಿ ಎಲ್ಲ ರೋಗಗಳಿಗೆ ಔಷಧೋಪಚಾರ ಚಿಕಿತ್ಸೆಗಳಿದ್ದು, ಹೆದರುವ ಅವಶ್ಯಕತೆ ಇರುವುದಿಲ್ಲ. ಇಂಟರ್ವೆನ್ಷನಲ್ ರೇಡಿಯಾಲಜಿ ಮೂಲಕ ವೆರಿಕೋಸ್ ವೇಯ್ನ್ ರೋಗಕ್ಕೆ ಲೇಜರ್ ಮತ್ತು ಎಂಬೋಲೈಸೇಶನ್ ಚಿಕಿತ್ಸೆ ನೀಡಬಹುದಾಗಿದೆ.

ಲೇಜರ್ ಮತ್ತು ಎಂಬೋಲೈಸೇಶನ್ ಚಿಕಿತ್ಸೆಯಲ್ಲಿ ಯಾವುದೇ ಹೊಲಿಗೆ, ಗಾಯದ ಗುರುತುಗಳಿರುವುದಿಲ್ಲ. ರೋಗಿಗಳು ತಕ್ಷಣ ಸಾಮಾನ್ಯ ದೈನಂದಿನ ಚಟುವಟಿಕೆಗಳಿಗೆ ಮರಳಬಹುದು. ಇದು ಶಸ್ತ್ರಚಿಕಿತ್ಸೆಗೆ ಉತ್ತಮ ಪರ್ಯಾಯ ಹಾಗೂ ಪರಿಣಾಮಕಾರಿಯಾಗಿದೆ. ಶಸ್ತ್ರಚಿಕಿತ್ಸೆಗೆ ಹೋಲಿಸಿದರೆ ಆಯ್.ಆರ್ ಕಾರ್ಯವಿಧಾನಗಳಿಗೆ ಕಡಿಮೆ ಅವಧಿ ಆಸ್ಪತ್ರೆಯಲ್ಲಿ ಉಳಿಯುವ ಅಗತ್ಯವಿದೆ.

ಇಂಟರ್ವೆನ್ಷನಲ್ ರೇಡಿಯಾಲಜಿ ಎಂಬೋಲೈಸೇಶನ್ ಮೂಲಕ ಪಿನ್–ಹೋಲ್ ನಾನ್ ಸರ್ಜಿಕಲ್ ಚಿಕಿತ್ಸಾ ವಿಧಾನಗಳ ಮೇಲೆ ಫೈಬ್ರಾಯ್ಡಗಳು, ವಿಸ್ತರಿಸಿದ ಪ್ರಾಸ್ಟೇಟ್, ಮೊಣಕಾಲಿನ ಅಸ್ಥಿಸಂಧಿವಾತ, ಲಿವರ್ ಟ್ಯೂಮರ್, ಸ್ಥೂಲಕಾಯತೆ, ಅನ್ಯುರಿಸಂ ಮತ್ತು ಪಾರ್ಶ್ವವಾಯು ಮುಂತಾದ ರೋಗಗಳಿಗೆ ರೇಡಿಯಾಲಜಿಸ್ಟ್ ಹಾಗೂ ನುರಿತ ತಜ್ಞವೈದ್ಯರೊಂದಿಗೆ ಶಸ್ತ್ರಕ್ರಿಯೆಯಲ್ಲದ ಅಲ್ಪಾವಧಿಯ ಚಿಕಿತ್ಸೆಯ ಆಯ್ಕೆಗಳೊಂದಿಗೆ ಚಿಕಿತ್ಸೆ ನೀಡಬಹುದಾಗಿದೆ.

ಆಧುನಿಕ ತಂತ್ರಜ್ಞಾನದಲ್ಲಿನ ಕ್ಷಿಪ್ರ ದಾಪುಗಾಲುಗಳು ರೋಗಿಗಳ ಆರೈಕೆಯನ್ನು ಬಹಳ ಸರಳಗೊಳಿಸಿವೆ. ಚಿತ್ರದ ಮಾರ್ಗದರ್ಶನದ ಅಡಿಯಲ್ಲಿ ವಿವಿಧ ಚಿಕಿತ್ಸಕ ಆಯ್ಕೆಗಳನ್ನು ನಿರ್ವಹಿಸಬಹುದು ಎಂಬುದನ್ನು ಇಂಟ–ರ್ವೆನ್ಷನಲ್ ರೇಡಿಯಾಲಜಿ ದೃಢಪಡಿಸಿದೆ.

ಇಂಟರ್ವೆನ್ಷನಲ್ ರೇಡಿಯಾಲಜಿಯು ಆಂ–ಜಿಯೋಗ್ರಾಫಿಯಿಂದ ವಿಕಸನಗೊಂಡಿದೆ, ಇದು ರಕ್ತನಾಳಗಳ ಗುರುತಿಸಲು ವಿಶೇಷ ಎಕ್ಸ್‌ರೇ ಪರೀಕ್ಷೆಗಳಿದ್ದು ರಕ್ತನಾಳಗಳ ಬಹುತೇಕ ಎಲ್ಲಾ ಕಾಯಲೆಗಳಿಗೆ ಇಂಟರ್ವೆನ್ಷನಲ್ ರೇಡಿಯಾಲಜಿಯೊಂದಿಗೆ ಚಿಕಿತ್ಸೆ ನೀಡಬಹುದಾಗಿದೆ.

ಈಗ ವೈದ್ಯಕೀಯ ಕ್ಷೇತ್ರದಲ್ಲಿ ಹೊಸ ತಂತ್ರಜ್ಞಾನಗಳ ಅವಿಷ್ಕಾರವಾಗಿದ್ದು, ಅವುಗಳಲ್ಲಿ ಎಂಡೋವೇನಸ್ ಲೇಸರ್ ಟ್ರೀಟ್ಮೆಂಟ್ + ಫೋಮ್ ಸ್ಕ್ಲೇರೊ ಥೆರಪಿ, ಎಂಬೋಲೈಸೇಶನ್ ಮೂಲಕ ಚಿಕಿತ್ಸೆ ಮಾಡಬಹುದಾಗಿದ್ದು, ದೇಹದ ಮೇಲೆ ಛೇದ ಮಾಡುವುದಿಲ್ಲ, ರಕ್ತಸ್ರಾವವಿಲ್ಲ, ಹೊಲಿಗೆ ಇಲ್ಲ ಇದು ಉತ್ತಮ ಚಿಕಿತ್ಸಾ ವಿಧಾನವಾಗಿದೆ.

ಇತ್ತೀಚೆಗೆ ಇಂಟರ್ವೆನ್ಷನಲ್ ರೇಡಿಯಾಲಜಿ (ಐ.ಆರ್) ಸೇರಿದಂತೆ ಆಧುನಿಕ ಔಷಧಗಳು ಬಂದಿದ್ದು, ರೋಗಿಯ ಆರೈಕೆಯಲ್ಲಿ ಗಮನಾರ್ಹ ಬದಲಾವಣೆಯಾಗಿದೆ. ವಿಕಿರಣಶಾಸ್ತ್ರವು ಇಮೇಜಿಂಗ್, ಚಿಕಿತ್ಸಕ ಮತ್ತು ನ್ಯಾವಿಗೇಷನ್ ತಂತ್ರಜ್ಞಾನಗಳ ವಿಶಿಷ್ಟ ಮತ್ತು ನವೀನ ಸಂಯೋಜನೆಯನ್ನು ಅಭಿವೃದ್ಧಿಪಡಿಸಿದ್ದು ಮಲ್ಟಿಮೊಡಲಿಟಿ ಇಂಟರ್ವೆನ್ಷನಲ್ ರೇಡಿಯಾಲ–ಜಿಯನ್ನು ಒಟ್ಟಾಗಿ ರೂಪಿಸಿದೆ ಎನ್ನಬಹುದು. ಈ ಚಿಕಿತ್ಸೆಯ ಮೂಲಕ ಒಂದೇ ಸೂಜಿ ಪಂಕ್ಚರ್ ಮೂಲಕ ಎಫ್.ಎನ್.ಎ.ಸಿ, ಬಯಾಪ್ಸಿ, ಆಂಜಿಯೋಗ್ರಾಫಿ, ಸ್ಟೆಂಟಿಂಗ್, ಎಂಬೋಲೈಸೇಶನ್, ಲೇಸರ್ ಅಬ್ಲೇಶನ್, ರೇಡಿಯೋಫ್ರಿಕ್ವೆನ್ಸಿ/ಮೈಕ್ರೋವೇವ್ ಅಬ್ಲೇಶನ್ ಕಾರ್ಯವಿಧಾನಗಳಿಗೆ ಇಂಟರ್ವೆನ್ಷನಲ್ ರೇಡಿಯಾಲ–ಜಿಯನ್ನು ಬಳಸಿಕೊಂಡು ಕ್ಯಾನ್ಸರ್‌ಗೂ ಕೂಡ ಚಿಕಿತ್ಸೆ ನೀಡಬಹುದಾಗಿದೆ. ಕ್ಯಾನ್ಸರ್ ಪೀಡಿತರಿಗೆ ಇಂಟ–ರ್ವೆನ್ಷನಲ್ ರೇಡಿಯಾಲಜಿ ಉತ್ತಮ ಆಯ್ಕೆಯಾಗಿದ್ದು ಪರಿಣಾಮಕಾರಿಯಾದ ಚಿಕಿತ್ಸೆಯಾಗಿದೆ.

ವಿಕಿರಣಶಾಸ್ತ್ರದ(ರೇಡಿಯಾಲಜಿ) ತಂತ್ರಗಳ ಮುಖ್ಯ ಪ್ರಯೋಜನೆಗಳೆಂದರೆ ಅವು ದೇಹದ ರಂಧ್ರ ಅಥವಾ ಸಣ್ಣ ಸೂಜಿಗಳು ಮತ್ತ ತಂತಿಗಳನ್ನು ಬಳಿಸಿಕೊಂಡು ಸಣ್ಣ ಛೇದನದ ಮೂಲಕ ದೇಹದ ಆಳವಾದ ರಚನೆಗಳನ್ನು ತಲುಪಿ ನಿರ್ದಿಷ್ಟ ರೋಗ ಪೀಡಿತ ಅಂಗಾಂಗಕ್ಕೆ ಚಿಕಿತ್ಸೆ ನೀಡಬಹುದಾಗಿದೆ. ಈ ಕಾರ್ಯವಿಧಾನದಲ್ಲಿ ಅಪಾಯ, ನೋವು ಕಡಿಮೆ ಇರುತ್ತದೆ, ರಕ್ತಸ್ರಾವ ಇರುವುದಿಲ್ಲ. ಚೇತರಿಕೆ ಅವಧಿ ಅತಿ ಕಡಿಮೆ ಎನ್ನಬಹುದು. ಯಾವುದೇ ಕಟ್, ಯಾವುದೇ ಹೊಲಿಗೆ, ಹಾಕದೆ ರೋಗಗಳಿಗೆ ಚಿಕಿತ್ಸೆ ನೀಡಬಹುದು.

ಪ್ರಪಂಚದ ಹೆಚ್ಚಿನ ದೇಶಗಳಲ್ಲಿ “ಎಂಬೋಲೈಸೇಶನ್ ವಿಧಾನ” ವನ್ನು 1970 ರಿಂದ ಯಶಸ್ವಿಯಾಗಿ ಬಳಸಲಾಗಿದೆ. ಈ ಮೊದಲಿ ರಕ್ತಸ್ರಾವವನ್ನು ನಿಲ್ಲಿಸಲು ಎಂಬೋಲೈಸೇಶನ್ ವಿಧಾನವನ್ನು ಬಳಸುತ್ತಿದ್ದರು. ನಂತರದ ದಿನಗಳಲ್ಲಿ ಇದನ್ನು ಚಿಕಿತ್ಸೆಯ ಸ್ವತಂತ್ರ ವಿಧಾನವಾಗಿ ಪರಿವರ್ತಿಸಲಾಯಿತು.

ಎಂಬೋಲೈಸೇಶನ್ ಎಂಬ ಪದವು ಎಂಬೋಲಿಯ (ಅನ್‌ಬೌಂಡ್ ಇಂಟ್ರಾವಾಸ್ಕುಲರ್ ಸಬ್‌ಸ್ಟ್ರೇಟ್) ಪರಿಚಯದ ಮೂಲಕ ಆಯ್ದ ನಾಳಗಳ ಮುಚ್ಚುವಿಕೆ ಅಥವಾ ನಿರ್ಭಂದವನ್ನು ಸೂಚಿಸುತ್ತದೆ. ಫೈಬ್ರಾಯ್ಡ್ ಚಿಕಿತ್ಸೆಗಾಗಿ, ಸಣ್ಣ ಚಂಡುಗಳನ್ನು ಬಳಸಲಾಗುತ್ತದೆ. ಇದು ಚುಚ್ಚುಮದ್ದಿನ ಔಷಧಗಳೊಂದಿಗೆ ಬರುತ್ತದೆ. ಪರಿಣಾಮವಾಗಿ ಫೈಬ್ರಾಯ್ಡ್ ಕೆಲವೇ ತಿಂಗಳುಗಳಲ್ಲಿ ಸಣ್ಣದಾಗಿ ಕಾಣದಾಗಿ ಮಾಯವಾಗುತ್ತದೆ. ಎಕೆಂದರೆ ಅದಕ್ಕೆ ರಕ್ತ ಪೂರೈಕೆ ಮಾಡುವ ಅಪಧಮನಿಗಳು ನಿರ್ಭಂಧಿಸಲ್ಪಡುತ್ತವೆ. ಇದರ ವಿಶೇಷ ಗರ್ಭಾಶಯವನ್ನು ತೆಗೆದುಹಾಕುವ ಅವಶ್ಯಕತೆ ಇರುವುದಿಲ್ಲ. ಹಾಗೂ ಮಹಿಳೆ ಎಂದಿನಂತೆ ತನ್ನ ಸಂತಾನೋತ್ಪತ್ತಿ ಕಾರ್ಯವನ್ನು ಹೊಂದುವ ಮೂಲಕ ಮಗುವನ್ನು ಪಡೆಯುವುದರೊಂದಿಗೆ ಸಾಮಾನ್ಯ ಜೀವನಕ್ಕೆ ಮರಳಬಹುದಾಗಿದೆ.ಈ ತಂತ್ರವನ್ನು ನಿರ್ವಹಿಸುವ ವೈದ್ಯರನ್ನು ವಿಕಿರಣಶಾಸ್ತ್ರಜ್ಞ (ಇಂಟ–ರ್ವೆನ್ಷನಲ್ ರೇಡಿಯಾಲಜಿಸ್ಟ್, ಎಂಡೋವಾಸ್ಕುಲರ್ ಸರ್ಜನ್) ಎಂದು ಕರೆಯಲಾಗುತ್ತದೆ. ಈ ಚಿಕಿತ್ಸೆಗಳ ಅನುಷ್ಠಾನಕ್ಕಾಗಿ ಕ್ಲಿನಿಕ್‌ನಲ್ಲಿ ವಿಶೇಷ ಅಂಜಿಯೋಗ್ರಾಫಿಕ್ ಉಪಕರಣಗಳು ಮತ್ತು ಎಕ್ಸರೇ ಆಪರೇಟಿಂಗ್ ರೂಮ್ ಹೊಂದಿರುವುದು ಅವ್ಯವಾಗಿದೆ.

ಎಂಬೋಲೈಸೇಶನ್ ಚಿಕಿತ್ಸೆ ಶಸ್ತ್ರಚಿಕಿತ್ಸೆಗೆ ಪರ್ಯಾಯವಾದ ತಂತ್ರವಾಗಿದ್ದು ದೇಹದ ಒಂದು ಪ್ರದೇಶಕ್ಕೆ ರಕ್ತದ ಹರಿವನ್ನು ತಡೆಯುವುದು ಇದರ ಉದ್ದೇಶವಾಗಿದ್ದು, ಇದರಿಂದ ಗಡ್ಡೆಯನ್ನು ಪರಿಣಾಮಕಾರಿಯಾಗಿ ಕುಗ್ಗಿಸಬಹುದು. ಈ ವಿಧಾನವನ್ನು ಇಂಟರ್ವೆನ್ಷನಲ್ ರೇಡಿಯಾಲಜಿಸ್ಟ್ ಎಂಬ ತಜ್ಞರು ನಿರ್ವಹಿಸುತ್ತಾರೆ.

ತಜ್ಞ ವೈದ್ಯ ಡಾ.ಅಭಿನಂದನ ರೂಗೆ, ಎಂ.ಡಿ(ರೇಡಿಯಾಲಜಿ) ಎಫ.ವ್ಹಿ.ಐ.ಆರ್(ಮುಂಬೈ) ಇವರು ನಗರದ ಕಾಲೇಜ ರೋಡನಲ್ಲಿರುವ ಎಂ.ಜಿ.ಭವನ ನಂ.22, ಹೊಟೇಲ್ ಸನ್ಮಾನ್ ಹಿಂದುಗಡೆ “ರೂಗೆ ವಾಸ್ಕ್ಯುಲರ್ ಸೆಂಟರ್” ಕ್ಲಿನಿಕ್ ಪ್ರಾರಂಭಿಸಿದ್ದು, ಇದು ಉತ್ತರ ಕರ್ನಾಟಕದ ಮೊಟ್ಟ ಮೊದಲ ವಾಸ್ಕ್ಯುಲರ್ ಸೆಂಟರ್ (ಕ್ಲಿನಿಕ್) ಇದಾಗಿದೆ. ವೆರಿಕೋಸ್ ವೇಯ್ನ್ ತೊಂದರೆಯಿಂದ ಬಳಲುವ ರೋಗಿಗಳಿಗೆ ಇದು ವರದಾನವಾಗಿದೆ ಎನ್ನಬಹುದು. ಇಲ್ಲಿ ವರಿಕೋಸ್ ವೆಯ್ನ್ ಲೇಸರ್ ಟ್ರೀಟ್ಮೆಂಟ್, ಡೀಪ್ ವೆನಸ್ ಥ್ರಂಬೋಸಿಸ್ (ಡಿ.ವಿ.ಟಿ)–ಥ್ರಂಬೆಕ್ಟಮಿ/ಐವ್ಹಿಸಿ ಫಿಲ್ಟರ್, ಎಮರ್ಜಎನ್ಸಿ ಎಂಬೋಲೈಸೇಶನ್ –ಜಿಐ ಬ್ಲೀಡ್, ಡಯಾಬಿಟಿಕ್ ಫುಟ್ ಅಲ್ಸರ್/ ಗ್ಯಾಂಗ್ರಿನ್–ಬಲೂನ್ ಆಂಜಿಯೋಪ್ಲಾಸ್ಟಿ/ಸ್ಟೆಂಟಿಂಗ್, ಇಮೇಜ್ ಗೈಡೆಡ್ ಬಯಾಪ್ಸಿ/ಪಿಗ್ ಟೈಲ್/ ಎಫ್.ಎನ್.ಎ.ಸಿ ನ್ನು ಮುಂತಾದ ಚಿಕಿತ್ಸೆಗಳು ಲಭ್ಯವಿವೆ. ವಾಸ್ಕ್ಯುಲರ್ ಮತ್ತು ಇಂಟರ್ವೆನ್ಷನಲ್ ರೇಡಿಯಾಲಜಿಯಲ್ಲಿ ವಿಶೇಷ ಪರಿಣಿತಿ ಹೊಂದಿದ ತಜ್ಞ ವೈದ್ಯ ಡಾ.ಅಭಿನಂದನ ರೂಗೆ ಇವರು ಪ್ರತಿ ದಿನ ವೆರಿಕೋಸ್ ವೇಯ್ನ್ ಸೇರಿದಂತೆ ಇನ್ನಿತರ ರೋಗಗಳಿಂದ ಬಳಲುವ ರೋಗಿಗಳನ್ನು ಪರೀಕ್ಷಿಸಿ ಸೂಕ್ತ ಚಿಕಿತ್ಸೆ ನೀಡುತ್ತಿದ್ದಾರೆ.ಅನೇಕ ಜನರು ಮೌನವಾಗಿ ವೆರಿಕೋಸ್ ವೇಯ್ನ್ ಕಾಯಿಲೆಯಿಂದ ಬಳಲುತ್ತಿದ್ದು, ಮುಲಾಮುಗಳು, ಸ್ಟಾಕಿಂಗ್ಸ್, ಮನೆಮದ್ದುಗಳಂತಹ ತಾತ್ಕಾಲಿಕ ಪರಿಹಾರಗಳನ್ನು ಆಶ್ರಯಿಸುತ್ತಾರೆ. ಜನರು ಶಸ್ತ್ರಚಿಕಿತ್ಸೆಯ ಭಯದಿಂದ ಚಿಕಿತ್ಸೆ ಪಡೆಯುವುದಿಲ್ಲ. ರೋಗಿಯು ಆರಂಭಿಕ ಹಂತದಲ್ಲಿ ವೈದ್ಯರಿಗೆ ತೋ–ರಿಸುವುದು ಉತ್ತಮ ನಿರ್ಧಾರವಾದೀತು. ಅದರಂತೆ ಇದು ಬರದಂತೆ ತಡೆಯಲು ದೇಹದ ತೂಕವನ್ನು ಕಾಪಾಡಿಕೊಳ್ಳುವುದು ಮುಖ್ಯ. ನಿಯಮಿತ ದೈಹಿಕ ಚಟುವಟಿಕೆ ಕೈಗೊಳ್ಳಬೇಕು. ನಿಯಮಿತ ನಡಿಗೆ ಬಹಳ ಮುಖ್ಯಪಾತ್ರವಹಿಸುತ್ತದೆ. ಬಿಗಿಯಾದ ಬಟ್ಟೆಗಳನ್ನು ಹಾಕಿಕೊಳ್ಳಬೇಡಿ. ಅದು ರಕ್ತದ ಹರಿವನ್ನು ನಿರ್ಭಂಧಿಸುತ್ತದೆ. ದಿನನಿತ್ಯ ಕಡಿಮೆ ಉಪ್ಪು ಬಳಿಸಿ ಮತ್ತು ಫೈಬರ್ ಭರಿತ ಆಹಾರವನ್ನು ಸೇವಿಸಿ ಆರೋಗ್ಯವಾಗಿರಿ.

# ಜೆಡಿಎಸ್ ಜನತಾ ಪ್ರಣಾಳಿಕೆ ಬಿಡುಗಡೆ ಮಾಡಿದ ಹೆಚ್.ಡಿ.ಕುಮಾರಸ್ವಾಮಿ

### ಮುಖ್ಯಾಂಶಗಳು

* 12 ಕಾರ್ಯಕ್ರಮಗಳನ್ನು ಘೋಷಣೆ.
* ವರ್ಷಕ್ಕೆ 5 ಸಿಲಿಂಡರ್ ಉಚಿತ.
* ಸ್ತ್ರೀಶಕ್ತಿ ಸಾಲ ಮನ್ನಾ.
* ಕನ್ನಡಕ್ಕೆ ಅಗ್ರ ಮನ್ನಣೆ, ಖಾಸಗಿ ಕ್ಷೇತ್ರದಲ್ಲಿ ಕನ್ನಡಿಗರ *ಉದ್ಯೋಗಕ್ಕೆ ಮೀಸಲು.
* ವಕೀಲರ ರಕ್ಷಣೆಗೆ ಕಾಯಿದೆ.
* ರಾಜ್ಯದಲ್ಲಿ ನಿಮ್ಹಾನ್ಸ್ ಮಾದರಿ ಆಸ್ಪತ್ರೆ.
* ಬೋನ್ ಮ್ಯಾರೊ ಸೇರಿ ದುಬಾರಿ ಕಾಯಿಲೆಗಳಿಗೆ 25 ಲಕ್ಷ ರೂ.ವರೆಗೆ ಪರಿಹಾರ.
* ನ್ಯಾ.ಸಾಚರ್ ವರದಿ ಜಾರಿಗೆ ಕ್ರಮ, ಪೊಲೀಸರ ವೇತನ ತಾರತಮ್ಯ ನಿವಾರಣೆ.
* ವಿಕಲಚೇತನರ ಪಿಂಚಣಿ 2500, ಹಿರಿಯ ಪಿಂಚಣಿ 5000 ರೂ.ಗಳಿಗೆ ಏರಿಕೆ.

ಬೆಂಗಳೂರು: ಮಹತ್ವಾಕಾಂಕ್ಷೆಯ ಪಂಚರತ್ನ ಯೋಜನೆಗಳ ಜಾರಿ, ನೆನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳ ಕ್ಷಿಪ್ರಗತಿಯ ಅನುಷ್ಠಾನ ಸೇರಿದಂತೆ ಹಲವಾರು ಪ್ರಮುಖ ಘೋಷಣೆಗಳನ್ನು ಮಾಡಿರುವ ಜೆಡಿಎಸ್ ಪಕ್ಷವು, ಜನತೆಗೆ ಸಾಮಾಜಿಕ ಭದ್ರತೆ ನೀಡುವ ಹಿನ್ನೆಲೆಯಲ್ಲಿ ಅನೇಕ ಜನಾನುರಾಗಿ ಕಾರ್ಯಕ್ರಮಗಳನ್ನು ರೂಪಿಸಿದೆ.

ಪ್ರಸಕ್ತ ಕರ್ನಾಟಕ ವಿಧಾನಸಭೆ ಚುನಾವಣೆಯ ಜೆಡಿಎಸ್ ಪ್ರಣಾಳಿಕೆ ಜನತಾ ಪ್ರಣಾಳಿಕೆಯನ್ನು ಮಾಜಿ ಮುಖ್ಯಮಂತ್ರಿಗಳಾದ ಹೆಚ್.ಡಿ.ಕುಮಾರಸ್ವಾಮಿ, ಪಕ್ಷದ ರಾಜ್ಯಾಧ್ಯಕ್ಷ ಸಿಎಂ ಇಬ್ರಾಹಿಂ, ಪ್ರಣಾಳಿಕೆ ರಚನೆ ಸಮಿತಿ ಅಧ್ಯಕ್ಷ ಬಿಎಂ ಫಾರೂಕ್ ಹಾಗೂ ಸಮಿತಿ ಸದಸ್ಯರಾದ ಕೆ.ಎ.ತಿಪ್ಪೇಸ್ವಾಮಿ ಅವರು ಇಂದು ಪಕ್ಷದ ಕಚೇರಿ ಜೆಪಿ ಭವನದಲ್ಲಿ ಬಿಡುಗಡೆ ಮಾಡಿದರು.

ವರ್ಷಕ್ಕೆ 5 ಸಿಲಿಂಡರ್ ಉಚಿತ, ಸ್ತ್ರೀಶಕ್ತಿ ಸಾಲ ಮನ್ನಾ, ಕನ್ನಡಕ್ಕೆ ಅಗ್ರ ಮನ್ನಣೆ, ಖಾಸಗಿ ಕ್ಷೇತ್ರದಲ್ಲಿ ಕನ್ನಡಿಗರ ಉದ್ಯೋಗಕ್ಕೆ ಮೀಸಲು, ವಕೀಲರ ರಕ್ಷಣೆಗೆ ಕಾಯಿದೆ, ರಾಜ್ಯದಲ್ಲಿ ನಿಮ್ಹಾನ್ಸ್ ಮಾದರಿ ಆಸ್ಪತ್ರೆ, ಬೋನ್ ಮ್ಯಾರೊ ಸೇರಿ ದುಬಾರಿ ಕಾಯಿಲೆಗಳಿಗೆ 25 ಲಕ್ಷ ರೂ.ವರೆಗೆ ಪರಿಹಾರ, ನ್ಯಾ.ಸಾಚರ್ ವರದಿ ಜಾರಿಗೆ ಕ್ರಮ, ಪೊಲೀಸರ ವೇತನ ತಾರತಮ್ಯ ನಿವಾರಣೆ, ವಿಕಲಚೇತನರ ಪಿಂಚಣಿ 2500, ಹಿರಿಯ ಪಿಂಚಣಿ 5000 ರೂ.ಗಳಿಗೆ ಏರಿಕೆ ಸೇರಿದಂತೆ ಹಲವಾರು ಪ್ರಮುಖ ಘೋಷಣೆಗಳನ್ನು ಪಕ್ಷ ಮಾಡಿದೆ.

ಅಲ್ಲದೆ, ಪಂಚರತ್ನ ಯೋಜನೆಗಳಾದ ಎಲ್ಲರಿಗೂ ಸಮಾನ ಆರೋಗ್ಯ ಸೌಲಭ್ಯ ಆರೋಗ್ಯ ಸಂಪತ್ತು, ಸಮಾನ ಶಿಕ್ಷಣ ಕೊಡುವ ಶಿಕ್ಷಣವೇ ಆಧುನಿಕ ಶಕ್ತಿ, ಕೃಷಿಗೆ ಆಧುನಿಕ ಕಾಯಕಲ್ಪ ನೀಡುವ ರೈತ ಚೈತನ್ಯ, ಉಚಿತ ಮನೆ ನೀಡುವ ವಸತಿ ಆಸರೆ, ಯುವಕರು ಹಾಗೂ ಮಹಿಳೆಯರ ಸಾಮಾಜಿಕ ಭದ್ರತೆ, ಆರ್ಥಿಕ ಸಬಲೀಕರಣಕ್ಕೆ ರೂಪಿಸಲಾಗಿರುವ ಯುವನವ ಮಾರ್ಗ – ಮಹಿಳಾ ಸಬಲೀಕರಣ ಯೋಜನೆಗಳನ್ನು ಜಾರಿ ಮಾಡುವುದಾಗಿ ಪಕ್ಷ ಘೋಷಣೆ ಮಾಡಿದೆ.

ಜನತಾ ಪರ್ವದ ಅಡಿಯಲ್ಲಿ ರೂಪಿಸಿ, ರಾಜ್ಯದ ಉದ್ದಗಲಕ್ಕೂ ಕೈಗೊಂಡ ಜನತಾ ಜಲಧಾರೆ, ಪಂಚರತ್ನ ರಥಯಾತ್ರೆ ಇತ್ಯಾದಿ ಕಾರ್ಯಕ್ರಮಗಳ ಮೂಲಕ ಸಂಗ್ರಹ ಮಾಡಲಾದ ಜನರ ಅಪೇಕ್ಷೆ ಹಾಗೂ ಸಲಹೆಗಳ ಆಧಾರದಲ್ಲಿ ಜನತಾ ಪ್ರಣಾಳಿಕೆ ರಚನೆ ಮಾಡಲಾಗಿದೆ ಎಂದು ಪಕ್ಷ ಹೇಳಿದೆ.

ಮಾತೃಶ್ರೀ ಮತ್ತು ಮಹಿಳಾ ಸಬಲೀಕರಣ:

ಸ್ತ್ರೀಶಕ್ತಿ ಸ್ವಸಹಾಯ ಸಂಘಗಳ ಸಾಲಮನ್ನಾ, ಗರ್ಭಿಣಿ ತಾಯಂದಿರ ಅಗತ್ಯತೆ ಪೂರೈಕೆಗೆ 6 ತಿಂಗಳ ಕಾಲ 6,000 ರೂ. ಭತ್ಯೆ, ವಿಧವಾ ವೇತನ 900 ರೂ.ನಿಂದ 2,500 ರೂ.ಗಳಿಗೆ ಹೆಚ್ಚಳ, ಅಂಗನವಾಡಿ ಕಾರ್ಯಕರ್ತೆಯರಿಗೆ, ಸಹಾಯಕರಿಗೆ ಮತ್ತು ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ 5000 ರೂ.ವರೆಗೆ ಹೆಚ್ಚಿನ ವೇತನ, ಕನಿಷ್ಠ 15 ವರ್ಷ ಸೇವೆ ಸಲ್ಲಿಸಿ ನಿವೃತ್ತರಾದ ಕಾರ್ಯಕರ್ತೆಯರಿಗೆ ಪಿಂಚಣಿ ಕೊಡಲಾಗುವುದು ಎಂದು ಘೋಷಣೆ ಮಾಡಲಾಗಿದೆ.

ಕನ್ನಡವೇ ಮೊದಲು:

ಕೇಂದ್ರ ಸರಕಾರದ ನಾಗರಿಕ ಸೇವೆಗಳಾದ ರೈಲ್ವೆ, ಬ್ಯಾಂಕಿಂಗ್, ರಾಜ್ಯದಲ್ಲಿರುವ ಕೇಂದ್ರ ಸಾರ್ವಜನಿಕ ಉದ್ಯಮಗಳು, ಕೇಂದ್ರ ಭದ್ರತಾಪಡೆ ಇನ್ನಿತರೆ ನೇಮಕದಲ್ಲಿ ಕನ್ನಡದಲ್ಲೇ ಪರೀಕ್ಷೆ ನಡೆಸಿ ಕನ್ನಡಿಗರಿಗೆ ಆದ್ಯತೆ ನೀಡಲು ಕೇಂದ್ರ ಸರಕಾರದ ಮೇಲೆ ಒತ್ತಡ ಹೇರಲಾಗುವುದು ಹಾಗೂ ಖಾಸಗಿ ಉದ್ಯಮಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲಿಗೆ ಅಗತ್ಯ ಕಾಯಿದೆ ಜಾರಿ ಮಾಡಲಾಗುವುದು ಎಂದು ಜನತಾ ಪ್ರಣಾಳಿಕೆಯಲ್ಲಿ ತಿಳಿಸಲಾಗಿದೆ.

ಶಿಕ್ಷಣಕ್ಕೆ ಮಾನ್ಯತೆ:

ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ 6.8 ಲಕ್ಷ ವಿದ್ಯಾರ್ಥಿಗಳಿಗೆ ಉಚಿತ ಸೈಕಲ್, ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಮತ್ತು ಆರ್ಥಿಕವಾಗಿ ಹಿಂದುಳಿದಿರುವ, 18 ವರ್ಷ ತುಂಬಿರುವ 60,000 ಸಾವಿರ ವಿದ್ಯಾರ್ಥಿನಿಯ–ರಿಗೆ ವಿದ್ಯುತ್ ಚಾಲಿತ ಮೊಪೆಡ್ ನೀಡಲಾಗುವುದು ಹಾಗೂ ಶಾಲೆ ಕಾಲೇಜಿಗೆ ತೆರಳುವ ಎಲ್ಲ ಮಕ್ಕಳಿಗೆ ಅಗತ್ಯ ಸಾರಿಗೆ ವ್ಯವಸ್ಥೆ ಮಾಡಲಾಗುವುದು.

ನಿಮ್ಹಾನ್ಸ್ ಮಾದರಿ ಆಸ್ಪತ್ರೆ:

ರಾಜ್ಯದಲ್ಲಿ ಎಲ್ಲರಿಗೂ ಆರೋಗ್ಯ ಸೌಲಭ್ಯ ಸಮಾನವಾಗಿರುತ್ತದೆ. ರಾಜ್ಯ ಸರಕಾರದಿಂದ ನಿಮ್ಹಾನ್ಸ್ ಮಾದರಿಯಲ್ಲಿ 500 ಹಾಸಿಗೆಯುಳ್ಳ ಆಧುನಿಕ ನರವಿಜ್ಞಾನ ವೈದ್ಯಕೀಯ ಸಂಸ್ಥೆ ಸ್ಥಾಪನೆ, ಆಯುಷ್ಮಾನ್ ಭಾರತ್, ಯಶಸ್ವಿನಿ ಯೋಜನೆಯಡಿಯಲ್ಲಿ ಸರ್ಪಡೆಯಾಗದ ಮತ್ತು ದುಬಾರಿ ವೆಚ್ಚದ ವೈದ್ಯಕೀಯ ಶಸ್ತ್ರಚಿಕಿತ್ಸೆಗಳಾದ ಮೂಳೆಮಜ್ಜೆ ಚಿಕಿತ್ಸೆ (Bone Marrow Treatment, ಹೃದಯ, ಶ್ವಾಸಕೋಶ ಮತ್ತು



### ಜೆಡಿಎಸ್ ಜನತಾ ಪ್ರಣಾಳಿಕೆ

- ನೀರಾವರಿ ಸೇರಿ ಪಂಚರತ್ನ ಯೋಜನೆಗಳ ಜಾರಿಗೆ ಜೆಡಿಎಸ್ ಭರವಸೆ
- ರೈತರಿಗೆ ಎಕರೆಗೆ 10,000 ರೂ., ಯುವಕರು, ಮಹಿಳೆಯರಿಗೆ ಬಂಪರ್
- ಸ್ತ್ರೀಶಕ್ತಿ ಸ್ವಸಹಾಯ ಸಂಘಗಳ ಸಾಲ ಮನ್ನಾ ಘೋಷಣೆ
- 4 ವರ್ಷಗಳಲ್ಲಿ ಎತ್ತಿನಹೊಳೆ, ಮಹದಾಯಿ, ಮೇಕೆದಾಟು, ಭದ್ರ ಮೇಲ್ದಂಡೆ ಯೋಜನೆ ಕಾರ್ಯಗತ.

ಯಕೃತ್ ಬದಲಾಯಿಸುವ ಶಸ್ತ್ರಚಿಕಿತ್ಸೆಗಳಿಗೆ (Heart, Lungs, Liver Transplantation) ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 25 ಲಕ್ಷದ ರೂ.ವರೆಗಿನ ಪರಿಹಾರವನ್ನು 24 ಗಂಟೆಗಳ ಅವಧಿಯಲ್ಲಿ ನೀಡಲಾಗುವುದು, ಒಟ್ಟು 6006 ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿ 30 ಹಾಸಿಗೆಗಳ ಹೈಟೆಕ್ ಆಸ್ಪತ್ರೆ ಸ್ಥಾಪನೆ, ಅಗತ್ಯ ಸಿಬ್ಬಂದಿ ವೈದ್ಯರ ನೇಮಕ ಮಾಡಲಾಗುವುದು ಎಂದು ಜನತಾ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಲಾಗಿದೆ.

ಕೃಷಿಗೆ ಅಗ್ರ ಆದ್ಯತೆ, ರೈತರಿಗೆ ಅನುಕೂಲ:

ರೈತ ಸ್ವಾಭಿಮಾನದ ಬದುಕು ನಡೆಸುವ ನಿಟ್ಟಿನಲ್ಲಿ ಜೆಡಿಎಸ್ ಚಿಂತಿಸಿದೆ. ಪ್ರತೀ ಎಕರೆಗೆ 10,000 ರೂ. ಸಹಾಯ ಧನ, ರೈತ ಯುವಕರನ್ನು ಮದುವೆ ಆಗುವ ಯುವತಿಯರಿಗೆ 2 ಲಕ್ಷ ರೂ. ಪ್ರೋತ್ಸಾಹ ಧನ, ಪ್ರತಿ ಕೃಷಿ ಕಾರ್ಮಿಕ ಕುಟುಂಬಕ್ಕೆ ಮಾಸಿಕ 2000 ರೂ. ಸಹಾಯ ಧನ, ದಿನದ 24 ಗಂಟೆ ಕಾಲ ಕೃಷಿಗೆ ಉಚಿತ ವಿದ್ಯುತ್ ಒದಗಿಸಲಾಗುವುದು ಎಂದು ಜೆಡಿಎಸ್ ಘೋಷಣೆ ಮಾಡಿದೆ.

ಹಿರಿಯ ನಾಗರಿಗರಿಗೆ ನೆರವು:

ಹಿರಿಯ ನಾಗರಿಕರು ಸಂಕಷ್ಟಕ್ಕೆ ಸಿಲುಕಬಾರದು ಎನ್ನುವ ಉದ್ದೇಶದಿಂದ ಹಿರಿಯರ ಮಾಶಾಸನವನ್ನು 1200 ರೂ.ನಿಂದ 5000 ರೂ.ಗಳಿಗೆ ಏರಿಕೆ ಮಾಡಲಾಗುವುದು ಇಂದು ಪ್ರಣಾಳಿಕೆಯಲ್ಲಿ ಘೋಷಣೆ ಮಾಡಲಾಗಿದೆ.

ಧಾರ್ಮಿಕ ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಕ್ರಮ:

ರಾಜ್ಯದಲ್ಲಿ ಕುವೆಂಪು ಕನಸಿನ ಸರ್ವ ಜನಾಂಗದ ಶಾಂತಿಯ ತೋಟ ನಿರ್ಮಾಣ ಮಾಡುವುದು ಜೆಡಿಎಸ್ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ನ್ಯಾ.ರಾಜೇಂದ್ರ ಸಾಚರ್ ಆಯೋಗದ ವರದಿ ಶಿಫಾರಸುಗಳ ಅನುಷ್ಠಾನ ಕುರಿತು ಅಧ್ಯಯನಕ್ಕೆ ಸಮಿತಿ ರಚನೆ ಮತ್ತು ಆ ಸಮಿತಿ ವರದಿ ಆಧರಿಸಿ ಜಾರಿಗೆ ಕ್ರಮ,ರಾಜ್ಯದಲ್ಲಿನ ವಕ್ಫ್ ಆಸ್ತಿ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಉನ್ನತಮಟ್ಟದ ಸಮಿತಿ ರಚನೆ; ಅಗತ್ಯ ಅನುದಾನ ನೀಡಿಕೆ,ಅಶಕ್ತ ಪುರುಷ ಮತ್ತು ಅಬಲೆಯರ ಆಶ್ರಯಕ್ಕೆ ಸಹಾರಾ ಯೋಜನೆ ಜಾರಿ, ರಾಜ್ಯದ ಒಟ್ಟು ಜನಸಂಖ್ಯೆಯಲ್ಲಿ ಶೇ.20ರಷ್ಟಿರುವ ಧಾರ್ಮಿಕ ಅಲ್ಪಸಂಖ್ಯಾತರ ಏಳಿಗೆಗೆ ಬಜೆಟ್ ನಲ್ಲಿ ಶೇ.5ರಷ್ಟು ಅನುದಾನ ಮೀಸಲು ಇಡಲಾಗುವುದು ಎಂದು ಜೆಡಿಎಸ್ ಘೋಷಣೆ ಮಾಡಿದೆ.

ಯುವಜನ ಸಬಲೀಕರಣಕ್ಕೆ ಒತ್ತು:

ರಾಜ್ಯದಲ್ಲಿ ಯುವ ಮಾನವ ಸಂನ್ಮೂಲವನ್ನು ಪರಿಣಾಮಕಾರಿಯಾಗಿ ರೂಪಿಸಿ ಬೆಳೆಸುವ ಬಗ್ಗೆ ಗಮನ ಹರಿಸಲಾಗಿದೆ. ಒಂದು ವರ್ಷದ ಕೌಶಲ್ಯ ಅಭಿವೃದ್ಧಿ ತರಬೇತಿ ಯೋಜನೆಗಳಲ್ಲಿ ತೊಡಗಿಸಿಕೊಳ್ಳುವ ಯುವಕ/ಯುವತಿಯರಿಗೆ ಮಾಸಿಕ 8000 ರೂ. ಭತ್ಯೆ, ಸೂಕ್ಷ್ಮ, ಸಣ್ಣ, ಮಧ್ಯಮ ಉದ್ಯಮ ವಲಯಗಳಲ್ಲಿ ತೊಡಗಿಸಿಕೊಳ್ಳುವ ಯುವಕ/ಯುವತಿಯರಿಗೆ ನೆರವು, ಕೈಗಾರಿಕೆ ಉತ್ಪನ್ನ ಘಟಕ ಸ್ಥಾಪನೆಗೆ 10 ಲಕ್ಷ ರೂ. ಸಹಾಯಧನ, ತರಬೇತಿ ಮತ್ತು ಸೇವೆಗಳ ವಲಯದಲ್ಲಿ ಒದಗಿಸುವ ವಲಯಗಳಲ್ಲಿ ತೊಡಗಿಸಿಕೊಳ್ಳುವವರಿಗೆ 3 ಲಕ್ಷ ರೂ. ಸಹಾಯಧನ, ಸಣ್ಣ ಉದ್ಯಮವಾಗಿ ವ್ಯಾಪಾರ–ವಹಿವಾಟು ನಡೆಸುವವರಿಗೆ 2 ಲಕ್ಷ ರೂ. ಸಹಾಯಧನ, ಸಣ್ಣ ಉದ್ಯಮ ನಡೆಸುವ ಮಹಿಳಾ ಉದ್ಯಮಿಗಳಿಗೆ ಮೇಲಾಧಾರ ಭದ್ರತೆ ರಹಿತ (Collateral Free) 2 ಕೋಟಿ ರೂ.ವರೆಗೆ ಬ್ಯಾಂಕುಗಳ ಮುಖೇನ ಸಾಲ ಕೊಡಲಾಗುವುದು.

ವಿಕಲ ಚೇತನರಿಗೆ ಸಹಾಯಹಸ್ತ:

ರಾಜ್ಯದಲ್ಲಿನಾ ವಿಕಲಚೇತನರಿಗೆ 600 ರೂ.ಗಳ ಪಿಂಚಣಿಯನ್ನು 2,500 ರೂ.ಗಳಿಗೆ ಹೆಚ್ಚಳ, ಭಾರತೀಯ ಸಂಕೇತ ಭಾಷೆಯನ್ನು ದೇಶದ 23ನೇ ಅಧಿಕೃತ ಭಾಷೆಯನ್ನಾಗಿ ಮಾನ್ಯತೆ ಕೊಡಿಸುವ ನಿಟ್ಟಿನಲ್ಲಿ ಪ್ರಯತ್ನ, ಬುದ್ಧಿಮಾಂದ್ಯ ಮಕ್ಕಳ ಆರೋಗ್ಯ ವೃದ್ಧಿಗೆ ಆರೋಗ್ಯ ಅಭಿವೃದ್ಧಿ ಕೇಂದ್ರ ಸ್ಥಾಪನೆ, ವಿಶೇಷ ಸಾಮರ್ಥ್ಯ ಉಳ್ಳ ಮಕ್ಕಳನ್ನು ಹೊಂದಿರುವ ಕುಟುಂಬಗಳ ನೆರವಿಗಾಗಿ ' ಮಿಷನ್ ವಾತ್ಸಲ್ಯ ' ಕಾರ್ಯಕ್ರಮ ಜಾರಿಗೆ ತರಲಾಗುವುದು ಎಂದು ಪಕ್ಷ ಘೋಷಣೆ ಮಾಡಿದೆ.

ಪೊಲೀಸರಿಗೆ ಸಿಹಿಸುದ್ದಿ:

ಔರಾದ್ಕರ್ ಸಮಿತಿ ವರದಿಯಲ್ಲಿ ಪೊಲೀಸ್ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗೆ ನೀಡುವ ವೇತನ, ಸೌಲಭ್ಯಗಳಲ್ಲಿ ನ್ಯೂನತೆಗಳಿದ್ದು, ಈ ತಾರತಮ್ಯ ಹೋಗಲಾಡಿಸಿ, ನ್ಯಾಯಯುತ ವೇತನ, ಸೌಲಭ್ಯ ನೀಡಲಾಗುವುದು.

ಪರಿಶಿಷ್ಟ ಜಾತಿ,ಪರಿಶಿಷ್ಟ ಪಂಗಡಗಳ ಏಳಿಗೆ:

ಕೆ.ಎಸ್.ಎಫ್.ಸಿ ಪ್ರಸ್ತುತ ಶೇ.4ರಷ್ಟು ಬಡ್ಡಿ ವಿಧಿಸುತ್ತಿದ್ದು, ಇದಕ್ಕೆ ಇನ್ನಷ್ಟು ಸಬ್ಸಿಡಿ ನೀಡಿ ಎಸ್.ಸಿ/ಎಸ್.ಟಿ ಉದ್ದಿಮೆದಾರರಿಗೆ ಬಡ್ಡಿದರವನ್ನು ಶೇ.4ರಿಂದ ಶೇ.2ಕ್ಕೆ ಇಳಿಸುವುದು, ಎಸ್.ಸಿ/ಎಸ್.ಟಿ ಉದ್ದಿಮೆದಾರು/ಗುತ್ತಿಗೆದಾರರಿಗೆ ಶೇ.2 ಬಡ್ಡಿ ದರದಲ್ಲಿ 5 ಕೋಟಿ ರೂ.ವರೆಗೆ ಬಂಡವಾಳ ಒದಗಿಸಲಾಗುವುದು, ರಾಜ್ಯದಲ್ಲಿ ಅನುಷ್ಠಾನದಲ್ಲಿರುವ ವಿವಿಧ ವಸತಿ ಯೋಜನೆಗಳಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶೇ.50 ರಿಯಾಯಿತಿ ದರದಲ್ಲಿ ಮನೆ ಹಂಚಿಕೆ ಮಾಡಲಾಗುವುದು.

ವೃತ್ತಿನಿರತ ವಕೀಲರಿಗೆ ರಕ್ಷಣೆ:

ವೃತ್ತಿನಿರತ ವಕೀಲರ ರಕ್ಷಣೆಗೆ ಕಾಯಿದೆ ಜಾರಿ ಹಾಗೂ ನೂತನವಾಗಿ ನೋಂದಾಯಿತ ವಕೀಲ–ರಿಗೆ ಈಗ ನೀಡುವ ಮಾಸಿಕ ಭತ್ಯೆ (ಖಟಖಿಜಟಜ) ವನ್ನು 2000ದಿಂದ 3000 ರೂ.ಗಳಿಗೆ ಹೆಚ್ಚಳ ಮಾಡಲಾಗುವುದು.

ಸೆಕ್ಯೂರಿಟಿ ಗಾರ್ಡ್ ಮತ್ತು ಆಟೋ ಚಾಲಕರಿಗೆ ನೆರವು:

ಹಾಗೆಯೇ ನೋಂದಾಯಿತ ಸೆಕ್ಯೂರಿಟಿ ಗಾರ್ಡ್ ಗಳಿಗೆ ಮಾಸಿಕ 2000 ಸಹಾಯಧನ ಕೊಡಲಾಗುವುದು. ಆರ್ಥಿಕವಾಗಿ ಸಂಕಷ್ಟದಲ್ಲಿ ಇರುವ ಆಟೋ ಚಾಲಕರಿಗೆ ಮಾಸಿಕ 2000 ರೂ. ಸಹಾಯ ಧನ ಕೊಡಲಾಗುವುದು.

ಸಾರಿಗೆ ನೌಕರರು ಅಗತ್ಯ ಸೇವಾ ಕಾಯ್ದೆ ಅಡಿ ಕರ್ತವ್ಯ ನಿರ್ವಹಣೆ ಮಾಡುತ್ತಿದ್ದು, ಅವರಿಗೆ ವೇತನ ಆಯೋಗ ಜಾರಿಯಾದಾಗ ಯಥಾವತ್ತು ಅಳವಡಿಸಿಕೊಂಡು ನಗದು ರಹಿತ ವೈದ್ಯ ಸೇವೆ ಕೊಡಲಾಗುವುದು.

ಮೀಸಲಾಗಿ ಗೊಂದಲ ನಿವಾರಣೆ:

ಮುಸ್ಲಿಂ ರಿಗೆ ಶೈಕ್ಷಣಿಕವಾಗಿ ಆರ್ಥಿಕವಾಗಿ ಮುಂದುವರಿಯಲು ಹೆಚ್.ಡಿ.ದೇವೆಗೌಡರ ಕಾಲದಲ್ಲಿ ಶೇ.4ರಷ್ಟು ಮೀಸಲು ನೀಡಲಾಗಿತ್ತು. ಅದನ್ನು ಬಿಜೆಪಿ ಸರಕಾರ ಏಕಾಏಕಿ ಹಿಂಪಡೆದಿದೆ. ಆ ಮೀಸಲು ವ್ಯವಸ್ಥೆಯನ್ನು ಮರು ಜಾರಿ ಮಾಡಲಾಗುವುದು ಎಂದು ಜೆಡಿಎಸ್ ಘೋಷಣೆ ಮಾಡಿದೆ.

ಹಳೆಯ ಪಿಂಚಣಿ ಯೋಜನೆ ಜಾರಿ:

ರಾಜ್ಯಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಪರಾಮರ್ಶೆಗೆ ಒಳಪಡಿಸಿ ಹಳೆಯ ಪಿಂಚಣಿ ಯೋಜನೆಯನ್ನೇ ಜಾರಿ ಮಾಡಲಾಗುವುದು.

ಕೈಗಾರಿಕಾಭಿವೃದ್ಧಿ:

ರಾಜ್ಯದಲ್ಲಿ ವಿವಿಧ ಜಿಲ್ಲೆಗಳಲ್ಲಿ ಕೈಗಾರಿಕೆ ಮತ್ತು ಕೃಷಿ ಆಧಾರಿತ ಕ್ಲಸ್ಟರ್ ಗಳನ್ನು ಸ್ಥಾಪನೆ ಮಾಡಲಾಗುವುದು, ಸುಮಾರು 1000 ಕೋಟಿ ರೂ., ಬೆಳಗಾವಿಯಲ್ಲಿ 1000 ಕೋಟಿ ರೂ. ವೆಚ್ಚದಲ್ಲಿ ಚರ್ಮೋದ್ಯಮದ ಕ್ಲಸ್ಟರ್ ಸ್ಥಾಪನೆ ಮಾಡಲಾಗುವುದು, ಕೋಲಾರದಲ್ಲಿ 1000 ಕೋಟಿ ರೂ.ಗಳ ಟೊಮೋಟೊ ಕ್ಲಸ್ಟರ್, ರಾಮನಗರ ಮತ್ತು ಚಿಕ್ಕಬಳ್ಳಾಪುರದಲ್ಲಿ ತಲಾ 1000 ಕೋಟಿ ರೂ. ವೆಚ್ಚದ ರೇಷ್ಮೆ ಕ್ಲಸ್ಟರ್, ಉಳಿದ 15 ಜಿಲ್ಲೆಗಳಲ್ಲಿ 5000 ಕೋಟಿ ವೆಚ್ಚದಲ್ಲಿ ಕೃಷಿ, ಕೈಗಾರಿಕೆ ಆಧಾರಿತ ಕ್ಲಸ್ಟರ್ ಗಳನ್ನು ಸ್ಥಾಪಿಸಲಾಗುವುದು.

ಜಲಸಂನ್ಮೂಲ ಸದ್ಬಳಕೆ:

ಈಗಾಗಲೇ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು ರಾಜ್ಯಾದ್ಯಂತ ಕೈಗೊಂಡಿರುವ ಜನತಾ ಜಲಧಾರೆ ಕಾರ್ಯಕ್ರಮದ ಅಡಿಯಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯಲ್ಲಿ ರಾಜ್ಯಕ್ಕೆ ಹಂಚಿಕೆ ಆಗಿರುವ ಪ್ರತಿ ಹನಿ ನೀರನ್ನೂ ಸದ್ಬಳಕೆ ಮಾಡಿಕೊಳ್ಳಲಾಗಿದೆ. ಈ ಯೋಜನೆಯ 3ನೇ ಹಂತದ ಅನುಷ್ಠಾನಕ್ಕೆ ಬೇಕಿರುವ 1,33,867 ಎಕರೆ ಭೂಮಿಯನ್ನು ಸ್ವಾಧೀನ ಮಾಡಿಕೊಂಡು ಏಕರೂಪ ಭೂ ಪರಿಹಾರ ಕೊಡಲಾಗುವುದು. ಅಲ್ಲದೆ, ಈ ಯೋಜನೆಗೆ ಅಗತ್ಯ ಇರುವ ಅನುದಾನವನ್ನು ವಾರ್ಷಿಕ 5ರಿಂದ 10 ಸಾವಿರ ಕೋಟಿ ರೂ.ಗಳಿಗೆ ಹೆಚ್ಚಿಸಲು ಉದ್ದೇಶಿಸಲಾಗಿದೆ.

ನೆನೆಗುದಿಗೆ ಬಿದ್ದಿರುವ ಭದ್ರ ಮೇಲ್ದಂಡೆ ಯೋಜನೆಗೆ ಈಗ ವಾರ್ಷಿಕ 2000 ಕೋಟಿ ರೂ. ಅನುದಾನ ನೀಡಲಾಗುತ್ತಿದ್ದು, ಅದನ್ನು 5000 ಕೋಟಿ ರೂ.ಗಳಿಗೆ ಹೆಚ್ಚಿಸಲಾಗುವುದು. ಮುಂದಿನ ನಾಲ್ಕು ವರ್ಷಗಳ ಅವಧಿಯಲ್ಲಿ ಯೋಜನೆಯನ್ನು ಪೂರ್ಣಗೊಳಿಸಲಾಗುವುದು.

ಬೆಂಗಳೂರು ನಗರಕ್ಕೆ ಕುಡಿಯುವ ನೀರಿನ. ಅಗತ್ಯ ಪೂರೈಕೆ ಮಾಡುವ 67 ತಿಎಂಸಿತ ಮೇಕೆದಾಟು ಯೋಜನೆಯನ್ನು ಬದ್ಧತೆಯಿಂದ ಜಾರಿಗೆ ತರಲಾಗುವುದು ಎಂದು ಜೆಡಿಎಸ್ ಹೇಳಿದೆ. ಮಹದಾಯಿ ಯೋಜನೆಗೆ ಇರುವ ಎಲ್ಲ ತೊಡಕುಗಳನ್ನು ನಿವಾರಿಸಿ ಯೋಜನೆಯನ್ನು ಜಾರಿ ಮಾಡಲು ಕ್ರಮ ವಹಿಸಲಾಗುವುದು ಎಂದು ಪಕ್ಷ ತಿಳಿಸಿದೆ.

## ಡಿ.ಕೆ.ಶಿವಕುಮಾರ್ ರಕ್ತ ಯಾರಿಗೂ ಪ್ರಯೋಜನವಿಲ್ಲ; ಟಾಂಗ್ ನೀಡಿದ ಸಿಎಂ ಬೊಮ್ಮಾಯಿ



ಹುಬ್ಬಳ್ಳಿ: ಪ್ರಧಾನಿ ನರೇಂದ್ರ ಮೋದಿಯವರು ನಮ್ಮ ಕಾರ್ಯಕರ್ತರ ಜೊತೆ ಸಂವಾದ ನಡೆಸಿದ್ದು, ಬೂತ್ ಮಟ್ಟದಿಂದ ಪಕ್ಷ ಸಂಘಟನೆ ಮತ್ತು ಬೂತ್ ಮಟ್ಟದ ಗೆಲುವಿನ ಬಗ್ಗೆ ಸಂದೇಶ ನೀಡಿದ್ದಾರೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು. .

ಹುಬ್ಬಳ್ಳಿಯಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಸಿಎಂ ಬೊಮ್ಮಾಯಿ, ಪ್ರಧಾನಿಯವರು ಕಾರ್ಯಕರ್ತರ ಜೊತೆಗೆ ಸುದೀರ್ಘ ಸಂವಾದ ನಡೆಸಿದರು.

ಸಂವಾದದಲ್ಲಿ ಹಲವಾರು ವಿಚಾರ ಹೇಳಿದ್ದಾರೆ. ಬೂತ್ ಮಟ್ಟದಿಂದ ಪಕ್ಷ ಸಂಘಟನೆ ಬಗ್ಗೆ ಮತ್ತು ಬೂತ್ ಮಟ್ಟದ ಗೆಲುವಿನ ಬಗ್ಗೆ ಮಾತನಾಡಿದ್ದಾರೆ.

ನಮ್ಮ ಡಬಲ್ ಇಂಜಿನ್ ಸರ್ಕಾರ ರಾಜ್ಯದ ಅಭಿವೃದ್ಧಿಗೆ ಬದ್ಧವಾಗಿದೆ.

ನಮ್ಮ ಅವಧಿಯಲ್ಲಿ ಅಭಿವೃದ್ಧಿಗೆ ಒತ್ತು ನೀಡಲಾಗಿದೆ.

ಹಲವಾರು ವಲಯಗಳಲ್ಲಿ ನಾವು ಅಭಿವೃದ್ಧಿ ಸಾಧಿಸಿದ್ದು, ಮೋದಿಯವರು ಹತ್ತು ಹಲವಾರು ಮಾರ್ಗದರ್ಶನ ಮಾಡಿದ್ದಾರೆ ಎಂದರು.

ಮೋದಿಯವರ ಮಾರ್ಗದ ಅಂಶಗಳನ್ನು ಹಿಡಿದು ರಾಜ್ಯ ಜನತೆ ಮುಂದೆ ಹೋಗುತ್ತೇವೆ.

ರಾಜ್ಯದ ಜನತೆ ನಮಗೆ ಸಂಪೂರ್ಣ ಬಹುಮತ ನೀಡುವ ವಿಶ್ವಾಸವಿದೆ ಎಂದರು.

ಇದೇ ವೇಳೆ ರಕ್ತದಲ್ಲಿ ಬರೆದುಕೊಡುವೆ ಕಾಂಗ್ರೆಸ್ 150 ಸ್ಥಾನಗಳಲ್ಲಿ ಗೆಲ್ಲಲಿದೆ ಎಂಬ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯಿಸಿದ ಸಿಎಂ, ಇನ್ನೂ ಎರಡು ಮೂರು ದಿನದಲ್ಲಿ ರಾಜ್ಯದ ಚುನಾವಣಾ ಚಿತ್ರಣ ಬದಲಾಗಲಿದೆ.

ಚುನಾವಣೆಯಲ್ಲಿ ಜನರಿಗೆ ಮೋಸ ಮಾಡುವ ತಂತ್ರ ಕಾಂಗ್ರೆಸ್ ನದ್ದು ಎಂದು ಟಾಂಗ್ ನೀಡಿದರು.

150 ಸ್ಥಾನ ಯಾರಿಗೆ ಕೊಡಬೇಕು ಎಂದು ಜನ ತೀರ್ಮಾನ ಮಾಡುತ್ತಾರೆ. ಡಿ.ಕೆ ಶಿವಕುಮಾರ್ ರಕ್ತ ಯಾರಿಗೂ ಪ್ರಯೋಜನ ಆಗುವುದಿಲ್ಲ. ನಮಗೆ ಜನರ ಮೇಲೆ ವಿಶ್ವಾಸ ಇದೆ ಎಂದು ಹೇಳಿದರು.

## ಶೋಭಾ ಕರಂದ್ಲಾಜೆ ಪತ್ರಕ್ಕೆ ಸಿದ್ದರಾಮಯ್ಯ ಗರಂ



ಬೆಂಗಳೂರು: ರಾಜ್ಯದಲ್ಲಿ ಚುನಾವಣೆ ನಡೆಸುತ್ತಿರುವುದು ಚುನಾವಣಾ ಆಯೋಗವೋ? ಭಾರತೀಯ ಜನತಾ ಪಕ್ಷವೋ? ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಬಿಜೆಪಿ ಜಿಲ್ಲಾಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಅಭ್ಯರ್ಥಿಗಳು ಹಾಗೂ ಚುನಾವಣೆ ಏಜಂಟರಿಗೆ ಬರೆದ ಪತ್ರದ ಕು–ರಿತು ಪ್ರಸ್ತಾಪಿಸಿ ಪತ್ರಿಕಾ ಹೇಳಿಕೆ ನೀಡಿರುವ ಸಿದ್ದರಾಮಯ್ಯ, ಪಕ್ಷದ ಪದಾಧಿಕಾರಿಗಳು ನಿರ್ಧರಿಸಲಿರುವುದು ಸೂಕ್ಷ್ಮ, ಅತಿಸೂಕ್ಷ್ಮ ಮತಗಟ್ಟೆಗಳನ್ನೋ? ಬಿಜೆಪಿ ಪರ ಮತ್ತು ವಿರೋಧಿ ಮತದಾರರು ಇರುವ ಮತಗಟ್ಟೆಗಳನ್ನೋ? ಎಂದು ಪ್ರಶ್ನಿಸಿದ್ದಾರೆ.

ತಮ್ಮ ಪಕ್ಷದ ಪರವಾಗಿಲ್ಲದ ಮತದಾರರು ಇರುವ ಮತಗಟ್ಟೆಗಳಲ್ಲಿ ಭದ್ರತೆಯ ನೆಪದಲ್ಲಿ ಕೇಂದ್ರ ಸೇನಾಪಡೆಗಳನ್ನು ನಿಯೋಜಿಸಿ ಮತದಾರರನ್ನು ಬೆದರಿಸಿ ಅವರು ಮತದಾನ ಮಾಡದಂತೆ ತಡೆಯುವುದು ಈ ಪತ್ರದ ದುರುದ್ದೇಶವಾಗಿದೆ. ಚುನಾವಣಾ ಮತಗಟ್ಟೆಗಳಲ್ಲಿ ವೆಬ್ ಕಾಸ್ಟಿಂಗ್ ಮತ್ತು ವಿಡಿಯೋ ರೆಕಾರ್ಡಿಂಗ್ ಮಾಡುವ ಹೊಣೆ ಚುನಾವಣಾ ಆಯೋಗದಲ್ಲವೇ? ಇದನ್ನು ನಡೆಸಲು ರಾಜಕೀಯ ಪಕ್ಷಕ್ಕೆ ಅನುಮತಿ ಕೊಟ್ಟವರು ಯಾರು?

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರೇ ಈ ಪತ್ರ ಬರೆದಿರುವುದನ್ನು ನೋಡಿದರೆ ಕೇಂದ್ರ ಸರ್ಕಾರವೇ ಈ ಅಕ್ರಮ ಚಟುವಟಿಕೆಯಲ್ಲಿ ಷಾಮೀಲಾಗುರುವುದು ಸ್ಪಷ್ಟವಾಗಿದೆ.

ಕೇಂದ್ರ ಚುನಾವಣಾ ಆಯುಕ್ತರು ತಕ್ಷಣ ಮಧ್ಯೆಪ್ರವೇಶಿಸಿ ಸಚಿವೆ ಶೋಭಾ ಕರಂದ್ಲಾಜೆ ಅವರನ್ನು ವಿಚಾರಣೆಗೊಳಪಡಿಸಿ ಅವರು ಯಾವುದೇ ಚುನಾವಣಾ ಪ್ರಚಾರದಲ್ಲಿ ಭಾಗವಹಿಸದಂತೆ ನಿಷೇಧಿಸಬೇಕು. ಅವರು ಪಕ್ಷದ ನಾಯಕರು ಮತ್ತು ಅಭ್ಯರ್ಥಿಗಳಿಂದ ಪಡೆದಿರುವ ಮಾಹಿತಿಯನ್ನು ವಶಕ್ಕೆ ಪಡೆಯಬೇಕು ಎಂದು ಆಗ್ರಹಿಸಿದ್ದಾರೆ.

## ತಮಿಳು ನಾಡಗೀತೆ ನಿಲ್ಲಿಸಿದ ಈಶ್ವರಪ್ಪ

ಶಿವಮೊಗ್ಗ: ಇಲ್ಲಿನ ಎನ್ ಇಎಸ್ ಮೈದಾನದಲ್ಲಿ ಗುರುವಾರ ಮಧ್ಯಾಹ್ನ ಮಾಜಿ ಐಪಿಎಸ್ ಅಧಿಕಾರಿ ಅಣ್ಣಾಮಲೈ ನೇತೃತ್ವದಲ್ಲಿ ಬಿಜೆಪಿಯಿಂದ ಆಯೋಜಿಸಿದ್ದ ತಮಿಳು ಬಾಂಧವರ ಸಮಾವೇಶದಲ್ಲಿ ತಮಿಳುನಾಡು ನಾಡಗೀತೆಯನ್ನು ಅರ್ಧಕ್ಕೆ ತಡೆದ ಶಾಸಕ ಕೆ.ಎಸ್. ಈಶ್ವರಪ್ಪ ಕರ್ನಾಟಕದ ನಾಡಗೀತೆ ಹಾಕಿಸಿದರು. ಕರ್ನಾಟಕ ವಿಧಾನಸಭೆ ಚುನಾವಣೆ ಸಹ ಉಸ್ತುವಾರಿಯೂ ಆದ ತಮಿಳುನಾಡು ಬಿಜೆಪಿ ಘಟಕದ ಅಧ್ಯಕ್ಷ ಅಣ್ಣಾಮಲೈ ಅವರೊಂದಿಗೆ, ಶಿವಮೊಗ್ಗ ನಗರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಎನ್. ಚನ್ನಬಸಪ್ಪ (ಚನ್ನಿ) ಕೂಡ ಸಮಾವೇಶದಲ್ಲಿ ಪಾಲ್ಗೊಂಡಿದ್ದಾರೆ. ಸಮಾವೇಶ ಆರಂಭವಾಗುತ್ತಿದ್ದಂತೆಯೇ ಸಂಘಟಕರು ಈಗ ತಮಿಳು ನಾಡಗೀತೆ ಆರಂಭವಾಗಲಿದೆ. ಎಲ್ಲರೂ ಎದ್ದು ನಿಂತುಕೊಳ್ಳಿ ಎಂದು ಮನವಿ ಮಾಡಿದರು. ಆಗ ಸಮಾವೇಶದಲ್ಲಿ ನೆರೆದವರ ಜೊತೆ ವೇದಿಕೆಯಲ್ಲಿದ್ದ ಈಶ್ವರಪ್ಪ ಸೇರಿದಂತೆ ಗಣ್ಯರು ಎದ್ದು ನಿಂತರು. ಧ್ವನಿವರ್ಧಕದಲ್ಲಿ ತಮಿಳುನಾಡು ನಾಡಗೀತೆ ಆರಂಭವಾಗುತ್ತಿದ್ದಂತೆಯೇ ಆಸನದ ಬಳಿಯಿಂದ ಡಯಾಸ್ ನತ್ತ ಬಂದ ಈಶ್ವರಪ್ಪ, ನಾಡಗೀತೆ ನಿಲ್ಲಿಸುವಂತೆ ಸಂಘಟಕ–ರಿಗೆ ಸೂಚಿಸಿದರು. ಕರ್ನಾಟಕದ ನಾಡಗೀತೆ ಹಾಕಿಸಿದರು. ನಂತರ ವೇದಿಕೆಯಲ್ಲಿದ್ದ ಗಣ್ಯರು ಕನ್ನಡದ ನಾಡಗೀತೆಗೆ ಗೌರವ ಸಲ್ಲಿಸಿದರು. ಕ್ಯಾಸೆಟ್ ನಲ್ಲಿ ತಮಿಳು ನಾಡಗೀತೆ ಹಾಕುವುದು ಬೇಡ. ಬೇಕಿದ್ದರೆ ಇಲ್ಲಿರುವ ಯಾರಾದರೂ ತಮಿಳು ಹೆಣ್ಣುಮಕ್ಕಳು ಬಂದು ಹಾಡಲಿ ರಂದು ಈಶ್ವರಪ್ಪ ಹೇಳಿದರೂ ಯಾರೂ ಮುಂದೆ ಬರಲಿಲ್ಲ. ನಂತರ ಕ್ಯಾಸೆಟ್ ಮೂಲಕ ಕನ್ನಡ ನಾಡಗೀತೆ ಬಿತ್ತರಿಸಲಾಯಿತು.

## 29ರಿಂದ ಪ್ರಧಾನಿ ಮೋದಿ ಚುನಾವಣಾ ಪ್ರವಾಸ ಕುಡಚಿಯಲ್ಲಿ ಸಾರ್ವಜನಿಕ ಸಭೆಯಲ್ಲಿ ಭಾಗಿ



ಬೆಂಗಳೂರು: ಪ್ರಧಾನಿ ನರೇಂದ್ರಮೋದಿ ಇದೇ ಶನಿವಾರ ಮತ್ತು ಭಾನುವಾರ (ಏ.29, 30) ರಾಜ್ಯದಲ್ಲಿ ಚುನಾವಣಾ ಪ್ರಚಾರ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಕೇಂದ್ರ ಸಚಿವರಾದ ಕು.ಶೋಭಾ ಕರಂದ್ಲಾಜೆ ತಿಳಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ಮಾಧ್ಯಮ ಕೇಂದ್ರದಲ್ಲಿ ಬಿಜೆಪಿ ರಾಜ್ಯ ಚುನಾವಣಾ ನಿರ್ವಹಣಾ ಸಮಿತಿ ಸಂಚಾಲಕರು ಹಾಗೂ ಕೇಂದ್ರ ಸಚಿವರಾದ ಕು.ಶೋಭಾ ಕರಂದ್ಲಾಜೆ ಅವರು ಪತ್ರಿಕಾಗೋಷ್ಠಿಯಲ್ಲಿ ಈ ಮಾಹಿತಿ ತಿಳಿಸಿದರು.

ಪ್ರಧಾನಿಯವರು ಏ.29ರಂದು ಬೆಳಿಗ್ಗೆ 9 ಗಂಟೆಗೆ ಬೀದರ್ ಜಿಲ್ಲೆ ಹುಮ್ನಾಬಾದ್ನಲ್ಲಿ, ಮಧ್ಯಾಹ್ನ 1 ಗಂಟೆಗೆ ವಿಜಯಪುರದಲ್ಲಿ, 3ಕ್ಕೆ ಬೆಳಗಾವಿ ಜಿಲ್ಲೆ ಕುಡುಚಿಯಲ್ಲಿ ಸಾರ್ವಜನಿಕ ಸಭೆಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ಅಂದು ಸಂಜೆ ಬೆಂಗಳೂರಿನಲ್ಲಿ ಮಾಗಡಿ ರಸ್ತೆಯ ನೈಸ್ ರೋಡ್ನಿಂದ ಸುಮನಹಳ್ಳಿವರೆಗೆ ಸುಮಾರು 4.5 ಕಿ.ಮೀ ದೂರ ರೋಡ್ ಷೋ ನಡೆಸಲಿದ್ದಾರೆ. ರೋಡ್ ಷೋ ಗೆ ಸುಮಾರು 450 ಬ್ಲಾಕ್ಗಳನ್ನು ಸಂಯೋಜಿಸಲಾಗಿದೆ ಎಂದು ತಿಳಿಸಿದರು.

ಏ.30ರಂದು ಪ್ರಧಾನಿಯವರು ಬೆಳಿಗ್ಗೆ 11.30ಕ್ಕೆ ಕೋಲಾರದಲ್ಲಿ, ಮಧ್ಯಾಹ್ನ 1.00 ಗಂಟೆಗೆ ಕೋಲಾರದಲ್ಲಿ, ಸಂಜೆ 4 ಗಂಟೆಗೆ ಹಾಸನ ಜಿಲ್ಲೆ ಬೇಲೂರಿನಲ್ಲಿ ಚುನಾವಣಾ ಪ್ರಚಾರ ಸಭೆಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಸಂಜೆ ಮೈಸೂರಿನಲ್ಲಿ ಜೆ.ಎಸ್.ಎಸ್ ವಿದ್ಯಾಪೀಠ ವೃತ್ತದಿಂದ ಬನ್ನಿಮಂಟಪ ವೃತ್ತದ ವರೆಗೆ ಸುಮಾರು 5 ಕಿ.ಮೀ. ದೂರ ರೋಡ್ ಷೋ ನಡೆಸಲಿದ್ದಾರೆ ಎಂದರು.

ನರೇಂದ್ರಮೋದಿ ಇಂದು ರಾಜ್ಯದ 67 ಲಕ್ಷ 900 ಕಾರ್ಯಕರ್ತರೊಂದಿಗೆ ವರ್ಚ್ಯುವಲ್ ಮೂಲಕ ನೇರ ಸಂವಾದ ನಡೆಸಿ ಕಾರ್ಯಕರ್ತರಲ್ಲಿ ಹುರುಪು, ಉತ್ಸಾಹ ತುಂಬಿ ಪ್ರೇರಣೆ ನೀಡಿದ್ದಾರೆ ಎಂದು ಕು.ಶೋಭಾ ಕರಂದ್ಲಾಜೆ ತಿಳಿಸಿದರು.

ರಾಜ್ಯದ 58,112 ಬೂತ್ಗಳಲ್ಲಿ, 1,680 ಜಿಲ್ಲಾ ಪಂಚಾಯತ್ ಮಟ್ಟದಲ್ಲಿ ಈ ಸಂವಾದವನ್ನು ಹಮ್ಮಿಕೊಳ್ಳಲಾಗಿತ್ತು. ಬೂತ್ ಮತ್ತು ಹೋಬಳಿ ಮಟ್ಟದಲ್ಲಿ ಟಿ.ವಿಗಳ ಮೂಲಕ ಜಿಲ್ಲಾ ಪಂಚಾಯತ್ ಮಟ್ಟದಲ್ಲಿ ಎಲ್ಇಡಿ ಸ್ಕ್ರೀನ್ ಮೂಲಕ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಕಾರ್ಯಕ್ರಮವನ್ನು ವೀಕ್ಷಿಸಿದ್ದಾರೆ. ಹೊಸ ತಂತ್ರಜ್ಞಾನ ಬಳಸಿಕೊಂಡು ಇದೇ ಮೊದಲ ಬಾರಿ ಬೃಹತ್ ಪ್ರಮಾಣದಲ್ಲಿ ನೇರ ಸಂವಾದ ಕಾರ್ಯಕ್ರಮ ನಡೆದು ಯಶಸ್ವಿಯಾಗಿದೆ ಎಂದು ತಿಳಿಸಿದರು. ಮೋದಿಯವರು ಸಾಮಾನ್ಯ ಕಾರ್ಯಕರ್ತನಾಗಿ ಬೆಳೆದು ಹಲವು ಜವಾಬ್ದಾರಿಗಳನ್ನು ಹೊತ್ತವರು. ಪಕ್ಷ ಅಸ್ತಿತ್ವದಲ್ಲಿರದ ಸಂದರ್ಭದಲ್ಲಿ ಯಾತ್ರೆಗಳ ಮೂಲಕ ವಾಜಪೇಯಿ, ಅಡ್ವಾಣಿ ಅವರೊಂದಿಗೆ ಪಕ್ಷ ಕಟ್ಟಿದ ಅಗ್ರಗಣ್ಯರಲ್ಲಿ ಒಬ್ಬರು. ದೇಶಾದ್ಯಂತ ಸಂಚರಿಸಿ, ಕಾರ್ಯಕರ್ತರ ನೋವು ಸಂಕಷ್ಟ ಮತ್ತು ಅವರ ಶ್ರಮ ಏನೆಂಬುದು ಅವರಿಗೆ ಗೊತ್ತಿದೆ. ಕಾರ್ಯಕರ್ತರನ್ನು ಇಷ್ಟು ಚೆನ್ನಾಗಿ ಬಲ್ಲವರು ಮೋದಿಯವರಿಗಿಂತ ಬೇರೊಬ್ಬರಿಲ್ಲ ಎಂದರು.

ಸಂವಾದ ಕಾರ್ಯಕ್ರಮದ ಮೂಲಕ ಕಾರ್ಯಕರ್ತರಲ್ಲಿ ಅವರು ಶಕ್ತಿ ತುಂಬಿದ್ದಾರೆ. ಡಬಲ್ ಇಂಜಿನ್ ಸರ್ಕಾರ ಏಕೆ ಅಗತ್ಯವೆಂಬುದನ್ನು ಪ್ರತಿಪಾದಿಸಿದ್ದಾರೆ. ಬಿಜೆಪಿ ಸರ್ಕಾರ ಇಲ್ಲದ ಕಡೆ ಅಭಿವೃದ್ಧಿ ಕುಂಠಿತಗೊಂಡಿದ್ದು, ಈ ರಾಜ್ಯಗಳಲ್ಲಿ ಕೇಂದ್ರದ ಯೋಜನೆಗಳನ್ನು ಜಾರಿಗೊಳಿಸಿಲ್ಲ ಎಂದು ಹೇಳಿದ್ದಾರೆ. ರಾಜ್ಯದ ಅಭಿವೃದ್ಧಿ ವೇಗಕ್ಕೆ ಬಿಜೆಪಿ ಸರ್ಕಾರ ಅಗತ್ಯವೆಂಬುದನ್ನು ಕಾರ್ಯಕರ್ತರು ಮನೆ–ಮನೆಗೆ ಹೋಗಿ ಮನವರಿಕೆ ಮಾಡಬೇಕು ಎಂದು ಕರೆ ನೀಡಿದ್ದಾರೆ ಎಂದು ಅವರು ತಿಳಿಸಿದರು. ಕಾಂಗ್ರೆಸ್ ಪಕ್ಷ ನೀಡುತ್ತಿರುವ ಗ್ಯಾರಂಟಿಗಳನ್ನು ಜನರು ನಂಬುವುದಿಲ್ಲ. ಕಾಂಗ್ರೆಸ್ನ ಯಾವುದೇ ಗ್ಯಾರಂಟಿಗೆ ವಾರಂಟಿ ಇಲ್ಲ. ಸುಳ್ಳು ಪ್ರಚಾರಗಳನ್ನು ನಡೆಸುತ್ತಿರುವ ಕಾಂಗ್ರೆಸ್ ಅಧಿಕಾರಕ್ಕೆ ಬರುವುದಿಲ್ಲ. ಕಳೆದ 9 ವರ್ಷಗಳಲ್ಲಿ ದೇಶದಲ್ಲಿ ಕೋಮು ಗಲಭೆಗಳು ನಡೆದಿಲ್ಲ. ಕಾಂಗ್ರೆಸ್ ಆಡಳಿತದಲ್ಲಿದ್ದಾಗ ಕೋಮು ಗಲಭೆಗಳು, ಬಾಂಬ್ ಸ್ಫೋಟಗಳು ನಡೆದಿವೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಸಮಾಜಘಾತುಕ, ಕಾನೂನು ಬಾಹಿರ ಮತ್ತು ಭಯೋತ್ಪಾದನಾ ಚಟುವಟಿಕೆಗಳನ್ನು ನಿಯಂತ್ರಿಸಿದ್ದಾರೆ. ಸರ್ದಾರ್ ವಲ್ಲಭಬಾಯಿ ಪಟೇಲ್ ನಂತರ ಅಮಿತ್ ಶಾ ಅತ್ಯುತ್ತಮ ಗೃಹ ಸಚಿವರಾಗಿದ್ದಾರೆ ಎಂದು ಕು.ಶೋಭಾ ಕರಂದ್ಲಾಜೆ ಹೇಳಿದರು.

## ಯುಪಿ ಸಿಎಂ ಯೋಗಿ ಆದಿತ್ಯನಾಥರಿಗೆ ವಿಪಕ್ಷ ನಾಯಕ ಸಿದ್ದರಾಮಯ್ಯನವರ 10 ಸವಾಲುಗಳು

ಬೆಂಗಳೂರು: ಉತ್ತರ ಪ್ರದೇಶದ ಮುಖ್ಯಮಂತ್ರಿಗಳಾದ ಯೋಗಿ ಆದಿತ್ಯನಾಥ್ ಅವರು ರಾಜ್ಯದ ಬಿಜೆಪಿಯ ಪರವಾಗಿ ಚುನಾವಣಾ ಪ್ರಚಾರ ಮಾಡಲು ಬಂದಿದ್ದಾರೆ. ನಿನ್ನೆ ರಾಜ್ಯದ ಮಂಡ್ಯ ಮುಂತಾದ ಕಡೆ ಉತ್ತರ ಪ್ರದೇಶದ ಮಾದ–ರಿಯ ಬಗ್ಗೆ ಮಾತನಾಡಿದ್ದಾರೆ. ಉತ್ತರ ಪ್ರದೇಶದ ಮಾದರಿ ಎಂದರೆ ಏನು ಎಂದು ಇಡೀ ಜಗತ್ತಿಗೆ ಗೊತ್ತಾಗಿದೆ. ಆದರೂ ಅದರ ಬಗ್ಗೆ ಕರ್ನಾಟಕದಲ್ಲೂ ಪ್ರಸ್ತಾಪಿಸುವುದು ಹಾಸ್ಯಾಸ್ಪದವಾದ ಸಂಗತಿಯಾಗಿದೆ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಕಿಡಿ ಕಾ–ರಿದ್ದಾರೆ.

ಉತ್ತರ ಪ್ರದೇಶ ಮಾದರಿ ಎಂಬ ಸಿಎಂ ಯೋಗಿ ಆದಿತ್ಯನಾಥ್ ಅವರಿಗೆ ಸಿದ್ದರಾಮಯ್ಯ 10 ಸವಾಲು ಹಾಕಿದ್ದಾರೆ.

ಕೇಂದ್ರ ಸರ್ಕಾರದ ದಾಖಲೆಗಳ ಪ್ರಕಾರ ಉತ್ತರಪ್ರದೇಶದಲ್ಲಿ 6 ವರ್ಷದ ಒಳಗಿನ ಮಕ್ಕಳ ಅನಿಮಿಯಾ ಪ್ರಮಾಣ ಶೇ. 66.4 ರಷ್ಟಿದೆ. ಇದು 2016 ರಲ್ಲಿ ಶೇ.63.2 ರಷ್ಟಿತ್ತು. ಶೇ.3.2 ರಷ್ಟು ಅಪೌಷ್ಟಿಕತೆಯನ್ನು ಹೆಚ್ಚಿಸಿ ಮಕ್ಕಳನ್ನು ರೋಗಗ್ರಸ್ತ ಮಾಡಿದ್ದು ಯೋಗಿ ಆದಿತ್ಯ ನಾಥ್ ಅವರ ಸಾಧನೆ.

2016ರಲ್ಲಿ ಉತ್ತರ ಪ್ರದೇಶದ ಮಹಿಳೆಯರ ಸರಾಸರಿ ಜೀವಿತಾವಧಿ 68.5 ರಷ್ಟಿತ್ತು. 2019 ರಲ್ಲಿ ಅದು ಶೇ.66.2 ಕ್ಕೆ ಕುಸಿದಿದೆ. ಎಲ್ಲ ರಾಜ್ಯಗಳ ಜನರ ಜೀವಿತಾವಧಿ ಹೆಚ್ಚುತ್ತಿದ್ದರೆ ಉತ್ತರ ಪ್ರದೇಶದಲ್ಲಿ ಕುಸಿಯುತ್ತಿದೆ. ಇದೇ ಅಲ್ಲವೆ ಆದಿತ್ಯನಾಥ್ ಮಾದರಿ.

ತಲಾವಾರು ವಿದ್ಯುತ್ ಲಭ್ಯತೆಯು ಕರ್ನಾಟಕದಲ್ಲಿ 1184 ಕಿಲೋವ್ಯಾಟ್ಗಳಷ್ಟಿದ್ದರೆ, ಉತ್ತರ ಪ್ರದೇಶದಲ್ಲಿ ಕೇವಲ 642 ಕಿಲೋವ್ಯಾಟ್ಗಳಷ್ಟಿದೆ. ಆದಿತ್ಯನಾಥರು ಮುಖ್ಯಮಂತ್ರಿಗಳಾದ ಮೇಲೆ ಗಮನಾರ್ಹ ಬದಲಾವಣೆಯೇನೂ ಸಂಭವಿಸಿಲ್ಲ. ಅಭಿವೃದ್ಧಿಗೂ ವಿದ್ಯುತ್ ಬಳಕೆಗೂ ಸಂಬಂಧವಿದೆ.

2021 ರ ದಾಖಲೆಗಳ ಪ್ರಕಾರ ಉತ್ತರ ಪ್ರದೇಶದಲ್ಲಿ 3012 ತಜ್ಞ ವೈದ್ಯರುಗಳ ಹುದ್ದೆಗಳು ಮಂಜೂರಾಗಿದ್ದರೆ, ಕೆಲಸ ಮಾಡುತ್ತಿರುವವರು ಕೇವಲ 872 ಜನ ಮಾತ್ರ. 2030 ಹುದ್ದೆಗಳು ಖಾಲಿ ಇವೆ. ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೆಲಸ ಮಾಡಬೇಕಾದ ವೈದ್ಯರುಗಳ 1355 ಹುದ್ದೆಗಳು ಖಾಲಿ ಇವೆ. ಜನರ ಆರೋಗ್ಯ ಸುಧಾರಿಸದೆ ರಾಜ್ಯವನ್ನು ಅಭಿವೃದ್ಧಿ ಮಾಡುವುದು ಹೇಗೆ?

ಉತ್ತರ ಪ್ರದೇಶದಲ್ಲಿ ದಲಿತ, ಹಿಂದುಳಿದ, ಅಲ್ಪಸಂಖ್ಯಾತ, ಮಹಿಳೆ ಮತ್ತು ರೈತರು ಮುಂತಾದ ದಮನಿತ ವರ್ಗಗಳು ಬದುಕಲಾಗದಷ್ಟು ಪರಿಸ್ಥಿತಿ ಹಾಳಾಗಿದೆಯೆಂಬ ಮಾಹಿತಿ ಇದೆ. ಶತಮಾನಗಳಿಂದ ದಮನಿಸಲ್ಪಟ್ಟ ಜನರನ್ನು ಬಾಬಾಸಾಹೇಬರ ಆಶಯಗಳು, ಮಚ್ಚೇಂದ್ರನಾಥ್, ಗೋರಖ್ನಾಥರ, ಕಬೀರರ ಆಶಯಗಳಿಗೆ ವಿರುದ್ಧವಾಗಿ ದಮನಿಸಿ ನಾಶ ಮಾಡುವುದೆ ಉತ್ತರ ಪ್ರದೇಶ ಮಾದರಿಯೆಂಬುದನ್ನು ಆದಿತ್ಯನಾಥರು ಸಾಬೀತು ಮಾಡಿದ್ದಾರೆ. ಇದನ್ನು ಉತ್ತರ ಪ್ರದೇಶದ ಮಾದರಿ ಎನ್ನುವುದಕ್ಕಿಂತ ಆದಿತ್ಯನಾಥ್ ಮಾದರಿ ಎನ್ನಬೇಕಾಗುತ್ತದೆ. ಇಂಥ ಮಾದರಿಯನ್ನು ಕರ್ನಾಟಕದಲ್ಲಿ ಬಿತ್ತಲು ರಾಜ್ಯದ ಜನರು ಯಾವ ಕಾರಣ–ಕ್ಕೂ ಅವಕಾಶ ಕೊಡುವುದಿಲ್ಲ. ಇಲ್ಲಿ



ಬಸವಣ್ಣನವರು, ಕನಕದಾಸರು, ಶ್ರೀ ನಾರಾಯಣ ಗುರುಗಳು, ಮಹಾಕವಿ ಕುವೆಂಪು ಅವರು, ಬಾಬಾಸಾಹೇಬರು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಮತ್ತು ದೇವರಾಜ ಅರಸು ಅವರಂಥ ಧೀಮಂತರ ಮಹಾನ್ ಮಾದರಿಗಳು ಕರ್ನಾಟಕದಲ್ಲಿದೆ. ಅವುಗಳನ್ನು ಬೇಕಿದ್ದರೆ ಆದಿತ್ಯನಾಥರು ಕಲಿತುಕೊಂಡು ಹೋಗಿ ಅಲ್ಲಿ ಅಳವಡಿಸಿಕೊಳ್ಳಲಿ. ಆಗಲಾದರೂ ಅಲ್ಲಿನ ದಮನಿತರಾದ ನನ್ನ ಸೋದರ ಜಾತಿ–ಜನಾಂಗಗಳ ಜನರು ತುಸು ನೆಮ್ಮದಿಯಾಗಿ ಊಟ ಮಾಡಿ, ದುಡಿಮೆ ಮಾಡಿ ಜೀವಿಸಲಿ.

ಯೋಗಿ ಆದಿತ್ಯನಾಥರೆ ನೀವು ಯಾವ ಮುಖ ಹೊತ್ತು ರಾಜ್ಯದಲ್ಲಿ ಮತ ಕೇಳುತ್ತೀರಿ ಹೇಳಿ? ನಿಮ್ಮ ಅಂದಾದುಂದಿ ಆಡಳಿತ ನಡೆಸುವುದಕ್ಕಾಗಿ ದಕ್ಷಿಣದ ರಾಜ್ಯಗಳ ಜನರ ಜೀವ ಹಿಂಡಿ ಮೋದಿ ಸರ್ಕಾರ ನಿಮಗೆ ಅನುದಾನಗಳನ್ನು ಕೊಡುತ್ತಿದೆ. ನಿಮ್ಮ ರಾಜ್ಯದ ಬಜೆಟ್ನ ಶೇ.50 ರಷ್ಟು ಅನುದಾನವನ್ನು ಮೋದಿ ಸರ್ಕಾರ ಕೊಡುತ್ತಿದೆ. ಆದರೆ ಕರ್ನಾಟಕಕ್ಕೆ ಕೇವಲ ಶೇ. 16.25 ರಷ್ಟನ್ನು ಮಾತ್ರ ಕೊಡುತ್ತಿದೆ.

ಉತ್ತರ ಪ್ರದೇಶದ 2023–24ರ ಬಜೆಟ್ ಗಾತ್ರ 6.9 ಲಕ್ಷ ಕೋಟಿ ರೂ. ಅದರಲ್ಲಿ ತೆರಿಗೆ ಪಾಲು 183238 ಕೋಟಿ ರೂಪಾಯಿ ಮತ್ತು ಕೇಂದ್ರ ಯೋಜನೆಗಳಿಗೆ 114213 ಕೋಟಿ ರೂಪಾಯಿಗಳು ಎರಡೂ ಸೇರಿ 297451 ಕೋಟಿ ರೂಪಾಯಿಗಳನ್ನು ಉತ್ತರ ಪ್ರದೇಶವು ಕೇಂದ್ರದಿಂದ ಪಡೆಯುತ್ತಿದೆ. ಇದರಲ್ಲಿ ಹಣಕಾಸು ಆಯೋಗದ ನೇರ ಅನುದಾನಗಳು ಸೇರಿಲ್ಲ. ಸೇರಿದರೆ ಶೇ.50 ಅನ್ನೂ ಮೀರುತ್ತದೆ. ಉತ್ತರ ಪ್ರದೇಶದಲ್ಲಿ ಈ ವರ್ಷ ಜಿಎಸ್ಟಿ ಮತ್ತು ಆದಾಯ ತೆ–ರಿಗೆಗಳಿಂದ ಸಂಗ್ರಹವಾಗುವ ಅಂದಾಜು ಮೊತ್ತ 1.34 ಲಕ್ಷ ಕೋಟಿ ರೂಪಾಯಿಗಳು.

ಕರ್ನಾಟಕದ ಜನರಿಂದ ಮೋದಿ ಸರ್ಕಾರ ಜಿಎಸ್ಟಿ ಮತ್ತು ನೇರ ತೆರಿಗೆಗಳಿಂದ ಈ ವರ್ಷ 3.72 ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಆದಾಯ ಸಂಗ್ರಹಿಸುತ್ತದೆ. ಆದ–'ರೆ ನಮ್ಮ ರಾಜ್ಯಕ್ಕೆ ಸಿಗುವ ತೆರಿಗೆ ಪಾಲು 37 ಸಾವಿರ ಕೋಟಿ ಮತ್ತು ಕೇಂದ್ರ ಯೋಜನೆಗಳಿಗೆ ಸಿಗುವ ಪಾಲು 13 ಸಾವಿರ ಕೋಟಿ ರೂ. ಎರಡೂ ಸೇರಿದರೆ 50 ಸಾವಿರ ಕೋಟಿ ಆಗುತ್ತದೆ ಎಂದು ಅಂದಾಜಿಸಲಾಗಿದೆ. ಈ ಹಣವೂ ಪೂರ್ಣ ಪ್ರಮಾಣದಲ್ಲಿ ಬರುವುದು ಅನುಮಾನ. 1.34 ಲಕ್ಷ ಕೋಟಿ ತೆರಿಗೆ ಸಂಗ್ರಹಿಸಿ 3 ಲಕ್ಷ ಕೋಟಿಗೂ ಹೆಚ್ಚು ಅನುದಾನ ಪಡೆಯುವ ಉತ್ತರ ಪ್ರದೇಶವೆಲ್ಲಿ? 3.72 ಲಕ್ಷ ಕೋಟಿ ತೆರಿಗೆ ಪಾವತಿಸಿ 50 ಸಾವಿರ ಕೋಟಿ ರೂ ಪಾಲು ಪಡೆಯುವ ಕರ್ನಾಟಕವೆಲ್ಲಿ?

ಕೇಂದ್ರದಿಂದ ಇನ್ನೂ ಹೆಚ್ಚು ಅನುದಾನ ತೆಗೆದುಕೊಳ್ಳಿ ಅಡ್ಡಿಯಿಲ್ಲ. ತೆಗೆದುಕೊಂಡು ದಮನಿತ ಜಾತಿ ಸಮುದಾಯಗಳನ್ನು ಅಭಿವೃದ್ಧಿ ಮಾಡಿ ನಾನು ಸಂತೋಷ ಪಡುತ್ತೇನೆ. ಆದರೆ ಕೇಂದ್ರ ಉಳಿಸಿಕೊಳ್ಳುವ ಯಥೇಚ್ಛ ಸಂಪನ್ಮೂಲಗಳಲ್ಲಿ ನಮಗೆ ವಿಶೇಷ ಅನುದಾನಗಳನ್ನು ಕೊಡಿ, ಕರ್ನಾಟಕ ಮುಂತಾದ ದಕ್ಷಿಣದ ರಾಜ್ಯಗಳ ಕಾಮಧೇನುವಿನಂಥ ಕೆಚ್ಚಲು ಕೊಯ್ದು ನಮಗೆ ಪಾಲು ಕೊಡುವುದು ಬೇಡ ಎಂದು ನರೇಂದ್ರಮೋದಿಯವರಿಗೆ ನೀವು ಪತ್ರ ಬರೆದೊ ಇಲ್ಲ ಮನವಿ ಮಾಡಿಯೊ ಒತ್ತಾಯಿಸಿದ್ದರೆ, ನಿಮಗೆ ಕರ್ನಾಟಕಕ್ಕೆ ಬಂದು ಮತ ಕೇಳುವ ನೈತಿಕತೆ ಇರುತ್ತಿತ್ತು. ಈಗ ನಿಮ್ಮಲ್ಲಿ ಆ ನೈತಿಕತೆ ಉಳಿದಿಲ್ಲ. ಹಾಗಿದ್ದರೂ ಯಾವ ಮುಖ ಹೊತ್ತು ಮತ ಕೇಳುತ್ತೀರಿ?

ನೀವು ರಾಜ್ಯದಲ್ಲಿ ಹಲವು ಸುಳ್ಳು ಹೇಳಿದ್ದೀರಿ. ಸುಳ್ಳು ನಿಮ್ಮ ವ್ಯಕ್ತಿತ್ವಕ್ಕೆ ಶೋಭೆ ತರುವುದಿಲ್ಲ. ನೀವು ಹೇಳಿದ ಸುಳ್ಳುಗಳಲ್ಲಿ ಪಿಎಫ್ಐ ವಿಚಾರವೂ ಸೇ–ರಿದೆ. ಕರ್ನಾಟಕದಲ್ಲಿ ಪಿಎಫ್ಐ ಮತ್ತು ಎಸ್ಡಿಪಿಐ ಸಂಘಟನೆಗಳ ಕಾರ್ಯಕರ್ತರ ಮೇಲಿನ ಪ್ರಕರಣವನ್ನು ಬಿಜೆಪಿ ಸರ್ಕಾರವೆ ಹಿಂಪಡೆದಿದೆ ಎಂದು ಬೊಮ್ಮಾಯಿ ಸರ್ಕಾರವೆ ನನಗೆ ಮಾಹಿತಿ ನೀಡಿದೆ. ಉತ್ತರ ಕರ್ನಾಟಕದ ಹೊನ್ನಾವರದಲ್ಲಿ ದಾಖಲಾಗಿದ್ದ ಸಿಸಿ.ನಂ.483/2019 ಕ್ಕೆ ಸಂಬಂಧಿಸಿದ ಪ್ರಕರಣವನ್ನು ದಿನಾಂಕ 13–10–2020 ರಂದು ರಾಜ್ಯ ಬಿಜೆಪಿ ಸರ್ಕಾರ ಹಿಂದಕ್ಕೆ ಪಡೆದಿದೆ. ಇದಕ್ಕೆ ಏನು ಹೇಳುತ್ತೀರಿ ಯೋಗಿ ಆದಿತ್ಯನಾಥ್ ಅವರೆ? ನೀವು ಸುಳ್ಳು ಹೇಳುತ್ತಾ ಹೋಗಿ. ನಾವು ಸತ್ಯವೇನೆಂದು ನಿಮ್ಮ ಮುಖದ ಮುಂದೆ ಇಡುತ್ತೇವೆ. ಯಾರು ಸರಿ ಎಂದು ಜನರೆ ತೀರ್ಮಾನಿಸಲಿ ಎಂದು ಹೇಳಿದ್ದಾರೆ.

## ಡಿ.ಬಿ. ಇನಾಮದಾರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ



ಬೆಳಗಾವಿ : ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಮಾಜಿ ಸಚಿವ ಡಿ.ಬಿ. ಇನಾಮದಾರ ಅವರ ನಿಧನದ ಹಿನ್ನೆಲೆಯಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಅವರು ಇಂದು ಡಿ.ಬಿ. ಇನಾಮದಾರ ಸ್ವಗ್ರಾಮ ನೇಗಿನಹಾಳದ ನಿವಾಸಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಗುರುವಾರದಂದು ಬೈಲಹೊಂಗಲ ತಾಲೂಕಿನ ನೇಗಿನಹಾಳ ಗ್ರಾಮದಲ್ಲಿರುವ ನಿವಾಸದಲ್ಲಿ ಡಿ.ಬಿ. ಇನಾಮದಾರ ಅವರ ಭಾವಚಿತ್ರಕ್ಕೆ ನಮನ ಸಲ್ಲಿಸಿದ ಶಾಸಕ ಸತೀಶ ಜಾರಕಿಹೊಳಿ ಅವರು ಮೃತ ಡಿ.ಬಿ. ಇನಾಮದಾರ ಪುತ್ರ ವಿಕ್ರಮ್ ಇನಾಮದಾರ ಸೇರಿದಂತೆ ಕುಟುಂಬದವರಿಗೆ ಸಾಂತ್ವನ ಹೇಳಿದರು. ನಂತರ ಮಾತನಾಡಿದ ಸತೀಶ ಜಾರಕಿಹೊಳಿ ಅವರು, ಮಾಜಿ ಸಚಿವ ಡಿ.ಬಿ. ಇನಾಮದಾರ ನಿಧನದಿಂದ ಕಾಂಗ್ರೆಸ್ ಪಕ್ಷಕ್ಕೆ ಮಾತ್ರವಲ್ಲದೇ ಇಡೀ ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಜಾರಕಿಹೊಳಿ ಭಾವುಕರಾದರು. ಅವರು ಎಲ್ಲಾ ವರ್ಗದವರೊಂದಿಗೂ ಒಡನಾಟ ಹೊಂದಿದ್ದರು.ಪಕ್ಷ ಸಂಘಟನೆ ವಿಚಾರದಲ್ಲಿ ಸದಾ ಸಕ್ರಿಯರಾಗಿರುತ್ತಿದ್ಧರು ಎದ್ದರು

## ಶೇ.98ರಷ್ಟು ಭರವಸೆ ಈಡೇರಿಸಿದ್ದೇನೆ; ಇನ್ನಷ್ಟು ಅಭಿವೃದ್ಧಿಗೆ ಕೈ ಜೋಡಿಸಿ: ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: 5 ವರ್ಷದ ಹಿಂದೆ, 2018ರ ವಿಧಾನ ಸಭೆ ಚುನಾವಣೆಗೆ ಸ್ಪರ್ಧಿಸಿದ ಸಂದರ್ಭದಲ್ಲಿ ಮತದಾರರಿಗೆ ನೀಡಿದ್ದ ಭರವಸೆಗಳಲ್ಲಿ ಶೇ.98ರಷ್ಟು ಈಡೇರಿಸಿದ್ದೇನೆ. ವಿರೋಧ ಪಕ್ಷದ ಶಾಸಕಿಯಾಗಿದ್ದರಿಂದ 2 ಭರವಸೆಗಳು ಮಾತ್ರ ಬಾಕಿ ಉಳಿದಿದ್ದು, ಈ ಬಾರಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬರಲಿದ್ದು ಅವುಗಳನ್ನೂ ಮೊದಲ ಆದ್ಯತೆಯ ಮೇಲೆ ಈಡೇರಿಸುತ್ತೇನೆ ಎಂದು ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಭರವಸೆ ನೀಡಿದ್ದಾರೆ.

ಮೇ 10ರಂದು ನಡೆಯಲಿರುವ ವಿಧಾನಸಭೆ ಚುನಾವಣೆ ಪ್ರಯುಕ್ತ ಕಂಗ್ರಾಳಿ ಸೇರಿದಂತೆ ವಿವಿಧ ಭಾಗಗಳಲ್ಲಿ ಅವರು ಪ್ರಚಾರ ನಡೆಸುತ್ತಿದ್ದರು. ಕ್ಷೇತ್ರ ಹಲವು ವರ್ಷಗಳಿಂದ ಅಭಿವೃದ್ಧಿ ಕಾಣದೆ ಹಿಂದುಳಿದಿದ್ದರಿಂದ ಕಳೆದ ಬಾರಿ ಮೂಲಸೌಕರ್ಯಗಳಿಗೆ ಮೊದಲ ಆದ್ಯತೆ ನೀಡಿದ್ದೇನೆ. ರಸ್ತೆ, ಚರಂಡಿ, ಕುಡಿಯುವ ನೀರು, ಶಾಲೆ, ದೇವಸ್ಥಾನ, ಸಮುದಾಯ ಭವನಗಳ ಬೇಡಿಕೆಗಳನ್ನು ಈಡೇರಿಸಿದ್ದೇನೆ. ಇದರ ಜೊತೆಗೆ, ಕಾಲೇಜು ಮತ್ತು ಆಸ್ಪತ್ರೆ ಕಟ್ಟಿಸುವ ಯೋಜನೆಯನ್ನೂ ನಾನು ಹಾಕಿಕೊಂಡಿದ್ದೆ. ಆದರೆ ನಮ್ಮ ಸರಕಾರವಿಲ್ಲದ್ದರಿಂದ ಅದು ಸಾಧ್ಯವಾಗಲಿಲ್ಲ. ಮುಂದಿನ ದಿನಗಳಲ್ಲಿ ಅವುಗಳನ್ನು ಈಡೇರಿಸುತ್ತೇನೆ ಎಂದು ಅವರು ತಿಳಿಸಿದರು.

ಜಲಸಂಪನ್ಮೂಲ ಇಲಾಖೆಯಿಂದ 695.81 ಕೋಟಿ ರೂ., ಸಣ್ಣ ನೀರಾವರಿ ಇಲಾಖೆಯಿಂದ 3092 ಲಕ್ಷ ರೂ., ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ 5142.74 ಲಕ್ಷ ರೂ., ಲೋಕೋಪಯೋಗಿ ಇಲಾಖೆಯಿಂದ 1694.35 ಲಕ್ಷರೂ., ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 100 ಲಕ್ಷ ರೂ., ಕನ್ನಡ ಮತ್ತು ಸಂಸ್ಕೃತಿ ಇಲಾಖಿಯಿಂದ 50 ಲಕ್ಷ ರೂ., ಪ್ರವಾಸೋದ್ಯಮ ಇಲಾಖೆಯಿಂದ 300 ಲಕ್ಷ ರೂ., ಹಿಂದುಳಿದ ವರ್ಗಗಳ ಇಲಾಖಿಯಿಂದ 100 ಲಕ್ಷ ರೂ., ಶಾಸಕರ ನಿಧಿಯಿಂದ 792 ಲಕ್ಷ ರೂ., ಗ್ರಾಮೀಣಾಭಿವೃದ್ಧಿ ನಿಗಮದಿಂದ 800 ಲಕ್ಷ ರೂ., ಮುಜರಾಯಿ ಇಲಾಖೆಯಿಂದ 960 ಲಕ್ಷ ರೂ., ರಸ್ತೆ, ದೇವಸ್ಥಾನ, ಬ್ರಿಡ್ಜ್ ಕಂ ಬಾಂದಾರ, ಕೆರೆಗಳ ಅಭಿವೃದ್ಧಿ, ಸರಕಾರಿ ಶಾಲೆಗಳ ಕೊಠಡಿ ನಿರ್ಮಾಣ – ದುರಸ್ತಿ, ಶಾಲಾ ಮೈದಾನಗಳ ಅಭಿವೃದ್ಧಿಗೆ ವಿಶೇಷ ಅನುದಾನ ತಂದಿದ್ದೇನೆ ಎಂದು ಅವರು ತಿಳಿಸಿದರು.



ಕೊರೋನಾ, ಪ್ರವಾಹದಂತಹ ಸಂಕಷ್ಟದ ಸಂದರ್ಭದಲ್ಲಿ ನಿಮ್ಮ ಮನೆ ಮಗಳಾಗಿ ನನ್ನ ಕರ್ತವ್ಯ ನಿಭಾಯಿಸಿದ್ದೇನೆ.

ಉಚಿತ ಅಂಬುಲೆನ್ಸ್ ಒದಗಿಸಿದ್ದೇನೆ. ಔಷಧ, ಆಹಾರದ ಕಿಟ್ ಗಳನ್ನು ವಿತರಿಸಿದ್ದೇನೆ. ಗ್ರಾಮೀಣ ಮಕ್ಕಳಿಗೆ, ಯುವಕರಿಗೆ ಜಿಮ್ ಹಾಗೂ ಕ್ರೀಡಾ ಸಾಮಗ್ರಿಗಳನ್ನು ಒದಗಿಸಿದ್ದೇನೆ. ಸರಕಾರದ ಅನುದಾನವಲ್ಲದೆ ಲಕ್ಷ್ಮೀ ತಾಯಿ ಫೌಂಡೇಶನ್ ಮೂಲಕ ಸ್ವಂತ ಹಣವನ್ನೂ ಒದಗಿಸಿ ಅಗತ್ಯ ಕೆಲಸ, ಬಡವರ ಬೇಡಿಕೆಗಳಿಗೆ ಸ್ಪಂದಿಸಿದ್ದೇನೆ ಎಂದು ಲಕ್ಷ್ಮೀ ಹೆಬ್ಬಾಳಕರ್ ವಿವರಿಸಿದರು.

ಗ್ರಾಮೀಣ ಬಸ್ ನಿಲ್ದಾಣ, ವಾಲ್ಮೀಕಿ ಭವನ, ಮರಾಠಾ ಭವನ, ಅಂಬೇಡ್ಕರ್ ಭವನ, 103 ದೇವಸ್ಥಾನಗಳ ನಿರ್ಮಾಣ ಮತ್ತು ಜೀರ್ಣೋದ್ಧಾರ, ಜೈನ ಬಸದಿ, ಮಸೀದಿ, ಚರ್ಚ್ ಗಳ ನಿರ್ಮಾಣಕ್ಕೆ ಅನುದಾನ ಒದಗಿಸಿದ್ದೇನೆ. ರಾಜಹಂಸಗಡದಲ್ಲಿ ದೇಶದಲ್ಲೇ ಬೃಹತ್ತಾದ, ಅಪರೂಪದ ಛತ್ರಪತಿ ಶಿವಾಜಿ ಮಹಾರಾಜರ ಪುತ್ಥಳಿ ನಿರ್ಮಾಣ ಮಾಡಿ, ಕೋಟೆಯ ಅಭಿವೃದ್ಧಿ ಮಾಡಿಸಿದ್ದೇನೆ.

ಮಕ್ಕಳ ವಿದ್ಯಾಭ್ಯಾಸಗಳಿಗೆ ನೆರವಾಗಿದ್ದೇನೆ ಎಂದು ತಿಳಿಸಿದರು.

ವಿರೋಧ ಪಕ್ಷದ ಶಾಸಕಿಯಾಗಿ, ಅದರಲ್ಲೂ ಮೊದಲ ಬಾರಿಗೆ ಶಾಸಕರಾಗಿ ಇಷ್ಟೊಂದು ಅನುದಾನ ತರುವುದು ಸುಲಭವಿರಲಿಲ್ಲ. ಆದರೆ ಯಾರ್ಯಾರದ್ದೋ ಕಾಲು ಹಿಡಿದು, ಏನೆಲ್ಲ ಹೋರಾಟ ಮಾಡಿ ಕೆಲಸ ತಂದಿದ್ದೇನೆ.

ಈ ಬಾರಿ ನಮ್ಮದೇ ಸರಕಾರ ಬರುವುದರಿಂದ ಹೆಚ್ಚಿನ ಕೆಲಸ ತರಲು ಸಾಧ್ಯವಾಗುತ್ತದೆ ಎನ್ನುವ ವಿಶ್ವಾಸವಿದೆ. ವಿಶೇಷವಾಗಿ ಯುವಕರಿಗೆ ಉದ್ಯೋಗ ಒದಗಿಸುವಂತಹ ಯೋಜನೆಗಳನ್ನು ತರುತ್ತೇನೆ. ಉನ್ನತ ಶಿಕ್ಷಣ ಗ್ರಾಮೀಣ ಕ್ಷೇತ್ರದಲ್ಲೇ ಸಿಗುವಂತೆ ಮಾಡುವ ಸಂಕಲ್ಪ ಮಾಡಿದ್ದೇನೆ. ಅತ್ಯಂತ ಕಡಿಮೆ ದರದಲ್ಲಿ ಆರೋಗ್ಯ ಸೇವೆ ಒದಗಿಸುವ ವ್ಯವಸ್ಥೆ ಮಾಡುತ್ತೇನೆ ಎಂದು ಹೆಬ್ಬಾಳಕರ್ ಭರವಸೆ ನೀಡಿದರು.

ಬ್ಯಾಲೆಟ್ ಯುನಿಟ್ ನಲ್ಲಿ 4ನೇ ನಂಬರ್ ನಲ್ಲಿರುವ ನನ್ನ ಚುನಾವಣೆ ಚಿಹ್ನೆಯಾಗಿರುವ ಹಸ್ತದ ಗುರುತಿನ ಮುಂದಿರುವ ಬಟನ್ ಒತ್ತುವ ಮೂಲಕ ನನ್ನನ್ನು ಬೆಂಬಲಿಸಿ, ಅಭಿವೃದ್ಧಿಗೆ ಕೈ ಜೋಡಿಸಿ ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸ್ಥಳೀಯ ಯುವಕ ಸಂಘಗಳು, ಮಹಿಳಾ ಮಂಡಳಗಳು, ಕ್ರೀಡಾ ಹಾಗೂ ಸಾಂಸ್ಕೃತಿಕ ಸಂಘಗಳು ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಸಂಪೂರ್ಣ ಬೆಂಬಲ ಘೋಷಿಸಿದವು. ನಿಮ್ಮ ಪರವಾಗಿ ನಾವೇ ಪ್ರಚಾರ ಕೈಗೊಂಡು ಮತ ಹಾಕಿಸುತ್ತೇವೆ. ಕಳೆದಬಾರಿಗಿಂತ ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸುತ್ತೇವೆ ಎಂದು ಭರವಸೆ ನೀಡಿದರು.

## ಬಿಜೆಪಿ ಸೇರ್ಪಡೆಯಲ್ಲಿ ಪಾಲ್ಗೊಂಡ ಚಾಲಕ ಕಂ ನಿರ್ವಾಹಕ ಅಮಾನತು

ಯಾದಗಿರಿ: ಬಿಜೆಪಿ ಅಭ್ಯರ್ಥಿ ರಾಜೂಗೌಡ ನೇತೃತ್ವದಲ್ಲಿ ಸುರಪುರದಲ್ಲಿ ನಡೆದ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಸುರಪುರ ಘಟಕದ ಚಾಲಕ ಕಂ ನಿರ್ವಾಹಕ ಸೂರ್ಯಪ್ರಕಾಶ ಭಾಗಿಯಾಗಿದ್ದರಿಂದ ವಿಭಾಗೀಯ ನಿಯಂತ್ರಣಾಧಿಕಾರಿ ಸುನಿಲ್ ಕುಮಾರ ಚಂದರಗಿ ಅಮಾನತು ಮಾಡಿ ಆದೇಶಿಸಿದ್ದಾರೆ.

ಸೂರ್ಯಪ್ರಕಾಶ ಬಿಜೆಪಿ ಪಕ್ಷದ ಚಿಹ್ನೆಯುಳ್ಳ ಶಾಲು ಧರಿಸಿ ಪಕ್ಷದ ಕಾರ್ಯಕರ್ತರೊಂದಿಗೆ ಭಾಗಿಯಾಗಿರುವ ಬಗ್ಗೆ ನಿಗಮದ ವಿಭಾಗದ ಆಂತರಿಕ ವಿಚಾರಣೆಯಲ್ಲಿ ದೃಢಪಟ್ಟಿರುವುದರಿಂದ ಪ್ರಾಥಮಿಕ ವರದಿಯನ್ನು ಪಡೆದುಕೊಂಡು ನಿಯಂತ್ರಣಾಧಿಕಾರಿ ಅಮಾನತುಗೊಳಿಸಿದ್ದಾರೆ.

## ಶ್ರೀ ಭಗೀರಥ ಮಹರ್ಷಿ ಜಯಂತಿ ಆಚರಣೆ



ಗೋಕಾಕ: ಇಲ್ಲಿನ ಹಿಲ್ ಗಾರ್ಡನ್ ಕಚೇರಿಯಲ್ಲಿ ಶ್ರೀ ಭಗೀರಥ ಮಹರ್ಷಿ ಜಯಂತಿಯನ್ನು ಗುರುವಾರ ಆಚರಿಸಲಾಯಿತು.

ವಿಠ್ಠಲ ಪರಸನ್ನವರ ಹಾಗೂ ಪಾಂಡು ಮನ್ನಿಕೇರಿ ಸೇರಿದಂತೆ ಅನೇಕರು ಶ್ರೀ ಭಗೀರಥರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಗೌರವ ಅರ್ಪಿಸಿದರು.

ಭಗೀರಥ ಮಹರ್ಷಿರವರ ಜಯಂತಿಯು ಬರಿ ಆಚರಣೆಯಾಗಬಾರದು ಬದಲಿಗೆ ಅನುಸರಣೆ ಆಗಬೇಕು.ಶ್ರೀ ಭಗಿರಥ ಮಹರ್ಷಿ ಅಂತಹ ಮಹನೀಯರ ಯಶೋಗಾಥೆಯನ್ನು ನಮ್ಮ ಮಕ್ಕಳಿಗೂ ತಿಳಿಸಬೇಕು. ನಾವೆಲ್ಲರೂ ಅವರ ಮಾರ್ಗದಲ್ಲಿ ಸಾಗಿ ಸಮಾಜದಲ್ಲಿ ಒಳ್ಳೆಯ ಕೆಲಸಗಳನ್ನು ಮಾಡೋಣ ಎಂದರು.

ಇವತ್ತಿನ ದಿನ ನಾವು ನೀರನ್ನು ಹಣ–ಕೊಟ್ಟು ಕುಡಿಯುವಂತಹ ಪರಿಸ್ಥಿತಿಗೆ ಬಂದಿದೆ, ನಾವೆಲ್ಲರೂ ಭಗೀರಥ ಮಹಾಋಷಿ ಅವರಂತೆ ನಮ್ಮ ಮುಂದಿನ ಪೀಳಿಗೆಗೋಸ್ಕರ ನೀರನ್ನು ಉಳಿಸುವ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು.

ಇಡೀ ಮನುಕುಲಕ್ಕೆ ಮಹಾನೀಯ ಭಗೀರಥ ರವರ ಕೊಡುಗೆ ಅಪಾರವಾದದ್ದು, ನಾವೆಲ್ಲರೂ ಆಧುನಿಕ ಭಗೀರಥ ಆಗಬೇಕು. ಎಲ್ಲಿ ನೀರು ವ್ಯರ್ಥವಾಗಿ ಪೋಲಾಗಿರುತ್ತದೆಯೋ ಅದನ್ನು ತಡೆಯುವ ನಿಟ್ಟಿನಲ್ಲಿ ಜಲ ಸಂರಕ್ಷಣೆಗೆ ಮುಂದಾಗಬೇಕು ಎಂದು ವಿಠ್ಠಲ ಪರಸನ್ನವರ ತಿಳಿಸಿದರು.

ವಿಠ್ಠಲ ಪರಸನ್ನವರ ಹಾಗೂ ಪಾಂಡು ಮನ್ನಿಕೇರಿ, ಸುರೇಶ್, ಮಂಜು, ಪ್ರಹ್ಲಾದ್ ನಾಡಿಗೇರ್, ಶಿವ ಖಿಲಾರಿ, ಶ್ರೀಧರ್ ವೈದ್ಯ ಇದ್ದರು.

## ಜನಸೇವೆಗೆ ಮತ್ತೊಮ್ಮೆ ಬಿಜೆಪಿ ಬೆಂಬಲಿಸಿ: ಬಾಲಚಂದ್ರ ಜಾರಕಿಹೊಳಿ ಮನವಿ

ಗೋಕಾಕ: ಮೇ–10 ರಂದು ನಡೆಯುವ ಸಾರ್ವತ್ರಿಕ ಚುನಾವಣೆಯಲ್ಲಿ ಬಿಜೆಪಿಯಿಂದ ಸ್ಪರ್ಧೆ ಮಾಡುತ್ತಿದ್ದು, ಜನಸೇವೆಗೆ ಮತ್ತೊಮ್ಮೆ ಬಿಜೆಪಿಯನ್ನು ಬೆಂಬಲಿಸಿ ಆಶೀರ್ವಾದ ಮಾಡುವಂತೆ ಅರಭಾವಿ ಬಿಜೆಪಿ ಅಭ್ಯರ್ಥಿ ಹಾಗೂ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಮತದಾರರಲ್ಲಿ ಮನವಿ ಮಾಡಿದರು.



ತಾಲೂಕಿನ ಕೌಜಲಗಿ ಪಟ್ಟಣದಲ್ಲಿ ಬುಧವಾರ ಸಂಜೆ ಜರುಗಿದ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರ ಸಭೆಯಲ್ಲಿ ಮತಯಾಚಿಸಿ ಮಾತನಾಡಿದ ಅವರು, ಸತತ 6ನೇ ಬಾರಿಗೆ ವಿಧಾನ ಸಭಾ ಚುನಾವಣೆಯಲ್ಲಿ ಸ್ಪರ್ಧೆ ಮಾಡುತ್ತಿರುವುದಾಗಿ ಅವರು ಹೇಳಿದರು.

ಈ ಚುನಾವಣೆಯಲ್ಲಿ ಅಭಿವೃದ್ಧಿ ತತ್ವದಡಿ ಮತಯಾಚಿಸುತ್ತಿರುವೆ. ಅರಭಾವಿ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಲು ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕೆ ಇಳಿದಿದ್ದೇನೆ. ಆದರೆ ಬೇರೆಯವರಂತೆ ವಿನಾ ಕಾರಣ ಟೀಕಿಸಿ ಮತ ಕೇಳುತ್ತಿಲ್ಲ. ಅರಭಾವಿ ಕ್ಷೇತ್ರದಲ್ಲಿ ಎಲ್ಲದರಲ್ಲೂ ಪ್ರಗತಿ ಸಾಧಿಸಲಾಗಿದೆ. ಶಿಕ್ಷಣ, ನೀರಾವರಿ, ರಸ್ತೆ, ಕುಡಿಯುವ ನೀರು, ಆರೋಗ್ಯ ಮುಂತಾದ ಕ್ಷೇತ್ರಗಳಿಗೆ ಪ್ರಮುಖ ಆದ್ಯತೆ ನೀಡಿದ್ದೇನೆ. ಅದರಲ್ಲೂ ಕೌಜಲಗಿ ಭಾಗದ ರೈತರ ಪ್ರಮುಖ ಬೇಡಿಕೆಯಾಗಿದ್ದ ಕಲ್ಮಡ್ಡಿ ಏತ ನೀರಾವರಿ ಯೋಜನೆಯನ್ನು ಲೋಕಾರ್ಪಣೆ ಮಾಡುವ ಮೂಲಕ ರೈತ ಬಾಂಧವರಿಗೆ ಅನುಕೂಲ ಮಾಡಿಕೊಟ್ಟಿದ್ದೇನೆ. ಜೊತೆಗೆ ಶಿಕ್ಷಣ ಕ್ಷೇತ್ರದಲ್ಲೂ ಗಣನೀಯ ಸೇವೆ ಮಾಡಿದ್ದೇನೆಂದು ಅವರು ತಿಳಿಸಿದರು.

ಕ್ಷೇತ್ರದಲ್ಲಿ ಸಣ್ಣ–ಸಣ್ಣ ಸಮಾಜಗಳನ್ನು ಕ್ರೋಢಿಕರಿಸಲು ಪ್ರಾಮಾಣಿಕ ಸೇವೆ ಮಾಡಿದ್ದೇನೆ. ಎಲ್ಲ ಸಮಾಜಗಳಲ್ಲೂ ಪರಸ್ಪರ ಪ್ರೀತಿ ವಿಶ್ವಾಸವನ್ನು ಮೂಡಿಸಲು ಪ್ರಯತ್ನಿಸಿದ್ದೇನೆ. ಜೊತೆಗೆ ಎಲ್ಲ ಸಮಾಜಗಳಿಗೆ ರಾಜಕೀಯ ಪ್ರಾತಿನಿಧ್ಯ ನೀಡಿದ್ದೇನೆ. ಸರ್ವ ಸಮಾಜಗಳ ನಾಗರೀಕರು ಸಹ ನನ್ನನ್ನು ಒಬ್ಬ ಶಾಸಕನನ್ನಾಗಿ ನೋಡದೇ ತಮ್ಮ ಮನೆಯ ಮಗನಂತೆ ನೋಡುತ್ತಾ ಅಗಾಧ ಪ್ರೀತಿ ವಿಶ್ವಾಸವನ್ನು ತೋರುತ್ತಿದ್ದಾರೆ. ಕ್ಷೇತ್ರದ ಎಲ್ಲ ಮತದಾರ ಪ್ರಭುಗಳಿಗೆ ನಾನು ಆಭಾರಿಯಾಗಿದ್ದೇನೆಂದು ಅವರು ಹೇಳಿದರು.

ರಾಜ್ಯದಲ್ಲಿ ಅರಭಾವಿ ಮತಕ್ಷೇತ್ರವನ್ನು ಇನ್ನಷ್ಟು ಅಭಿವೃದ್ಧಿಪಡಿಸಬೇಕಿದೆ.

ಅದಕ್ಕಾಗಿ ಈ ಚುನಾವಣೆಯಲ್ಲಿ ಮತ್ತೊಮ್ಮೆ ಬಿಜೆಪಿಯಿಂದ ಸ್ಪರ್ಧೆ ಮಾಡುತ್ತಿದ್ದೇನೆ. ಕೆಲವರು ಅಧಿಕಾರ ಇಲ್ಲದೆಯೇ ಏನೇನೋ ಮಾತನಾಡುತ್ತಿದ್ದಾರೆ. ಜನರ ಬಳಿ 5ವರ್ಷಕೊಮ್ಮೆ ಬಂದು ಹೋಗುವ ಮುಖಗಳಿಗೆ ಯಾವುದೇ ಕಾರಣಕ್ಕೂ ಮಣೆ ಹಾಕಬೇಡಿ. ನಿಮ್ಮ ಕಷ್ಟಕಾರ್ಪಣ್ಯಗಳಿಗೆ ಸ್ಪಂಧಿಸುವ ವ್ಯಕ್ತಿಗಳಿಗೆ ಆಶೀರ್ವಾದ ಮಾಡಿ. ನಿಮ್ಮ ಸೇವೆಗೆ ನಾನು ಸದಾ ಸಿದ್ದನಿದ್ದೇನೆ.

## ಬಾಲಚಂದ್ರ ಜಾರಕಿಹೊಳಿ ಅಭಿಮಾನಿಗಳಿಂದ ಪೂಜೆ



ಹಳ್ಳೂರ: ಶಿವಾಪುರ ಗ್ರಾಮದ ಬಾಲಚಂದ್ರಣ್ಣ ಜಾರಕಿಹೊಳಿ ಅಭಿಮಾನಿ ಬಳಗದಿಂದ ಹಾಗೂ ಬಿಜೆಪಿ ಕಾರ್ಯಕರ್ತರಿಂದ ಅರಭಾವಿ ವಿಧಾನ ಸಭಾ ಮತ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾದ ಬಾಲಚಂದ್ರ ಜಾರಕಿಹೊಳಿ ಅವರು ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಜಯ ಗಳಿಸಲೆಂದು ಗ್ರಾಮದ ವಿವಿಧ ದೇವಾಲಯಗಳಲ್ಲಿ ಪೂಜೆ ಹಾಗೂ ಅಭಿಷೇಕ ಮಾಡಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರು ಹಾಗೂ ಜೆ ಜೆ ಆಸ್ಪತ್ರೆ ನಿರ್ದೇಶಕರಾದ ಶಿವನಗೌಡ ಶ. ಪಾಟೀಲ, ಈಶ್ವರ ಬ.ಬೆಳಗಲಿ,ಮಲ್ಲಪ್ಪ ಕು. ಡವಳೇಶ್ವರ್, ಸತೀಶ್ ಪಾಟೀಲ,ಮಲ್ಲಪ್ಪ ರಡ್ಡೆರಟ್ಟಿ ಮತ್ತು ಗ್ರಾಮದ ಬಿಜೆಪಿ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮೂತ್ರಪಿಂಡದಿಂದ ನೂರಾರು ಹರಳುಗಳನ್ನು ತೆಗೆದ ವೈದ್ಯರು

ಬೆಳಗಾವಿ: ಪದೇ ಪದೇ ಸೊಂಟ ನೋವು ಹಾಗೂ ಕಿಬ್ಬೊಟ್ಟೆಯ ಊತದೊಂದಿಗೆ ಮೂತ್ರಪಿಂಡದ (ಕಿಡ್ನಿಯ) ವಿಪರೀತ ಭಾದೆ ಪಡುತ್ತಿದ್ದ 60 ವರ್ಷದ ವಯಸ್ಕರಿಗೆ ಯಶಸ್ವಿಯಾಗಿ ಲೇಸರ್ ಶಸ್ತ್ರಚಿಕಿತ್ಸೆಯ ಮೂಲಕ ಮೂತ್ರಪಿಂಡದ ಹರಳುಗಳನ್ನು ಯಶಸ್ವಿಯಾಗಿ ಹೊರತೆಗೆದು ಉಪಚರಿಸಲಾಗಿದೆ.

ಈ ರೋಗಿಯು ಸತತ3 ವರ್ಷಗಳಿಂದ ಈ ಕಿಡ್ನಿ ಸಮಸ್ಯೆಯಿಂದ ಬಳಲುತ್ತಿದ್ದನು. ಅಲ್ಲದೇಅನಿಯಂತ್ರಿತ ಮಧುಮೇಹ ಹಾಗೂ ರಕ್ತದೊತ್ತಡದ ಸಮಸ್ಯೆಯಿಂದಾಗಿ ವೈದ್ಯರಿಗೆ ಚಿಕಿತ್ಸೆ ನೀಡಲು ಸವಾಲೆನಿಸುವ ಪ್ರಸಂಗದಲ್ಲಿತ್ತು,ಆ ನಂತರ ವ್ಯಕ್ತಿಗೆ ಅಲ್ಟ್ರಾಸೋನೊಗ್ರಾಫಿಯ ಮೂಲಕ ಆತನ ಮೂತ್ರಪಿಂಡದಲ್ಲಿ ಸುಮಾರು ನೂರಕ್ಕೂ ಅಧಿಕ ಹರಳುಗಳಿರುವದು ತಿಳಿದುಬಂದಿತು.

ಅಲ್ಲದೇರೋಗಿಯು ವಿಪರೀತ ಭಾಧೆಯಿಂದ ಚಿಕಿತ್ಸೆಗೆ ಅತೀವತೊಂದರೆಯಾಗುತ್ತಿತ್ತು.

ಇದನ್ನು ಮನಗಂಡ ಖ್ಯಾತ ಮೂತ್ರಪಿಂಡ ವೈದ್ಯರಾದ ಡಾ.ಅಮೇಯ ಪಥಾಡೆ ಅವರು ರೋಗಿಗೆ ಧೈರ್ಯ ತುಂಬಿ ಆತನನ್ನು ಶಸ್ತ್ರಚಿಕಿತ್ಸೆಗ ಮಾನಸಿಕವಾಗಿ ಸನ್ನದ್ಧಗೊಳಿಸಿದರು.

ನಂತರ ಸತತ 2 ಘಂಟೆಗಳ ಕಾಲ ನಡೆದ ಲೇಸರ ಶಸ್ತ್ರಚಿಕಿತ್ಸೆಯಲ್ಲಿ ನಿರತರಾದಡಾ. ಅಮೇಯ ಪಥಾಡೆ, ವೈದ್ಯ ವಿದ್ಯಾರ್ಥಿಗಳಾದ ಡಾ.ಮಂಜಿತ ಹಾಗೂ ಡಾ. ಈಶ್ವರ ಮತ್ತು ಅರವಳಿಕೆ



ವಿಭಾಗದ ಮುಖ್ಯಸ್ಥರಾದಡಾ.ಆರ್ ಜಿ ನೆಲವಿಗಿ ಅವರತಂಡ ಕಾರ್ಯದಲ್ಲಿ ರೋಗಿಯ ಮೂತ್ರಪಿಂಡದಿಂದಎಲ್ಲ ಹರಳುಗಳನ್ನು ತೆಗೆಯಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಡಾ.ಅಮೇಯ ಪಥಾಡೆ ಅವರು ಮೂತ್ರ ಪಿಂಡದಲ್ಲಿ ಹರಳುಗಳುಗಳಾಗುವದು ಇಂದಿನ ದಿನಗಳಲ್ಲಿ ಸಹಜವಾಗಿದೆ.


ಇದಕ್ಕೆಕಾರಣ ನಾವು ದಿನನಿತ್ಯ ಸೇವಿಸುವ ಆಹಾರವಾಗಿದೆ. ನಾವು ಸೇವಿಸಿದಷ್ಟು ಆಹಾರಕ್ಕೆತಕ್ಕಂತೆ ನಮ್ಮ ಶರೀರಕ್ಕೆ ವ್ಯಾಯಾಮ ಹಾಗೂ ಸಮರ್ಪಕವಾದ ನೀರಿನ ಸೇವನೆಯಿಂದ ದೇಹದಲ್ಲಿ ಉತ್ಪತ್ತಿಯಾಗುವ ಕ್ಯಾಲ್ಸಿಯಂ ಮತ್ತಿತರೆ ಪೌಷ್ಟಿಕಾಂಶಗಳು ಶರೀರಕ್ಕೆ ಶಕ್ತಿಯಾಗಿ ಪರಿಣಮಿಸುತ್ತವೆ.

ಆದರೆ ವ್ಯಾಯಾಮ ಮತ್ತು ನೀರಿನ ಸೇವನೆ ಕಡೆಗಣಿಸಿದರೆ ಶರೀರದಲ್ಲಿನ ಕ್ಯಾಲ್ಸಿಯಂ ಹರಳಿನ ರೂಪಕ್ಕೆತಿರುಗಿ ಮೂತ್ರಪಿಂಡದ ಸಮಸ್ಯೆಗಳು ತಲೆದೋರಬಹುದಾಗಿದೆ.

ಮೂತ್ರಪಿಂಡದ ಹರಳುಗಳ ಸಮಸ್ಯೆಯಿಂದ ದೂರ ಉಳಿಯಬಹುದಾಗಿದೆ. ಅಲ್ಲದೇ ಇಂತಹ ಸಮಸ್ಯೆಗಳು ಕಂಡುಬಂದಾಕ್ಷಣ ವೈದ್ಯರನ್ನು ಕಂಡು ತಕ್ಕ ಉಪಚಾರ ಪಡೆಯುವದು ಅತ್ಯಗತ್ಯವಾಗಿದೆ ಎಂದು ತಿಳುವಳಿಕೆ ನೀಡಿದರು.

ಈ ಸಂದರ್ಭದಲ್ಲಿ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದಡಾ.ಎಸ್ ಸಿ ಧಾರವಾಡಅವರು, ಯುಎಸ್ಎಮ್ ಕೆ ಎಲ್ ಇ ಯ ನಿರ್ದೇಶಕರಾದಡಾ. ಹೆಚ್ ಬಿ ರಾಜಶೇಖರ ಅವರು ವೈದ್ಯರತಂಡಕ್ಕೆ ಅಭಿನಂದಿಸಿದ್ದಾರೆ. ಕೆ ಎಲ್ ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರಕೋರೆ ಅವರು ಮೆಚ್ಚುಗೆ ವ್ಯಕ್ತ ಪಡಿಸಿದ್ದಾರೆ.

## ಇಂದು ಕಡತನಾಳದಲ್ಲಿ ಸಿಡಿದೆದ್ದ ಶಿವಶಕ್ತಿ ನಾಟಕ ಪ್ರದರ್ಶನ



ಬೈಲಹೊಂಗಲ: ಸಮೀಪದ ಕಡತನಾಳ ಗ್ರಾಮದ ಶ್ರೀ ಗ್ರಾಮದೇವಿ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ದುರದುಂಡೇಶ್ವರ ತರುಣ ನಾಟ್ಯ ಸಂಘ ಹಾಗೂ ಶ್ರೀ ಗ್ರಾಮದೇವಿ ಸೇವಾ ಸಮೀತಿ ಆಶ್ರಯದಲ್ಲಿ ಏ.28 ರಂದು ರಾತ್ರಿ 10–30 ಕ್ಕೆ ಡಿ.ಆರ್.ಪೂಜಾರ ವಿರಚಿತ ಸಿಡಿದೆದ್ದ ಶಿವಶಕ್ತಿ ಎಂಬ ಸಾಮಾಜಿಕ ನಾಟಕ ಪ್ರದರ್ಶನವಾಗಲಿದೆ.

ಗ್ರಾಮದ ವೇ.ಮೂ. ಮಹಾಂತಯ್ಯ ಹಿರೇಮಠ ಸಾನಿಧ್ಯ ವಹಿಸಲಿದ್ದು, ರೈತ ಮುಖಂಡ ಬಸಪ್ಪ ಕಾದ್ರೊಳ್ಳಿ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ.

ಗಣ್ಯರಾದ ಬಾಬುಗೌಡಾ ಪಾಟೀಲ ನಾಟಕ ಉದ್ಘಾಟಿಸಲಿದ್ದು, ಚನ್ನಮ್ಮನ ಕಿತ್ತೂರು ಪಿಎಸ್ಐ ರಾಜು ಮಮದಾಪೂರ ಉಪಸ್ಥಿತರಿರುರೆಂದು ಕಲಾವಿದ ರಮೇಶ ಸಂಗೊಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ಮೃತಿ ಇರಾಣಿ ಮತಯಾಚನೆ

ಬೆಳಗಾವಿ: ಮಹಿಳಾ ಮತ್ತು ಮಕ್ಕಳ ಕಲ್ಯಾಣ ಕೇಂದ್ರ ಸಚಿವೆ ಆದ ಶ್ರೀಮತಿ ಸ್ಮೃತಿ ಇರಾಣಿ ಸಭೆಯು ಬೆಳಗಾವಿ ಗ್ರಾಮೀಣ ಕ್ಷೇತ್ರದ ಅಭ್ಯರ್ಥಿಯ ಪರವಾಗಿ ಮತಯಾಚನೆ ಮಾಡಿದರು.



ಹಿಂಡಲಗಾದ ಮೀಸಾಳ ಲಾನನಲ್ಲಿ ಸಭೆಯಲ್ಲಿ ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿದ ಮಹಿಳೆಯರನ್ನು ಉದ್ದೇಶಿಸಿ ಮಾತನಾಡಿದರು.

ಕೊರೋನಾ ಕಾಲದಲ್ಲಿ ಪ್ರಧಾನ ಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜಿಯವರು ಎಲ್ಲ ಮಹಿಳೆಯರಿಗೆ 500 ರೂಪಾಯಿಯಂತೆ ಅವರವರ ಖಾತೆಗೆ ಬಂದು ತಲುಪಿದೆ ಹಾಗೂ ಪ್ರತಿಯೊಬ್ಬರಿಗು ಉಚಿತವಾಗಿ ಲಸಿಕೆ ನಿಡೀದರು.ಜಲಜೀವನ ಮೀಶನದಲ್ಲಿ ಪ್ರತಿ ಮನೆಗೆ ನೀರೂ ತಲುಪಿದರು .ಬರುವ ಈ ಚುಣಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾದ ಶ್ರೀ ನಾಗೇಶ್ ಮನ್ನೋಳ್ಕರ ಇವರಿಗೆ ತಮ್ಮ ಅಮುಲ್ಯ ಮತ ನಿಡಿ ಗೆಲಿಸಬೇಕಂದು ಹೇಳಿದರು. ವೇದಿಕೆಯ ಮೇಲೆ ಬೆಳಗಾವಿ ಬಿಜೆಪಿ ಗ್ರಾಮೀಣ ಜಿಲ್ಲಾಧ್ಯಕ್ಷ ಶ್ರೀ ಸಂಜಯ್ ಪಾಟೀಲ್, ಬಿಜೆಪಿ ಗ್ರಾಮೀಣ ಮಂಡಲ ಅಧ್ಯಕ್ಷ ಶ್ರೀ ಧನಂಜಯ ಜಾಧವ,ಮಾಹಾರಾಷ್ಟ್ರ ಮಹಿಳಾ ಅಧ್ಯಕ್ಷ ಶ್ರೀಮತಿ ಚಿತ್ರಾ ವಾಗ ,ಬಿಜೆಪಿ ಮುಖಂಡರು ,ಪದಾಧಿಕಾರಿಗಳು, ಕಾರ್ಯಾಕರ್ತರು ಹಾಗೂ ಸಾವಿರಾರು ಸಂಖ್ಯೆಯಲ್ಲಿ ಕ್ಷೇತ್ರದ ಮಹಿಳೆಯರು ಉಪಸ್ಥಿತರಿದ್ದರು.

## ವಿವಿಧ ಅಭಿವೃದ್ಧಿಗೆ ಸ್ಪಂದಿಸುವೆ: ನಾಗೇಶ್ ಮುನ್ನೋಳ್ಕರ್



ಬೆಳಗಾವಿ: ಸಂತಿಬಸ್ತವಾಡ ಗ್ರಾಮೀಣ ಕ್ಷೇತ್ರದಲ್ಲಿ ಇಂದು ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿ, ಕಿತ್ತೂರ ರಾಣಿ ಚನ್ನಮ್ಮಾ ,ವೀರ ಸಿಂಧುರ ಲಕ್ಷ್ಮಣ ನಮಸ್ಕರಿಸಿ ಚುಣಾವಣೆ ಪ್ರಚಾರ ಪ್ರಾರಂಭಿಸಲಾಯಿತು.

ಈ ಸಮಯದಲ್ಲಿ ಬಿಜೆಪಿ ಗ್ರಾಮೀಣ ಮಂಡಲ ಅಧ್ಯಕ್ಷ ಧನಂಜಯ ಜಾಧವ ಉಪಸ್ಥಿತರಿದ್ದರು. ರ್ಯಾಲಿಯ ಮೂಲಕ ಗ್ರಾಮಸ್ಥರನ್ನು ಭೆಟಿ ಮಾಡಲಾಯಿತು. ಹಾಗೂ ಮನೆ ಮನೆಗೆ ಹೋಗಿ ಮತಯಾಚಣೆ ಮಾಡಲಾಯಿತು.

ಗ್ರಾಮದ ಅಭಿವೃದ್ಧಿ ಸಂಕಲ್ಪ .ಕೇಂದ್ರ ಸರ್ಕಾರ ಹಾಗೂ ರಾಜ್ಯ ಬಿಜೆಪಿ ಸರ್ಕಾರದ ಎಲ್ಲ ಸೌಕರ್ಯಗಳನ್ನು ತಮಗೆಲ್ಲರಿಗೂ ತಲುಪಿಸುತ್ತೇವೆ. ಎಂದು ಬಿಜೆಪಿಯ ಕೇಂದ್ರ ಸರ್ಕಾರ ಮತ್ತು ಬಿಜೆಪಿ ರಾಜ್ಯ ಸರ್ಕಾರ ಮಾಡಿದ ಅಭಿವೃದ್ಧಿಯ ಬಗ್ಗೆ ಗ್ರಾಮಸ್ಥರಿಗೆ ನಾಗೇಶ ಮುನ್ನೋಳ್ಕರ ತಿಳಿಸಿದರು.

ಈ ಸಮಯದಲ್ಲಿ ಗ್ರಾಮಸ್ಥರಿಂದ ಬಿಜೆಪಿಯ ಅಭ್ಯರ್ಥಿ ನಾಗೇಶ್ ಮನ್ನೋಳ್ಕರ ಇವರಿಗೆ ಬೆಂಬಲ ನೀಡುತ್ತೇವೆಂದು ಮತದಾರರು ಹೇಳಿದರು.

## ಡಿ.ಕೆ.ಶಿವಕುಮಾರ್ ವಿರುದ್ಧ ಯತ್ನಾಳ್ ವಾಗ್ದಾಳಿ

### ಲಕ್ಷ್ಮಣ ಸವದಿ ವಿರುದ್ಧವೂ ಕಿಡಿ ಕಾರಿದ ಬಿಜೆಪಿ ಶಾಸಕ

ಬೆಳಗಾವಿ: ಬಿಜೆಪಿ ಲಿಂಗಾಯತರಿಗೆ ಎಂದಿಗೂ ಮೋಸ ಮಾಡಿಲ್ಲ. ಸೋತ ಲಿಂಗಾಯತರಿಗೆ ದೊಡ್ಡ ಸ್ಥಾನ ಮಾನ ನೀಡಿದೆ. ಅವರು ಕಾಂಗ್ರೆಸ್ ಗೆ ಹೋದರೆ ಯಾವುದೇ ಪ್ರಭಾವ ನಮ್ಮ ಪಕ್ಷಕ್ಕೆ ಬಿರುವುದಿಲ್ಲ ಎಂದು ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು.



ನಗರದ ಬಿಜೆಪಿ ಕಚೇರಿಯಲ್ಲಿ ಕರೆಯಲಾದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಯತ್ನಾಳ್, ಜಗದೀಶ್ ಶೆಟ್ಟರ್ ಅವರಿಗೆ ಬಿಜೆಪಿಯಿಂದ ಏನು ಅನ್ಯಾಯವಾಗಿದೆ. ಅಲ್ಲದೆ ಲಕ್ಷ್ಮಣ ಸವದಿಗೂ ಅನ್ಯಾಯ ಮಾಡಿಲ್ಲ. ಮಹೇಶ ಕುಮಟಳ್ಳಿ ಅವರಿಗೆ ಅನ್ಯಾಯವಾಗಿದೆ. ಕಾರಣ ಕಾಂಗ್ರೆಸ್ ಬಿಟ್ಟು ಬಿಜೆಪಿಗೆ ಬಂದ ಎಲ್ಲರಿಗೂ ಸಚಿವ ಸ್ಥಾನ ಮಾಡುವುದಾಗಿ ಭರವಸೆ ನೀಡಿದ್ದರು. ಆದರೆ ಅವರಿಗೆ ನೀಡಲಿಲ್ಲ. ಲಕ್ಷ್ಮಣ ಸವದಿ ಅವರು ಸೋತಿದ್ದರೂ ಡಿಸಿಎಂ ಆಗಿದ್ದು ಮಹೇಶ ಕುಮಟಳ್ಳಿಯಿಂದ ಎಂದು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದರು.

ಕಾಂಗ್ರೆಸ್ ಅಧ್ಯಕ್ಷರೇ ಗೂಂಡಾ ಇದ್ದಾರೆ ಎಂದು ಡಿ.ಕೆ.ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆಸಿದ ಯತ್ನಾಳ್, ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ದೂರು ನೀಡಿರುವ ಅವರ ನಡುವಳಿಕೆ ನೋಡಿದರೆ ಈಗಲೇ ಜನರಿಗೆ ಭಯದ ವಾತಾವರಣ ಇದೆ ಎಂದು ವಾಗ್ದಾಳಿ ನಡೆಸಿದರು.

ಡಿ.ಕೆ.ಶಿವಕುಮಾರ ಅವರಿಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ. ಅವರು ಜೈಲಿಗೆ ಹೋಗಿ ಬಂದಿದ್ದು ಸ್ವಾತಂತ್ರ್ಯ ಹೋರಾಟ ಮಾಡಿಯೇ ಅಥವಾ ಭ್ರಷ್ಟಾಚಾರ ಮಾಡಿಯೇ? ಎಂದು ಹರಿಹಾಯ್ದರು.

ಇದೇ ವೇಳೆ ಸತೀಶ್ ಜಾರಕಿಹೊಳಿ ವಿರುದ್ಧವೂ ಕಿಡಿಕಾರಿದ ಅವರು, ಯಮಕನಮರಡಿಯಲ್ಲಿರುವ ಶಾಸಕರಿಗೆ ಹಿಂದೂ ಎಂದರೆ ಅಶ್ಲೀಲ ಪದ ಎನ್ನುವ ಅವರು, ಈ ಉದ್ದುದ್ದ ನಾಮ ಬರೆದುಕೊಂಡು ತಿರುಗಾಡುತ್ತಿದ್ದಾರೆ. ಹಿಂದೂ ಧರ್ಮದ ಬಗ್ಗೆ ಟೀಕೆ ಮಾಡಿರುವ ವ್ಯಕ್ತಿಗೆ ಈ ಬಾರಿ ಮತದಾರರು ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಲಿಂಗಾಯತ ನಾಯಕರು ಬಿಜೆಪಿ ಬಿಟ್ಟು ಹೋಗಲು ಬಿ.ಎಲ್.ಸಂತೋಷ ದಬ್ಬಾಳಿಕೆಯಿಂದ ಅಂತಹ ಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಲಕ್ಷ್ಮಣ ಸವದಿ ಆರೋಪಿಸಿರುವ ಬಗ್ಗೆ ಪ್ರತಿಕ್ರಿಯಿಸಿ, ಲಕ್ಷ್ಮಣ ಸವದಿಗೆ ಉಪಮುಖ್ಯಮಂತ್ರಿ ಮಾಡಿದ್ದೆ ಬಿ.ಎಲ್.ಸಂತೋಷ ಅವರು ಎಂದರು.

ಕಳೆದ ಎರಡೂ ದಿನದಿಂದ ಬೆಳಗಾವಿಯಲ್ಲಿ ಬಿಜೆಪಿ ಅಭ್ಯರ್ಥಿಗಳ ಪರವಾಗಿ ಪ್ರಚಾರ ನಡೆಸುತ್ತಿದ್ದೇನೆ. ಕಳೆದ ಬಾರಿಗಿಂತ ಈ ಬಾರಿ ಗಣನೀಯವಾಗಿ ನಮ್ಮ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದರು.

ಬಿಜೆಪಿ ಸರಕಾರ ಎಲ್ಲ ಸಮುದಾಯಕ್ಕೆ ಮೀಸಲಾತಿ ನೀಡಿದೆ. ಮೊದಲು ವಿಪಕ್ಷಗಳು ಬಿಜೆಪಿ ಎಂದರೆ ದಲಿತ ವಿರೋಧಿ ಎಂದು ಬಿಂಬಿಸುತ್ತಿದ್ದವು. ಆದರೆ ಎಲ್ಲ ಸಮುದಾಯಕ್ಕೆ ಬಿಜೆಪಿ ಸರಕಾರ ಮೀಸಲಾತಿ ನೀಡಿ ಎಲ್ಲ ಸಮುದಾಯದವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುವ ಕೆಲಸ ಮಾಡಿದೆ ಎಂದರು.

ಬಿಜೆಪಿ ರಾಜ್ಯ ವಕ್ತಾರ ಎಂ.ಬಿ.ಜೀರಲಿ, ಶರದ್ ಪಾಟೀಲ, ನಿತೀಶ್ ಚೌಗುಲೆ, ಎಫ್.ಎಸ್.ಸಿದ್ದನಗೌಡರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಕುಡಿಯಲು ಹಣ ಕೊಡದಿದ್ದಕ್ಕೆ ತಂದೆಯನ್ನೇ ಕೊಂದ ಪಾಪಿ ಮಗ

ಬೆಂಗಳೂರು: ಮದ್ಯಪಾನ ಮಾಡಲು ಹಣ ಕೊಡಲಿಲ್ಲ ಅನ್ನೋ ಕಾರಣಕ್ಕೆ ಮಗನೇ ತಂದೆಯನ್ನು ಕೊಲೆ ಮಾಡಿರುವ ಆಘಾತಕಾರಿ ಘಟನೆ ಬೆಂಗಳೂರಿನ ಗೋವಿಂದರಾಜನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಸೆಕ್ಯೂರಿಟಿ ಗಾರ್ಡ್ ಆಗಿ ಕೆಲಸ ಮಾಡುತ್ತಿದ್ದ ಬಸವರಾಜು (60) ಕೊಲೆಯಾದ ವ್ಯಕ್ತಿ, ಆಟೋ ಚಾಲಕನಾಗಿದ್ದ ಮಗ ನೀಲಾಧರ ಕೊಲೆ ಆರೋಪಿಯಾಗಿದ್ದಾನೆ. ಇಲ್ಲಿನ ಮಾರೇನಹಳ್ಳಿ ಪಿಎಸ್ ಬಡಾವಣೆಯ ಶೆಡ್‌ವೊಂದರಲ್ಲಿ ಕೊಲೆಯಾದ 15 ದಿನಗಳ ನಂತರ ಕೊಳೆತ ಸ್ಥಿತಿಯಲ್ಲಿ ಮೃತದೇಹ ಪತ್ತೆಯಾಗಿತ್ತು. ಈ ಸಂಬಂಧ ಕೇಸ್ ದಾಖಲಿಸಿಕೊಂಡಿದ್ದ ಗೋವಿಂದರಾಜನಗರ ಪೊಲೀಸರು ತನಿಖೆ ನಡೆಸಿದಾಗ ಮಗನಿಂದಲೇ ಕೊಲೆಯಾಗಿರುವುದು ಪತ್ತೆಯಾಗಿದೆ. ವಿಚಾರಣೆ ವೇಳೆ ನೀಲಾಧರ ತನ್ನ ತಂದೆ ಮದ್ಯಪಾನ ಮಾಡಲು ಹಣ ಕೊಡಲಿಲ್ಲ ಅನ್ನೋ ಕಾರಣಕ್ಕೆ ಇಟ್ಟಿಗೆಯಿಂದ ತಲೆಗೆ ಹೊಡೆದು ಕೊಲೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾನೆ.



ಭಾರತ ಚುನಾವಣಾ ಆಯೋಗದ ನಿರ್ದೇಶಕಿ, ಹಿರಿಯ ಐಎಎಸ್ ಅಧಿಕಾರಿ ಶ್ರೀಮತಿ ಶುಭ್ರ ಸಕ್ಸೆನಾ ಅವರು ಧಾರವಾಡ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ವೀಡಿಯೋ ಸಂವಾದದ ಮೂಲಕ ಬೆಳಗಾವಿ ವಿಭಾಗದ ಜಿಲ್ಲಾ ಚುನಾವಣಾ ಅಧಿಕಾರಿಗಳ ಮತ್ತು ಹಿರಿಯ ಅಧಿಕಾರಿಗಳ ಸಭೆ ಜರುಗಿಸಿ, ಚುನಾವಣಾ ಸಿದ್ದತೆಗಳನ್ನು ಪರಿಶೀಲಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089